ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೮

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ

ಗುರುವಾರ, ದಿನಾಂಕ : ೨೫ನೇ ಜುಲೈ, ೨೦೨೪

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ರಾಜ್ಯದ ಟ್ಯಾಂಕ್ ನೀರಾವರಿ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೧ (೧೦೧೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಟ್ಯಾಂಕ್ ನೀರಾವರಿ ಯೋಜನೆಯಡಿ ಒಟ್ಟು ಎಷ್ಟು ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಇರುವಂತಹ ಟ್ಯಾಂಕ್‌ಗಳಲ್ಲಿ ಎಷ್ಟು ಟ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಟ್ಯಾಂಕ್‌ಗಳು ಸ್ಥಗಿತಗೊಂಡಿವೆ ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಪ್ರಸ್ತುತ, ಹಾಳಾಗಿ ಸ್ಥಗಿತಗೊಂಡಿರುವ ಟ್ಯಾಂಕ್‌ಗಳ ದುರಸ್ತಿ ಕಾರ್ಯವು ಈಗ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ದುರಸ್ತಿ ಕಾರ್ಯವನ್ನು ಪೂರ್ಣಗೊಳಿಸಲಾಗುವುದು ;

(ಈ) ದಾವಣಗೆರೆ, ಚಿತ್ರದುರ್ಗ ಹಾಗೂ ರಾಣೆಬೆನ್ನೂರು ಈ ಮೂರು ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದೆ ; ಅವು ಈಗ ಯಾವ ಹಂತಗಳಲ್ಲಿವೆ ?

## ವಿವಿಧ ಇಲಾಖೆಯಲ್ಲಿ ಖಾಲಿಯಿರುವ ಕೆ.ಎ.ಎಸ್., ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೨ (೧೦೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಪ್ರಸ್ತುತ ಖಾಲಿಯಿರುವ ಕೆ.ಎ.ಎಸ್., ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ಒದಗಿಸುವುದು)

(ಆ) ವಿವಿಧ ಇಲಾಖೆಗಳಲ್ಲಿ ಕೆ.ಎ.ಎಸ್., ಹುದ್ದೆಗಳು ಖಾಲಿಯಿದ್ದು, ಅವುಗಳನ್ನು ಭರ್ತಿ ಮಾಡಲು ಲೋಕಸೇವಾ ಆಯೋಗಕ್ಕೆ ಸಲ್ಲಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ೨೦೨೨-೨೦೨೩ ಮತ್ತು ೨೦೨೪ನೇ ಸಾಲಿನಲ್ಲಿ ಕೆ.ಎ.ಎಸ್., ಪರೀಕ್ಷೆಗಳನ್ನು ನಡೆಸುವುದರ ಬಗ್ಗೆ ಸರ್ಕಾರದ ತೀರ್ಮಾನವೇನು ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನಡೆಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಡೆಯುತ್ತಿರುವ ಆನ್‌ಲೈನ್ ವಂಚನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೩ (೧೦೭೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆನ್‌ಲೈನ್ ವಂಚನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರವಾಗಿ ನೀಡುವುದು)

(ಇ) ಸದರಿ ನಾಲ್ಕು ವರ್ಷಗಳಲ್ಲಿ ನಡೆದಿರುವ ಆನ್‌ಲೈನ್ ವಂಚನೆಗಳಲ್ಲಿ ಅತಿ ಹೆಚ್ಚು ಪ್ರಕರಣಗಳು ರಾಜಧಾನಿ ಬೆಂಗಳೂರಿನಲ್ಲಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಸದರಿ ಆನ್‌ಲೈನ್ ವಂಚನೆಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕಠಿಣ ಕ್ರಮಗಳೇನು ? (ವಿವರವಾಗಿ ನೀಡುವುದು)

## ೨೦೨೨-೨೩ರ ಆರ್ಥಿಕ ವರ್ಷದಲ್ಲಿ ರಾಜ್ಯದ ವಿವಿಧ ನಿಗಮ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೮೯೪ (೧೧೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೨-೨೩ರ ಆರ್ಥಿಕ ವರ್ಷದಲ್ಲಿ ರಾಜ್ಯದ ವಿವಿಧ ನಿಗಮ ಮಂಡಳಿಗಳಿಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ;

(ಆ) ಈ ಪೈಕಿ ವೆಚ್ಚವಾಗದೆ ಉಳಿದ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಕಳೆದ ಅಧಿವೇಶನದಲ್ಲಿ ಮಹಾಲೇಖಪಾಲರ ವರದಿಯನ್ವಯ ಯಾವುದೇ ಅನುದಾನ ಉಳಿಕೆಯಾಗಿರುವುದಿಲ್ಲ ಎಂದು ಸರ್ಕಾರ ತಿಳಿಸಿದ್ದು, ನಿಜವೇ ?

## ಸರ್ಕಾರದ ಗ್ಯಾರಂಟಿ ಯೋಜನೆಗಳ ಆರ್ಥಿಕ ಸ್ಥಿತಿಗತಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೯೫ (೧೧೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಗ್ಯಾರಂಟಿ ಯೋಜನೆಗಳಿಗಾಗಿ ಕಳೆದ ಒಂದು ವರ್ಷದ ಅವಧಿಯಲ್ಲಿ ಆರ್ಥಿಕ ಇಲಾಖೆಯಿಂದ ಬಿಡುಗಡೆಗೊಳಿಸಿದ ಅನುದಾನವೆಷ್ಟು ; (ಪ್ರತಿ ತಿಂಗಳ ಮಾಹಿತಿ ಒದಗಿಸುವುದು)

(ಆ) ಯಾವ ಯಾವ ಗ್ಯಾರಂಟಿ ಯೋಜನೆಗಳಿಗೆ ಸಕಾಲದಲ್ಲಿ ಹಣ

ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ ; ಅದಕ್ಕೆ ಕಾರಣಗಳೇನು ;

(ಇ) ಹಣ ಬಿಡುಗಡೆ ಮಾಡಲು ಹಣಕಾಸಿನ ಕೊರತೆ ಇದೆಯೇ ;

(ಈ) ಇದ್ದಲ್ಲಿ, ಈ ಯೋಜನೆಗಳ ಸ್ಥಿತಿಗತಿಗಳೇನು ?

## ಬೆಂಗಳೂರಿನ ವಿಭಜನೆಯ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೮೯೬ (೧೧೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಬೃಹತ್ ಮಹಾನಗರ ಪಾಲಿಕೆಯನ್ನು ಐದು ಪಾಲಿಕೆಯನ್ನಾಗಿ ವಿಭಜಿಸಲು ಮುಂದಾಗಿರುವುದು ನಿಜವೇ ;

(ಆ) ಸರ್ಕಾರ ಬೆಂಗಳೂರಿನ ಅಭಿವೃದ್ಧಿಗಾಗಿ ವಿಭಜಿಸುತ್ತಿದೆಯೇ ; ಅಥವಾ ಆದಾಯಕ್ಕಾಗಿ ವಿಭಜಿಸುತ್ತಿದೆಯೇ ;

(ಇ) ಯಾರ ವರದಿ ಅಥವಾ ಶಿಫಾರಸ್ಸಿನ ಮೇಲೆ ಬೆಂಗಳೂರನ್ನು ವಿಭಜಿಸಲು ಮುಂದಾಗಿದೆ ? (ವಿವರಗಳನ್ನು ಒದಗಿಸುವುದು)

## ಭಾರಿ ಮತ್ತು ಮಧ್ಯಮ ನೀರಾವರಿ ಯೋಜನೆಗಳಿಗೆ ಖರ್ಚು ಮಾಡಿರುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೭ (೧೧೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರಿ ಮತ್ತು ಮಧ್ಯಮ ನೀರಾವರಿಗೆ ೨೦೨೧ ರಿಂದ ೨೦೨೪ನೇ ಸಾಲಿನವರೆಗೆ ಖರ್ಚು ಮಾಡಿದ ಮೊತ್ತವೆಷ್ಟು ;

(ಆ) ೨೦೨೪-೨೫ನೇ ಸಾಲಿನಲ್ಲಿ ನಿಗದಿ ಮಾಡಿದ ಮೊತ್ತವೆಷ್ಟು; ೩೧.೦೬.೨೦೨೪ ರವರೆಗೆ ಯೋಜನೆವಾರು ಖರ್ಚು ಮಾಡಿದ ಮೊತ್ತವೆಷ್ಟು ?

## ನಗರಗಳಲ್ಲಿನ ಸಂಚಾರ ದಟ್ಟಣೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೮ (೧೧೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಸ್ತೆಯ ಎರಡು ಬದಿ ವಾಹನ ನಿಲುಗಡೆ, ರಸ್ತೆ ದುರಸ್ತಿ, ರಸ್ತೆ ಬದಿ ವ್ಯಾಪಾರ ಸೇರಿದಂತೆ ಇತರ ಕಾರಣಗಳಿಂದ ಬೆಂಗಳೂರು ನಗರದಲ್ಲಿ ದಿನೇ ದಿನೇ ಸಂಚಾರ ದಟ್ಟಣೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸುಗಮ ಸಂಚಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸೂಕ್ತ ಪಾರ್ಕಿಂಗ್ ಸೌಲಭ್ಯವಿಲ್ಲದೆ ಫಂಕ್ಷನ್ ಹಾಲ್ ಹಾಗೂ ವ್ಯಾಪಾರ ಮಳಿಗೆಗಳ ಸಂಖ್ಯೆ ಎಷ್ಟು ; ಇವುಗಳಿಂದ ಸಂಚಾರ ದಟ್ಟಣೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸುಗಮ ಸಂಚಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ೭ನೇ ವೇತನ ಜಾರಿ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೮೯೯ (೧೦೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೭ನೇ ವೇತನ ಆಯೋಗದ ಶಿಫಾರಸ್ಸನ್ನು ರಾಜ್ಯ ಸರ್ಕಾರದ ನೌಕರರಿಗೆ ಎಂದಿನಿಂದ ಸರ್ಕಾರ ಜಾರಿಗೆ ತರುತ್ತಿದೆ ;

(ಆ) ಈಗಾಗಲೇ ಆಗಿರುವ ವಿಳಂಬಕ್ಕೆ ಪೂರ್ವಾನ್ವಯವಾಗಿ ಆಯೋಗದ ಶಿಫಾರಸ್ಸನ್ನು ಜಾರಿಗೊಳಿಸಲಾಗುವುದೇ ; (ಮಾಹಿತಿ ಒದಗಿಸುವುದು)

(ಇ) ಈ ವಿಳಂಬ ನೀತಿಗೆ ಕಾರಣಗಳೇನು ? (ವಿವರ ಒದಗಿಸುವುದು)

## ಕಾನೂನು ಸುವ್ಯವಸ್ಥೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ ) :-**

೯೦೦ (೧೦೮೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಸೇರಿದಂತೆ ಇತರೆ ಎಲ್ಲಾ ಜಿಲ್ಲೆಗಳಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಲ್ಲಾ ಕಡೆ ದೌರ್ಜನ್ಯ, ಕೊಲೆ, ಅತ್ಯಾಚಾರದಂತಹ ಪ್ರಕರಣಗಳು ಮರುಕಳಿಸುತ್ತಿರುವುದಕ್ಕೆ ಸೂಕ್ತ ಕಾರಣಗಳನ್ನು ನೀಡುವುದು ;

(ಆ) ಇತ್ತೀಚೆಗೆ ಚಿಕ್ಕಮಗಳೂರು ಜಿಲ್ಲೆ ಮುಳ್ಳಯ್ಯನಗಿರಿಗೆ ಭೇಟಿ ನೀಡಿದ ಪ್ರವಾಸಿಗರ ಮೇಲೆ ಸ್ಥಳೀಯ ಬಾಡಿಗೆ ಜೀಪ್ ಮಾಲೀಕರು ಪ್ರವಾಸಿಗರ ಕಾರಿಗೆ ಡಿಕ್ಕಿ ಹೊಡೆದಿರುವುದು ; ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರವಾಸಿಗರಿಗೆ ರಕ್ಷಣೆ ಇಲ್ಲವೇ : ಈ ಸಂಬಂಧ ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಅನ್ಯಾಯ ಆದ ಪ್ರವಾಸಿಗರಿಗೆ ಸರ್ಕಾರದ ವತಿಯಿಂದ ಪರಿಹಾರಗಳೇನು ;

(ಇ) ಇಂತಹ ಘಟನೆಗಳಿಗೆ ಕಾನೂನಿಗೆ ಅನೇಕರು ಹೆದರದೆ ಗೌರವಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈಗಿನ ಯುವಕರು ಯಾವುದೇ ಭಯವಿಲ್ಲದೆ ವೀಲ್ಲಿಂಗ್ ಮಾಡಿಕೊಂಡು ರಸ್ತೆ ಸವಾರರಿಗೆ ತೊಂದರೆ ಉಂಟು ಮಾಡುತ್ತಿರುವುದರ ಮೇಲೆ ಕ್ರಮ ಕೈಗೊಳ್ಳುವುದಕ್ಕಿಂತ ಈ ರೀತಿ ಆಗದಂತೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಾನೂನು ವ್ಯವಸ್ಥೆಯನ್ನು ಸರಿಪಡಿಸಲು ಹಾಗೂ ಕಾನೂನಿನ ಬಗ್ಗೆ ಭಯ ಹುಟ್ಟಿಸಲು ಸರ್ಕಾರ ಸೂಕ್ತ ಮತ್ತು ಕಟ್ಟುನಿಟ್ಟಿನ ಕ್ರಮಗಳೇನಾದರೂ ಕೈಗೊಳ್ಳಲಿದೆಯೇ ?

## ಸಂಚಾರ ದಟ್ಟಣೆ ಮತ್ತು ರಸ್ತೆಗುಂಡಿ ಸಮಸ್ಯೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ ) :-**

೬೦೧ (೧೦೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಪ್ರತಿನಿತ್ಯ ಸಂಚಾರ ದಟ್ಟಣೆಯಿಂದ ಜನ ಸಾಮಾನ್ಯರಿಗೆ ತೀರಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡ ಕ್ರಮಗಳೇನು ; ಸಂಚಾರ ದಟ್ಟಣೆ ಕಡಿಮೆ ಮಾಡಲು ಸರ್ಕಾರದ ಚಿಂತನೆಯೇನು ;

(ಆ) ಬೆಂಗಳೂರು ಸಿಟಿ ರೌಂಡ್ಸ್ ಸಂದರ್ಭದಲ್ಲಿ ಇದುವರೆವಿಗೂ ಭೇಟಿ ಮಾಡಿದ ಸ್ಥಳಗಳೆಷ್ಟು ; ಯಾವ ಯಾವ ಸ್ಥಳಗಳಲ್ಲಿ ರೌಂಡ್ಸ್ ಮಾಡಲಾಗಿದೆ ; (ಪೂರ್ತಿ ಮಾಹಿತಿ ನೀಡುವುದು)

(ಇ) ಇನ್ನೂ ಅನೇಕ ಒಳ ರಸ್ತೆ ಮತ್ತು ಮುಖ್ಯರಸ್ತೆಗಳಲ್ಲಿ ರಸ್ತೆ ಗುಂಡಿಗಳು ಹಾಗೇ ಇದ್ದು, ಗರ್ಭಿಣಿಯರಿಗೆ, ವಯೋವೃದ್ಧರಿಗೆ ಮತ್ತು ರಸ್ತೆ

ಸವಾರರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಂಪೂರ್ಣ ರಸ್ತೆಗುಂಡಿ ಮುಕ್ತ ಬೆಂಗಳೂರನ್ನಾಗಿ ಪರಿವರ್ತಿಸುವ ಇಚ್ಛೆ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಇದಕ್ಕೆ ವಿಧಿಸಿರುವ ಕಾಲಮಿತಿ ಎಷ್ಟು ; ಯಾವಾಗ ಮುಕ್ತವಾಗಲಿದೆ ?

## ಕ್ರೀಡಾ ಸಾಧಕರಿಗೆ ತವರೂರಿನ ಬಿರುದು ಸನ್ಮಾನ ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೯೦೨ (೧೦೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕ್ರೀಡಾ ಸಾಧಕರನ್ನು ಗುರುತಿಸಿ ಅವರಿಗೆ ಸನ್ಮಾನ, ಬಹುಮಾನ, ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳುವ ಪದ್ಧತಿ ರಾಜ್ಯದಲ್ಲಿ ನಡೆಯುತ್ತಿದೆಯೇ ; ಹಾಗಿದ್ದಲ್ಲಿ, ಕಳೆದ ವರ್ಷ ಮತ್ತು ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯದಿಂದ ಪ್ರತಿನಿಧಿಸಿದ ಸಾಧಕರ ಸಂಖ್ಯೆ ಎಷ್ಟು ; (ಪೂರ್ಣ ಪಟ್ಟಿ ನೀಡುವುದು)

(ಆ) ಇತ್ತೀಚೆಗೆ ಭಾರತ ತಂಡವು ಟಿ೨೦ ವಿಶ್ವಕಪ್ ಗೆದ್ದಿದ್ದು, ಅದರಲ್ಲಿ ಮುಖ್ಯ ಕೋಚ್ ಆಗಿ ಕರ್ತವ್ಯ ನಿರ್ವಹಿಸಿದ ಶ್ರೀ ರಾಹುಲ್ ಡ್ರಾವಿಡ್ ಮತ್ತು ಥ್ರೋಡೌನ್ ತಜ್ಞ ಶ್ರೀ ರಾಘವೇಂದ್ರ ರವರು ಭಾರತ ತಂಡದ ವಿಶ್ವಕಪ್ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾಕೆ ಇದುವರೆವಿಗೂ ಸದರಿ ಸಾಧಕರಿಗೆ ಒಂದು ಸನ್ಮಾನವಾಗಲಿ, ಬಹುಮಾನವಾಗಲಿ, ಅಭಿನಂಧನಾ ಕಾರ್ಯಕ್ರಮವಾಗಲಿ ಹಮ್ಮಿಕೊಳ್ಳದಿರುವುದಕ್ಕೆ ಕಾರಣಗಳೇನು ;

(ಇ) ನೆರೆ ರಾಜ್ಯಗಳಲ್ಲಿ ಈಗಾಗಲೇ ಸಂಬಂಧಪಟ್ಟ ಆಟಗಾರರನ್ನು ಕರೆದು ಸನ್ಮಾನಿಸಿ, ಅವರಿಗೆ ಗೌರವ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಮ್ಮ ರಾಜ್ಯದಲ್ಲಿ ಯಾವ ಕಾರಣಕ್ಕಾಗಿ ಕ್ರೀಡಾ ಸಾಧಕರನ್ನು ಗೌರವಿಸುವುದರಲ್ಲಿ ಮೀನಾ ಮೇಷ ಅನುಸರಿಸಲಾಗುತ್ತದೆ ;

(ಈ) ಇನ್ನು ಮೇಲಾದರೂ ಸರ್ಕಾರ ಕ್ರೀಡೆಯಲ್ಲಿ ಸಾಧನೆ ಮಾಡಿದ ಸಾಧಕರನ್ನು ಕರೆಸಿ ಸನ್ಮಾನಿಸುವುದನ್ನು ರೂಢಿಸಿಕೊಂಡು ಈ ಮೂಲಕ ಅವರಿಗೆ ಹೆಚ್ಚಿನ ಸಾಧನೆ ಮಾಡಲು ಪ್ರೋತ್ಸಾಹ ನೀಡಿದಂತಾಗುವುದಿಲ್ಲವೇ ?

## ೭ನೇ ವೇತನ ಜಾರಿಗೊಳಿಸುವ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ ) :-**

೯೦೩ (೧೦೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಬಹುದಿನಗಳ ಬೇಡಿಕೆಯಾದ ನೌಕರರ ೭ನೇ ವೇತನ ಆಯೋಗ ಜಾರಿಗೊಳಿಸುವುದು ವಿಳಂಬವಾಗುತ್ತಿರುವುದರಿಂದ ಸರ್ಕಾರಿ ನೌಕರರಿಗೆ ನಿರಾಶೆಯಾಗುವುದಿಲ್ಲವೇ ;

(ಆ) ಸರ್ಕಾರಿ ನೌಕರರ ಬೇಡಿಕೆಯನ್ನು ಯಾವಾಗ ಈಡೇರಿಸಲಾಗುವುದು; ಯಾವ ಕಾಲಮಿತಿಯೊಳಗೆ ಬಗೆಹರಿಸಲಾಗುವುದು ?

# ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಅಕ್ರಮ ಹಣ ವರ್ಗಾವಣೆಯ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೦೪ (೧೧೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂವಿಧಾನಬದ್ಧವಾದ ಸರ್ಕಾರದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಸೃಜನೆಯಾಗಿರುವ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಕೋಟಿಗಟ್ಟಲೆ ಅಕ್ರಮ ಹಣ ವರ್ಗಾವಣೆಯ ಬಹುದೊಡ್ಡ ಹಗರಣ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ನಿಗಮದಲ್ಲಿ ಎಷ್ಟು ಮೊತ್ತದ ಅಕ್ರಮ ಹಣ ವರ್ಗಾವಣೆ ಆಗಿದೆ ; ಯಾರಿಗೆ, ಯಾವ ಖಾತೆಗೆ, ಯಾವ ದಿನಾಂಕದಂದು ಎಷ್ಟು ಮೊತ್ತ ವರ್ಗಾವಣೆಯಾಗಿದೆ ; ಅಕ್ರಮವಾಗಿ ವರ್ಗಾವಣೆಯಾದ ಹಣವನ್ನು ಮರಳಿ ಪಡೆಯಲಾಗಿದೆಯೇ ; ಎಷ್ಟು ಮೊತ್ತವನ್ನು ಪಡೆಯಲಾಗಿದೆ ; ಬಾಕಿ ಉಳಿದಿರುವ ಮೊತ್ತವೆಷ್ಟು ; ಬಾಕಿ ಮೊತ್ತವನ್ನು ವಸೂಲಿ ಮಾಡಲು ತೆಗೆದುಕೊಂಡ ಕ್ರಮಗಳೇನು ; ಸರ್ಕಾರವು ಸದರಿ ಹಣವನ್ನು ಯಾವ ಉದ್ದೇಶಕ್ಕಾಗಿ ನಿಗಮಕ್ಕೆ ಪಾವತಿ ಮಾಡಿದೆ ; ಸರ್ಕಾರದ ಉದ್ದೇಶ ಈಡೇರಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಪಂಗಡದ ಜನರಿಗೆ ಅವಶ್ಯ ಅನುಕೂಲತೆಗಳನ್ನು ಕಲ್ಪಿಸಲು ನಿಗಮಕ್ಕೆ ಮೀಸಲಿಟ್ಟ ಹಣವು ವಿವಿಧ ಅಧಿಕಾರಿ ಹಾಗೂ ವ್ಯಕ್ತಿಗಳ ಹೆಸರಿಗೆ ನೇರವಾಗಿ ಕೋಟಿಗಟ್ಟಲೆ ಹಣ ವರ್ಗಾವಣೆ ಆಗಿರುವುದು

ಕಂಡುಬಂದಿದ್ದು, ಈ ಬಗ್ಗೆ ದಾಖಲೆಗಳು ಬಹಿರಂಗವಾಗಿವೆಯೆ ; ಯಾವೆಲ್ಲ ಕಾಣದ ಕೈಗಳು ಇವುಗಳ ಹಿಂದೆ ಇವೆ ; ಅಗತ್ಯ ತನಿಖೆಯನ್ನು ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಈ ಪ್ರಕರಣದಲ್ಲಿ ಸರ್ಕಾರವು ತೆಗೆದುಕೊಂಡಿರುವ ನಿರ್ಧಾರಗಳೇನು ;

(ಈ) ಪ್ರಸ್ತುತ ಈ ಪ್ರಕರಣದ ತನಿಖೆಯು ಯಾವ ಹಂತದಲ್ಲಿದೆ ; ಅಕ್ರಮ ಹಣ ವರ್ಗಾವಣೆಯು ಇದೊಂದು ಅಧಿಕಾರ ದುರ್ವಿನಿಯೋಗ ಹಾಗೂ ಕಾನೂನು ಬಾಹಿರವಾದ ಕ್ರಮವಾದಂತಾಗುವುದಿಲ್ಲವೇ ; ಇದರಲ್ಲಿ ಮೇಲುಸ್ತುವಾರಿ ವಹಿಸುತ್ತಿರುವವರ ನೈತಿಕ ಅದ:ಪತನವು ಎದ್ದು ಕಾಣಿಸಿದಂತಾಗುವುದಿಲ್ಲವೇ ; ನಿಗಮದ ಹಗರಣದಲ್ಲಿ ಇನ್ನಷ್ಟು ಪ್ರಭಾವಿಗಳ ಕೈವಾಡ ಅಡಗಿರುವ ಸಾಧ್ಯತೆ ನಿರಾಕರಿಸಲಾಗದು ಹಾಗೂ ಪಾರದರ್ಶಕ ತನಿಖೆಯನ್ನು ಬಿಗಿಗೊಳಿಸಿ ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಬೇಕೆಂಬ ವಿಷಯದಲ್ಲಿ ಸರ್ಕಾರವು ಯಾವ ನಿರ್ಧಾರವನ್ನು ತೆಗೆದುಕೊಂಡಿದೆ ?

## ಐಎಎಸ್, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳ ಹುದ್ದೆಗಳ ವಿವರ ಕುರಿತು

**ಶ್ರೀ ಛಲವಾದಿ ಟಿ. ನಾರಾಯಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೯೦೫ (೧೧೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದಲ್ಲಿ ಎಸಿಎಸ್, ಡಿಜಿ ಮಾತ್ರ ಐಜಿಪಿ, ಡಿಜಿಪಿ, ಎಡಿಜಿಪಿ, ಪಿಸಿಸಿಎಫ್ ಮತ್ತು ಎಪಿಸಿಸಿಎಫ್ ಗಳಿಗೆ ಸಂಬಂಧಿಸಿದಂತೆ ಮಂಜೂರಾಗಿರುವ ಮತ್ತು ವಾಸ್ತವಿಕ ಹುದ್ದೆಗಳ

ಸಂಖ್ಯೆಯನ್ನು ಒದಗಿಸಿ; ಜೊತೆಗೆ ಹೆಚ್ಚುವರಿ ಹುದ್ದೆಗಳನ್ನು ಯಾವ ನಿಯಮದ ಅಡಿಯಲ್ಲಿ ಸೃಜಿಸಲಾಗಿದೆ ಎಂಬುದನ್ನು ಸಹ ತಿಳಿಸಿ ;

(ಆ) ಒಂದ್ದಕ್ಕಿಂತ ಹೆಚ್ಚು ಹುದ್ದೆಯನ್ನು ಹೊಂದಿರುವ ಐಎಎಸ್, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳ ಸಂಖ್ಯೆ ಅವರ ಅಧಿಕಾರಾವಧಿ ಮತ್ತು ಈ ರೀತಿಯಾಗಿ ಒಂದಕ್ಕಿಂತ ಹೆಚ್ಚಿನ ನೇಮಕಾತಿಗಳನ್ನು ನಿಯಂತ್ರಿಸುವ ನಿಯಮಗಳ ವಿವರಗಳನ್ನು ಒದಗಿಸಿ ;

(ಇ) ಐಎಎಸ್, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳಿಗಾಗಿ ಸೃಜಿಸಲಾದ ಕೇಡರ್ ಹೊರಗಿನ ಹುದ್ದೆಗಳ ಸಂಖ್ಯೆಯನ್ನು ಮತ್ತು ಆ ಹುದ್ದೆಗಳು ಅಸ್ತಿತ್ವದಲ್ಲಿದ್ದ ಅವಧಿಯ ವಿವರಗಳನ್ನು ಒದಗಿಸಿ ;

(ಈ) ಕರ್ನಾಟಕದಿಂದ ಕೇಂದ್ರ ಸರ್ಕಾರದ ಸೇವೆಗೆ ಪ್ರತಿನಿಯೋಜನೆಯ ಮೇಲೆ ತೆರಳಲು ಮಿಸಲಿರಿಸಿದ ಐಎಎಸ್, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳ ಸಂಖ್ಯೆ ಎಷ್ಟು ಮತ್ತು ಪ್ರತಿನಿಯೋಜಿಸಿರುವ ಅಧಿಕಾರಿಗಳ ವಾಸ್ತವಿಕ ಸಂಖ್ಯೆ ಎಷ್ಟು? (ವಿವರಣೆಗಳನ್ನು ಒದಗಿಸುವುದು)

## ಯೋಜನೆಗಳ ಪ್ರಚಾರಕ್ಕೆ ಮಾಡಿದ ಜಾಹೀರಾತು ವೆಚ್ಚದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೯೦೬ (೧೧೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ಸಾಧನೆ ಮತ್ತು ಯೋಜನೆಗಳ ಕುರಿತಾದ ಮಾಹಿತಿಯನ್ನು ಪ್ರಚಾರ ಮಾಡಲು ೨೦೨೩-೨೪ ರಿಂದ ಇಲ್ಲಿಯವರೆಗೂ ಮಾಡಿದ ವೆಚ್ಚವೆಷ್ಟು ; (ಯೋಜನೆವಾರು ಮಾಹಿತಿ ನೀಡುವುದು)

(ಆ) ೨೦೨೩-೨೪ನೇ ಸಾಲಿನಲ್ಲಿ ಬಸ್ ಬ್ರ್ಯಾಂಡಿಗ್ ಮೂಲಕ ಯೋಜನೆಗಳ ಪ್ರಚಾರ ಮಾಡಲು ಮೀಸಲಿಟ್ಟ ಅನುದಾನವೆಷ್ಟು ಮತ್ತು ವೆಚ್ಚ ಮಾಡಿದ ಅನುದಾನವೆಷ್ಟು ;

(ಇ) ಯಾವ ಯಾವ ಏಜೆನ್ಸಿಗಳಿಗೆ ಬಸ್ ನಿಲ್ದಾಣಗಳಲ್ಲಿ ಪ್ರಚಾರ ಮಾಡಲು ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಏಜೆನ್ಸಿವಾರು ವಿವರ ನೀಡುವುದು)

(ಈ) ಸದರಿ ಏಜೆನ್ಸಿಗಳಿಗೆ ಕಾರ್ಯಾದೇಶ ನೀಡಲು ಮತ್ತು ಅನುದಾನ ಬಿಡುಗಡೆ ಮಾಡಲು ಕೆ.ಟಿ.ಪಿ.ಪಿ ನಿಯಮ ಪಾಲಿಸಲಾಗಿತ್ತೇ ? (ಪ್ರಕ್ರಿಯೆಯ ಸಂಪೂರ್ಣ ದಾಖಲೆಗಳನ್ನು ನೀಡುವುದು)

## ಬಂದೋಬಸ್ತ್‌ಗೆ ನಿಯೋಜನೆ ಹೊಂದಿದ ಪೋಲೀಸರಿಗೆ ಸೂಕ್ತ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೯೦೭ (೧೧೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಂದೋಬಸ್ತ್‌ಗೆ ನಿಯೋಜನೆ ಹೊಂದಿದ ಪೋಲೀಸರಿಗೆ ನೀಡುವ ದಿನ ಭತ್ಯೆ ಎಷ್ಟು ; ಸದರಿ ಮೊತ್ತವನ್ನು ಯಾವಾಗ ನಿಗದಿಗೊಳಿಸಲಾಗಿದೆ ; ಎಷ್ಟು ಅವಧಿಗೆ ಭತ್ಯೆಯುನ್ನು ನೀಡಲಾಗುತ್ತದೆ ;

(ಆ) ದಿನ ಭತ್ಯೆಗೆ ಅರ್ಹರಿರುವ ಪೋಲೀಸರಿಗೆ ಆಹಾರಭತ್ಯೆ ನೀಡಲಾಗುವುದೇ ; ದಿನ ಭತ್ಯೆಗೆ ಅರ್ಹರಿರುವವರಿಗೆ ಆಹಾರ ಭತ್ಯೆ ನೀಡಬಾರದು ಎನ್ನುವ ಆದೇಶವಿದೆಯೇ; ಇದ್ದಲ್ಲಿ, ಸದರಿ ಆದೇಶದ ಪ್ರತಿಯನ್ನು ನೀಡುವುದು ;

(ಇ) ಕೆಲವು ಸ್ಥಳಗಳಲ್ಲಿ ಉಪಹಾರ ದೊರೆಯದ ಕಾರಣ ಇಲಾಖೆಯ ವತಿಯಿಂದ ಊಟದ ಜೊತೆಗೆ ದಿನ ಭತ್ಯೆಯನ್ನು ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಬಂದೋಬಸ್ತ್ ಕರ್ತವ್ಯಗಳಿಗೆ ನಿಯೋಜನೆ ಹೊಂದುವ ಪೊಲೀಸರಿಗೆ ಹಲವು ಕಡೆ ಸರಿಯಾದ ಊಟ ಮತ್ತು ಇತರೆ ಮೂಲ ಸೌಕರ್ಯ ಸಿಗದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರಿಗೆ ಸರಿಯಾದ ಉಪಹಾರ ಮತ್ತು ಇತರೆ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಡಾ॥ ಶಿವರಾಮ ಕಾರಂತ ಬಡಾವಣೆಯಲ್ಲಿ ನಿವೇಶನಗಳ ದರ ನಿರ್ಧಾರದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೯೦೮ (೧೧೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ದವತಿಯಿಂದ ನಿರ್ಮಾಣ ಮಾಡುತ್ತಿರುವ ಡಾ॥ ಶಿವರಾಮ ಕಾರಂತ ಬಡಾವಣೆಯಲ್ಲಿ ರಚಿಸಿರುವ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ರೈತರಿಗೆ ವಿತರಿಸುವ ನಿವೇಶನಗಳ ಸಂಖ್ಯೆ ಎಷ್ಟು; ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಂಚಿಕೆಗೆ ಉಳಿಯುವ ನಿವೇಶನಗಳೆಷ್ಟು; (ವಿವರಗಳನ್ನು ಚದರ ಮೀಟರ್/ಅಡಿಯಲ್ಲಿ ನೀಡುವುದು)

(ಆ) ಸದರಿ ಬಡಾವಣೆ ನಿರ್ಮಾಣಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ತಗಲುವ ಒಟ್ಟು ವೆಚ್ಚವೆಷ್ಟು ;

(ಇ) ೨೦೨೩ರ ಮಂಡಳಿ ಸಭೆಯಲ್ಲಿ ಪ್ರತಿ ಚದರ ಅಡಿಗೆ ನಿಗದಿಪಡಿಸಿ, ಸರ್ಕಾರದಿಂದ ಅನುಮೋದನೆ ಪಡೆದ ದರವೆಷ್ಟು ; (ದರ ನಿಗದಿ ಆದೇಶದ ಪ್ರತಿ ಮತ್ತು ಸರ್ಕಾರದ ಅನುಮೋದನೆಯ ಪ್ರತಿಯನ್ನು ನೀಡುವುದು)

(ಈ) ೨೦೨೪ ರಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತೊಮ್ಮೆ ದರ ಪರಿಷ್ಕರಣೆ ಮಾಡಿದೆಯೇ; ಮಾಡಿದ್ದಲ್ಲಿ, ಸದರಿ ದರ ಪರಿಷ್ಕರಣೆಯ ಆದೇಶದ ಪ್ರತಿ ಮತ್ತು ಸರ್ಕಾರದ ಅನುಮೋದನೆಯ ಪ್ರತಿಯನ್ನು ನೀಡುವುದು ;

(ಉ) ಸರ್ಕಾರ ಹೊಸದಾಗಿ ನಿಗದಿಪಡಿಸಿರುವ ಬೆಲೆ ಹೆಚ್ಚಾಗಿದ್ದು, ಬಡವರು ಮತ್ತು ಮಧ್ಯಮ ವರ್ಗದವರು ಕೊಳ್ಳಲು ಸಾಧ್ಯವಾಗದಿರುವುದರಿಂದ ಬೆಲೆಯನ್ನು ಕಡಿತಗೊಳಿಸಲು ಉದ್ದೇಶಿಸಿದೆಯೇ ; ಉದ್ದೇಶಿಸಿದ್ದಲ್ಲಿ, ಎಷ್ಟು ಬೆಲೆಯನ್ನು ಕಡಿಮೆಗೊಳಿಸಲಾಗುವುದು ?

## ಭೂ ಉಪಯೋಗ ಬದಲಾವಣೆಯ ವಿಳಂಬದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೬೦೯ (೧೧೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ ರಲ್ಲಿ ಭೂ ಉಪಯೋಗ ಬದಲಾವಣೆಗಾಗಿ ಸರ್ಕಾರಕ್ಕೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಅರ್ಜಿಗಳನ್ನು ವಿಲೇ ಮಾಡಲಾಗಿದೆ ; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಭೂಮಿಯು ಹಸಿರು ವಲಯದಿಂದ ವಸತಿ, ವಾಣಿಜ್ಯ ಉದ್ದೇಶಕ್ಕೆ

ಪರಿವರ್ತನೆ ಮಾಡುವ ಪ್ರಕ್ರಿಯೆಯನ್ನು ಸರಳಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ;

(ಇ) ಭೂ ಉಪಯೋಗ ಬದಲಾವಣೆಗೆ ಬೇಕಾಗುವ ಗರಿಷ್ಠ ಕಾಲಮಿತಿ ಎಷ್ಟು; ಸಕಾಲದಲ್ಲಿ ಸದರಿ ಅರ್ಜಿಗಳು ವಿಲೇ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಕಾಲದಲ್ಲಿ ವಿಲೇ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕರ್ನಾಟಕ ಭೂ ಕಂದಾಯ ಕಾಯ್ದೆ-೧೯೬೪ರ ಸೆಕ್ಷನ್ ೯೫, ೯೬, ೯೭ರ ಪ್ರಕಾರ ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಜಮೀನುಗಳು ಕೃಷಿಯೇತರ ಚಟುವಟಿಕೆಗಳಿಗೆ ಒಳಪಡಲಿದ್ದು, ಸದರಿ ಭೂಮಿಯ ಭೂ ಉಪಯೋಗ ಬದಲಾವಣೆ ಅವಶ್ಯಕತೆಯಿದೆಯೇ ?

## ಪಿಂಚಣಿ ಸೌಲಭ್ಯ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೯೧೦ (೧೦೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಅಧಿಕಾರಿಗಳು, ನೌಕರರು, ನಿವೃತ್ತಿ ಹೊಂದಿದ ನಂತರದ ಎಷ್ಟು ಕಾಲಾವಧಿಯಲ್ಲಿ ಪಿಂಚಣಿ ಸೌಲಭ್ಯ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುತ್ತದೆ ;

(ಆ) ಸಚಿವಾಲಯದ ಎಷ್ಟು ಗ್ರೂಪ್-ಎ ಮತ್ತು ಬಿ ಅಧಿಕಾರಿಗಳ ಪಿಂಚಣಿ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಇರುತ್ತವೆ ; ಎಷ್ಟು ವರ್ಷಗಳಿಂದ ಬಾಕಿ ಇರುತ್ತವೆ ;

(ಇ) ನಿವೃತ್ತಿಯಾಗಿ ಆರು ವರ್ಷದ ನಂತರ ಸಿವಿಲ್ ಮತ್ತು ಕ್ರಿಮಿನಲ್ ದಾವೆ ಹಾಕಿದ ಪ್ರಕರಣಗಳೆಷ್ಟು ;

(ಈ) ಸರ್ಕಾರದ ಆದೇಶ ಸಂಖ್ಯೆ: FD/9/SRS/೨೦೨೩ ದಿನಾಂಕ:೧೩.೧೨.೨೦೨೩ ಇದ್ದಾಗಲೂ, ಈ ಆದೇಶದ ಪ್ರಕಾರ ನಿವೃತ್ತಿಯಾದ ೪ ವರ್ಷದ ನಂತರ ಆರ್ಥಿಕ ನಷ್ಟ ಮಾಡದ ಹಾಗೂ ಗಂಭೀರವಲ್ಲದ ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ದಾವ ಹಾಕಲು ಅವಕಾಶವಿಲ್ಲದಿದ್ದರೂ ನಿಗಧಿತ ಅವಧಿಯ ನಂತರ ನಿಯಮಬಾಹಿರವಾಗಿ ದಾವೆ ಹೂಡಿದ ಪ್ರಕರಣಗಳನ್ನು ಹಿಂಪಡೆದು ಪಿಂಚಣಿ ನೀಡಲು ಏನು ಕ್ರಮ ಕೈಗೊಳ್ಳಲಾಗುವುದು ?

## ನದಿಗಳಿಗೆ ವಿಷಕಾರಿ ತ್ಯಾಜ್ಯಗಳು ಸೇರುತ್ತಿರುವುದರಿಂದ ಆಗುತ್ತಿರುವ ತೊಂದರೆಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೯೧೧ (೧೦೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಂಗಾ ನದಿ ಹಾಗೂ ಮತ್ತಿತರ ನದಿಗಳು ಕೃಷಿ ತ್ಯಾಜ್ಯ ನಗರ ತ್ಯಾಜ್ಯಗಳಿಂದ ಮಾಲಿನ್ಯ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚಿನ ದಿನಗಳಲ್ಲಿ ತುಂಗಾ ನದಿ ನೀರಿನ ಪರೀಕ್ಷೆಗಳು ನೀರಿನಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚು ಅಲ್ಯೂಮಿನಿಯಂ ಇರುವುದನ್ನು ಖಚಿತಪಡಿಸಿದ್ದು, ಕೃಷಿಗೆ ಬಳಸುವ ಕ್ರಿಮಿನಾಶಕಗಳಲ್ಲಿರುವ ಕ್ಲೋರಿನ್, ಮಣ್ಣಿನಲ್ಲಿರುವ ಅಲ್ಯೂಮಿನಿಯಂ ಅನ್ನು ಕರಗಿಸಿ ನದಿಗೆ ಸೇರಿಸುವುದೇ ಇದಕ್ಕೆ ಕಾರಣವೆಂದು ಅಂದಾಜಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಮಾಲಿನ್ಯಗೊಂಡ ನದಿಗಳ ಕಲುಷಿತ ನೀರಿನ ಸೇವನೆಯಿಂದ ಜನರ ಆರೋಗ್ಯದ ಮೇಲೆ ಆಗುತ್ತಿರುವ ದುಷ್ಪರಿಣಾಮಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಗೃಹ ಇಲಾಖೆ ಕಾರ್ಯಾಚರಣೆಯಲ್ಲಿ ಬದಲಾವಣೆಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೯೧೨ (೧೦೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೊಲೀಸ್ ಠಾಣೆಯ ಕಛೇರಿ ನಿರ್ವಹಣೆ ಮಾಡಲು ಎಷ್ಟು ಹಣವನ್ನು (OPS Charges) ಪ್ರತಿ ತಿಂಗಳು ನೀಡಲಾಗುತ್ತಿದೆ ; ಅದನ್ನು ನಿಲ್ಲಿಸಲಾಗಿದೆಯೇ ; (ತನಿಖಾ ವೆಚ್ಚ ಹೊರತುಪಡಿಸಿ) ನಿಲ್ಲಿಸಿದ್ದಲ್ಲಿ, ಪೊಲೀಸ್ ಠಾಣೆಯ ಕಛೇರಿ ನಿರ್ವಹಣೆ ಹೇಗೆ ನಡೆಯುತ್ತಿದೆ ;

(ಆ) ಸೈಬರ್ ಪ್ರಕರಣಗಳನ್ನು ಠಾಣಾ ಮಟ್ಟದಲ್ಲಿ ಬೇಧಿಸಲು ಠಾಣೆಗಳಿಗೆ (ಸಿ.ಇ.ಎನ್. ಠಾಣೆ ಹೊರತುಪಡಿಸಿ) ಯಾವ ಯಾವ ಉಪಕರಣಗಳನ್ನು ನೀಡಲಾಗಿದೆ ;

(ಇ) ತನಿಖಾ ವೆಚ್ಚಕ್ಕೆ ಸರ್ಕಾರ ಕಳೆದ ೫ ವರ್ಷಗಳ ಅವಧಿಯಲ್ಲಿ ಎಷ್ಟು ಹಣ ನೀಡಿದೆ ; ಪ್ರತಿ ಠಾಣೆಗಳಿಗೆ ಸರಾಸರಿ ಎಷ್ಟು ಹಣ ನೀಡಲಾಗಿದೆ ; ಅಷ್ಟು ಹಣ ಈಗಿನ ಅಪರಾಧ ಪ್ರಮಾಣಕ್ಕೆ ಮತ್ತು ತನಿಖಾ ವೆಚ್ಚಕ್ಕೆ ಅನುಗುಣವಾಗಿದೆಯೇ ;

(ಈ) ಸೈಬರ್ ಪ್ರಕರಣಗಳಲ್ಲಿ ಹೊರ ರಾಜ್ಯಕ್ಕೆ ಹೋಗುವ ಅಧಿಕಾರಿ ಸಿಬ್ಬಂದಿಗಳಿಗೆ ಊಟ, ವಸತಿ ವ್ಯವಸ್ಥೆಗೆ ತಗಲುವ ವೆಚ್ಚ ನೀಡಲಾಗಿದೆಯೇ ; ಎಷ್ಟು ಹಣವನ್ನು ಕಳೆದ ೫ ವರ್ಷದಲ್ಲಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪೊಲೀಸರ ಮಾನಸಿಕ ಆರೋಗ್ಯ ಕಾಪಾಡಲು ಕ್ರಮ ಕೈಗೊಳ್ಳಲಾಗಿದೆ: ಅವರಿಗೆ ಸರಿಯಾಗಿ ರಜೆ ಸೌಲಭ್ಯ ನೀಡಲಾಗುತ್ತಿದೆಯೇ ?

## ಗೃಹ ಇಲಾಖೆಯಲ್ಲಿ ಸಿಬ್ಬಂದಿಗಳಿಗೆ ಸೌಲಭ್ಯಗಳು ದೊರಕುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೯೧೩ (೧೦೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸದಾಗಿ ಜಾರಿಗೆ ಬಂದಿರುವ ಕಾನೂನಿಗೆ ಅನುಗುಣವಾಗಿ ತನಿಖೆ ಮಾಡಲು ಎಷ್ಟು ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ ; ಮಾನವ ಹಕ್ಕುಗಳ ಉಲ್ಲಂಘನೆ ತಡೆಯಲು ಎಷ್ಟು ಬಾಡಿ ಕ್ಯಾಮರಾಗಳನ್ನು ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಈವರೆಗೆ ನೀಡಲಾಗಿದೆ ;

(ಆ) ಹೊಸ ಕಾನೂನಿನಂತೆ ವಿಡಿಯೋ ಮಾಡಲು ಬೇಕಾದ ಯಾವ ಯಾವ ಉಪಕರಣಗಳನ್ನು ಪ್ರತಿ ಠಾಣೆಗಳಿಗೆ ಈವರೆಗೆ ಎಷ್ಟು ಹಂಚಿಕೆ ಮಾಡಲಾಗಿದೆ ;

(ಇ) ಹೊಸ ಕಾನೂನಿನಂತೆ ಅಪರಾಧ ನಡೆದ ಸ್ಥಳಗಳಲ್ಲಿ ಹಲವು ತಂಡಗಳಲ್ಲಿ ತನಿಖೆ ನಡೆಸಲು ಎಷ್ಟು ಬ್ಯಾಟರಿ ಚಾಲಿತ

ಪ್ರಿಂಟರ್‌ಗಳನ್ನು ಮತ್ತು ಲ್ಯಾಪ್‌ಟಾಪ್‌ಗಳನ್ನು ಪ್ರತಿ ಠಾಣೆಗೆ ನೀಡಲಾಗಿದೆ ;

(ಈ) Hashing ಮಾಡಲು ಸಾಫ್ಟ್‌ವೇರ್ ಹಾಗೂ ಸುರಕ್ಷಿತವಾಗಿ ಡೇಟಾ ವರ್ಗಾವಣೆ ಮಾಡಲು write blocker ಎಲ್ಲಾ ಠಾಣೆಗಳಿಗೆ ಎಷ್ಟು ಪ್ರಮಾಣದಲ್ಲಿ ನೀಡಲಾಗಿದೆ ?

## ರಾಜಕಾಲುವೆಗಳು ಒತ್ತುವರಿಯಾಗಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೪ (೧೦೭೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಎಷ್ಟು ಕಿ.ಮೀ ವರೆಗೂ ರಾಜಕಾಲುವೆಗಳಿವೆ ; ರಾಜಕಾಲುವೆಯ ಉದ್ದ ಮತ್ತು ಅಗಲವನ್ನು ಪೂರ್ಣ ಪ್ರಮಾಣದಲ್ಲಿ ಅಳೆಯಲಾಗಿದೆಯೇ ;

(ಆ) ಸದರಿ ರಾಜಕಾಲುವೆಗಳಲ್ಲಿ ಒತ್ತುವರಿಯಾಗಿರುವ ಕಾಲುವೆಗಳು ಯಾವುವು ; ಅಕ್ರಮವಾಗಿ ರಾಜಕಾಲುವೆಯ ಜಾಗದಲ್ಲಿ ಕಟ್ಟಡ ಕಟ್ಟಿರುವವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಒತ್ತುವರಿಯನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದ ಜಾಗಗಳು ಯಾವುವು ; ಒತ್ತುವರಿ ತೆರವಿನ ನಂತರ ಆ ಸ್ಥಳದಲ್ಲಿ ಯಾವ ಕಾಮಗಾರಿಯನ್ನು ಮಾಡಲಾಗಿದೆ ;

(ಈ) ಒತ್ತುವರಿ ತೆರವಿನ ಕಾರ್ಯಕ್ರಮವನ್ನು ಎಷ್ಟು ವರ್ಷಗಳಿಂದ ಕಾರ್ಯರೂಪಕ್ಕೆ ತರಲಾಗಿದೆ ; ತೆರವು ಕಾರ್ಯದಲ್ಲಿ ಎಷ್ಟು ಅಪಾರ್ಟ್‌ಮೆಂಟ್, ಮಾಲ್,ಮನೆಗಳನ್ನು ತೆರವುಗೊಳಿಸಲಾಗಿದೆ ? (ಇದರ ಪೂರ್ಣ ವಿವರಗಳನ್ನು ಒದಗಿಸುವುದು)

## ಕೆರೆಯ ಜಾಗವನ್ನು ಭೂ ಕಬಳಿಕೆ ಮಾಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೫ (೧೦೭೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರದಲ್ಲಿರುವ ಒಟ್ಟು ಎಷ್ಟು ಕೆರೆಗಳು ಸಾರ್ವಜನಿಕರ ಬಳಕೆಗೆ ಯೋಗ್ಯವಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಇತಿಹಾಸದ ಪ್ರಕಾರ ಎಷ್ಟು ಕೆರೆಗಳು ಜೀವಂತವಾಗಿದ್ದವು ; ಅವುಗಳಲ್ಲಿ ಪ್ರಸ್ತುತ ಎಷ್ಟು ಕೆರೆಗಳು ಸಾರ್ವಜನಿಕರ ಉಪಯೋಗಕ್ಕೆ ಯೋಗ್ಯವಾಗಿದೆ ;

(ಇ) ಬಹುತೇಕ ಕೆರೆಗಳು ಕೆಲವು ಭೂಕಬಳಿಕೆದಾರರ ಸ್ವತ್ತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಕೆರೆಗಳನ್ನು ಕಬಳಿಸಿರುವವರು ಯಾರು. ಆ ಸ್ಥಳದಲ್ಲಿ ಪ್ರಸ್ತುತ ಯಾವ ಕಾರ್ಯಚಟುವಟಿಕೆ ನಡೆಯುತ್ತಿದೆ ;

(ಈ) ಕೆರೆಗಳನ್ನು ಕಬಳಿಸಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; ಅವರಿಗೆ ಯಾವ ಶಿಕ್ಷೆಯನ್ನು ನೀಡಲಾಗಿದೆ ; ಆ ಕೆರೆಯ ಆಸ್ತಿಯನ್ನು ಮರಳಿ ಸರ್ಕಾರದ ವಶಕ್ಕೆ ಪಡೆಯಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಉ) ಕೆರೆಗಳಿಗೆ ನೀರು ಹರಿದು ಬರುವ ಮಾರ್ಗಗಳು ಕಡಿತಗೊಂಡಿರುವುದರಿಂದ ಇರುವಂತಹ ಕೆರೆಗಳಿಗೆ ನೀರು ಹರಿದುಬರಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಊ) ಕಳೆದ ೫ ವರ್ಷದಲ್ಲಿ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ವೆಚ್ಚ ಮಾಡಿದ ಅನುದಾನವೆಷ್ಟು ; (ಕಾಮಗಾರಿಗಳ ವಿವರಗಳನ್ನು ನೀಡುವುದು)

(ಋ) ಕೆರೆ ಅಭಿವೃದ್ಧಿ ಪ್ರಾಧಿಕಾರವು ಒಂದು ಸ್ವಾಯತ್ತ ಸಂಸ್ಥೆಯೇ; ಇದರ ಕಾರ್ಯಚಟುವಟಿಕೆಗಳೇನು ?

## ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾರ್ಡ್‌ಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೬ (೧೦೮೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾರ್ಡ್‌ಗಳ ಸಂಖ್ಯೆಯೆಷ್ಟು ; ಇರುವಂತಹ ವಾರ್ಡ್‌ಗಳಲ್ಲಿ ಪಾಲಿಕೆಯ ಸ್ವಂತ ಆಸ್ತಿ ಯಾವ ಪ್ರಮಾಣದಲ್ಲಿದೆ ; (ಪೂರ್ಣ ವಿವರ ನೀಡುವುದು)

(ಆ) ಪಾಲಿಕೆಯ ಆಸ್ತಿಯಾದ ಕನ್ಸರ್ವೆನ್ಸಿ ಲೈನ್ (ಖಾಲಿ ಜಾಗದ) ಸಂಖ್ಯೆಯೆಷ್ಟು ; (ವಿವರಗಳನ್ನು ಒದಗಿಸುವುದು)

(ಇ) ಬಹಳಷ್ಟು ವರ್ಷಗಳಿಂದ ಖಾಲಿ ಇದ್ದ ಪಾಲಿಕೆಯ ಕನ್ಸರ್ವೆನ್ಸಿ ಲೈನ್ ಆಸ್ತಿಯನ್ನು ಈಗಾಗಲೇ ಬಹಳಷ್ಟು ಜನರು ಕಬಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ;

(ಈ) ಪಾಲಿಕೆಯ ಆಸ್ತಿಯನ್ನು ಕಬಳಿಸಿರುವ ಬಗ್ಗೆ ಸಾರ್ವಜನಿಕರಿಂದ ಪಾಲಿಕೆಗೆ ಯಾವುದಾದರೂ ದೂರು ಬಂದಿದೆಯೇ ; ಬಂದಿದ್ದಲ್ಲಿ,

ಅದರ ಪೂರ್ಣ ವಿವರಗಳನ್ನು ಒದಗಿಸುವುದು; ದೂರುಗಳು ಬಂದಿದ್ದರೂ ಸಹ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರಾರಂಭಗೊಂಡ ಅವಧಿಯಿಂದ ಒಟ್ಟು ಪಾಲಿಕೆಯ ಆಸ್ತಿಯನ್ನು ಎಷ್ಟು ಜನರಿಗೆ ಗುತ್ತಿಗೆ ನೀಡಲಾಗಿದೆ ; ಇದರಿಂದ ಎಷ್ಟು ಆದಾಯ ಬರುತ್ತಿದೆ ; ಎಷ್ಟು ವರ್ಷಕ್ಕೆ ಜಾಗವನ್ನು ಗುತ್ತಿಗೆಗೆ ನೀಡಲಾಗಿದೆ ; ಗುತ್ತಿಗೆ ಅವಧಿ ಮುಗಿದಿದ್ದರೂ ಸಹ ಪಾಲಿಕೆ ಆಸ್ತಿಯನ್ನು ತನ್ನ ವಶಕ್ಕೆ ಪಡೆದುಕೊಳ್ಳದಿರಲು ಕಾರಣವೇನು ; ಪಾಲಿಕೆ ಕನ್ಸರ್ವೆನ್ಸಿ ಲೈನ್ ಆಸ್ತಿ ಹಾಗೂ ಇನ್ನಿತರ ಆಸ್ತಿಯ ವಿವರ ಹಾಗೂ ಅಂಕಿ ಅಂಶಗಳ ವಿವರಗಳನ್ನು ಒದಗಿಸುವುದು ;

(ಊ) ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಛೇರಿಗಳು ಎಷ್ಟು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಡೆಸುತ್ತಿದೆ ; ಇದಕ್ಕೆ ಪಾಲಿಕೆಯಿಂದ ಬಾಡಿಗೆಗಾಗಿ ವೆಚ್ಚವಾಗುತ್ತಿರುವ ಮೊತ್ತ ಎಷ್ಟು?

## ಕೋಲಾರದಲ್ಲಿರುವ ಬಹುತೇಕ ಕೆರೆಗಳು ಮುಚ್ಚಿರುವುದರ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೭ (೧೦೭೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; ಆ ಕೆರೆಗಳಲ್ಲಿ ಎಷ್ಟು ಕೆರೆಗಳು ಭರ್ತಿಯಾಗಿವೆ ; ಎಷ್ಟು ಕೆರೆಗಳು ಖಾಲಿ ಇವೆ ;

(ಆ) ಬಹುತೇಕ ಕೆರೆಗಳು ಒತ್ತುವರಿಯಾಗಿ ಕೆರೆಗಳು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಜಿಲ್ಲೆಗಳಲ್ಲಿರುವ ಕೆರೆ ಸಂರಕ್ಷಣೆಗೆ ಸರ್ಕಾರ ಯಾವ ಯೋಜನೆಯನ್ನು ರೂಪಿಸಿದೆ ;

(ಈ) ಕೆರೆ ಅಂಗಳವನ್ನು ಒತ್ತುವರಿ ಮಾಡಿಕೊಂಡಿರುವುದರಿಂದ ರೈತರಿಗೆ ನೀರಿನ ಸಮಸ್ಯೆ ಹಾಗೂ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟಾಗಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆಯೇ ?

## ಸೈಬರ್ ವಂಚನೆ ಪ್ರಕರಣ ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೮ (೧೦೮೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷದ ಅವಧಿಯಲ್ಲಿ ಆನ್‌ಲೈನ್ ಮೂಲಕ ಉದ್ಯೋಗ ಕೊಡಿಸುವ ಹಾಗೂ ವಿವಿಧ ಆಮಿಷವೊಡ್ಡಿ ವಂಚನೆ ಮಾಡಿರುವ ಪ್ರಕರಣಗಳ ಸಂಖ್ಯೆಯೆಷ್ಟು ;

(ಆ) ಸೈಬರ್ ವಂಚನೆ ಪ್ರಕರಣಗಳು ಇತ್ತೀಚೆಗೆ ಹೆಚ್ಚಾಗಿ ನಡೆಯುತ್ತಿದ್ದು, ಈ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಇ) ವಂಚನೆಗೊಳಗಾಗಿರುವವರು ಇದುವರೆಗೂ ಎಷ್ಟು ಹಣವನ್ನು ಕಳೆದುಕೊಂಡಿರುತ್ತಾರೆ ಹಾಗೂ ಎಷ್ಟು ಸಂತ್ರಸ್ಥರಿಗೆ ಮರಳಿ ಹಣವನ್ನು ಹಿಂತಿರುಗಿಸಲಾಗಿದೆ ;

(ಈ) ಇಂತಹ ಪ್ರಕರಣದಡಿಯಲ್ಲಿ ಇದುವರೆಗೂ ಎಷ್ಟು ಜನರನ್ನು ಬಂಧಿಸಲಾಗಿದೆ ಹಾಗೂ ಅವರಿಗೆ ನೀಡಲಾಗಿರುವ ಶಿಕ್ಷೆಯಾದರೂ ಏನು ; ಅಪರಾಧ ನಡೆಸುತ್ತಿರುವವರು ನಮ್ಮ ದೇಶದವರೇ ಅಥವಾ ಹೊರದೇಶದವರೇ ? (ಪೂರ್ಣ ವಿವರ ಒದಗಿಸುವುದು)

## ೨೦೧೯ ರಿಂದ ಇಲ್ಲಿಯವರೆಗೆ ವಿವಿಧ ಇಲಾಖೆಗಳಿಂದ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೧೯ (೧೦೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯ರಿಂದ ಇಲ್ಲಿಯುವರೆಗೆ ವಿವಿಧ ಇಲಾಖೆಗಳಿಂದ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳು ಹೊರಡಿಸಲಾದ ನೇಮಕಾತಿ ಅಧಿಸೂಚನೆಗಳೆಷ್ಟು ; ಸದರಿ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಆ) ಸದರಿ ನೇಮಕಾತಿ ಪ್ರಕ್ರಿಯೆ ವಿಳಂಬವಾಗಲು ಕಾರಣವೇನು; ನೇಮಕಾತಿ ಪ್ರಕ್ರಿಯೆ ವಿಳಂಬದಿಂದ ಅಭ್ಯರ್ಥಿಗಳು ಆತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ನೇಮಕಾತಿ ವಿಳಂಬಕ್ಕೆ ಕಾರಣವಾಗುವ ನ್ಯಾಯಾಲಯಗಳ ಹಸ್ತಕ್ಷೇಪ ತಡೆಯಲು ಸರ್ಕಾರ ಯಾವ ಕ್ರಮಕೈಗೊಳ್ಳುತ್ತಿದೆ ; (ವಿವರ ನೀಡುವುದು)

(ಇ) ಪದವೀಧರ ಪ್ರಾಥಮಿಕ ಶಾಲೆ ಶಿಕ್ಷಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಅಂಶವನ್ನು ಪ್ರಶ್ನಿಸಿ ಸುಪ್ರಿಂ ಕೋರ್ಟ್‌ನಲ್ಲಿ ದಾವ ಹೂಡಲಾಗಿದೆ ; ಸದರಿ ಪ್ರಕರಣದಿಂದ ಎಷ್ಟು ಜನ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಿಂದ ಹೊರಗುಳಿದಿದ್ದಾರೆ ; (ವಿವರ ನೀಡುವುದು)

(ಈ) ನೇಮಕಾತಿ ಪ್ರಕ್ರಿಯೆಯಲ್ಲಿ ವಿವಾಹವಾದ ಮಹಿಳಾ ಅಭ್ಯರ್ಥಿಗಳಿಗೆ ತಂದೆ ಅಥವಾ ಗಂಡನ ಹೆಸರಿನಲ್ಲಿ ಜಾತಿ ಮತ್ತು ಆದಾಯ

ಪ್ರಮಾಣ ಪತ್ರ ಪಡೆಯುವ ಬಗ್ಗೆ ಸರ್ಕಾರದ ನಿಲುವೇನು; ಈಗ ನಡೆಯುತ್ತಿರುವ ನೇಮಕಾತಿ ಅಧಿಸೂಚನೆಗಳಲ್ಲಿ ಪತಿಯ ಹೆಸರಿನಲ್ಲಿಯೇ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯುವಂತೆ ಸೂಚನೆ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು; ಇಲ್ಲದಿದ್ದಲ್ಲಿ ಮುಂದಿನ ಅಧಿಸೂಚನೆಗಳಲ್ಲಿ ಸದರಿ ನಿರ್ದೇಶನವನ್ನು ಅಳವಡಿಸಿಕೊಳ್ಳಲು ನೇಮಕಾತಿ ಪ್ರಾಧಿಕಾರಗಳಿಗೆ ಸರ್ಕಾರ ಸೂಚಿಸುವುದೇ ? (ವಿವರ ನೀಡುವುದು)

## ಮದ್ಯಪಾನದಿಂದ ಸಮಾಜದಲ್ಲಿ ದುಷ್ಪರಿಣಾಮಗಳುಂಟಾಗುತ್ತಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೦ (೧೦೭೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ಯಪಾನದಿಂದ ಸಮಾಜದಲ್ಲಿ ದುಷ್ಪರಿಣಾಮಗಳುಂಟಾಗುತ್ತಿದ್ದು, ಹಲವಾರು ಕುಟುಂಬಗಳು ಬೀದಿಪಾಲಾಗುತ್ತಿದ್ದರೂ ಸಹ ಮದ್ಯದಂಗಡಿಗಳನ್ನು ತೆರೆಯಲು ಸರ್ಕಾರ ಅನುಮತಿ ನೀಡುತ್ತಿರುವುದು ಸರಿಯೇ ;

(ಆ) ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಎಲ್ಲೆಲ್ಲಿ ಎಷ್ಟೆಷ್ಟು ಮದ್ಯದಂಗಡಿಗಳನ್ನು ತೆರೆಯಲಾಗಿದೆ ; ಯಾವ ಆಧಾರದಲ್ಲಿ ಅನುಮತಿ ನೀಡಲಾಗುತ್ತದೆ ;

(ಇ) ರಾಜ್ಯದಲ್ಲಿ ಸಿಎಲ್–೨, ಸಿಎಲ್–೪, ಸಿಎಲ್–೬ಎ, ಸಿಎಲ್–೭, ಸಿಎಲ್–೯, ಸಿಎಲ್–೧೧ಸಿ, ಆರ್‌ವಿಬಿ ಮತ್ತು ಇತರೆ ಪರವಾನಗಿಗಳನ್ನು ನೀಡಲು ಹಾಗೂ ಪಡೆಯಲು ಅನುಸರಿಸುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಒಂದು ಪರವನಾಗಿ ಪಡೆದ ಉದ್ದಿಮೆದಾರರು ಅದೇ ಪರವಾನಗಿಯಡಿಯಲ್ಲಿ ಜಿಲ್ಲೆಯ ಬೇರೆ ಬೇರೆ ಜಾಗಗಳಲ್ಲಿ ಅಬಕಾರಿ ಮಳಿಗೆಗಳು/ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಇತರೆ ಮಳಿಗೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಉ) ಪರವಾನಗಿ ಮಂಜೂರು ಮಾಡುವ ಸಂದರ್ಭದಲ್ಲಿ ಅಧಿಕಾರಿಗಳು ಮಾನದಂಡಗಳನ್ನು ಅನುಸರಿಸದೇ ಉಲ್ಲಂಘನೆ ಮಾಡಿ ಪರವಾನಗಿ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಯಾವ ಯಾವ ಶಿಸ್ತಿನ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕರ್ನಾಟಕ ಪೊಲೀಸ್ ಇಲಾಖೆಯ ಡಿಎಸ್‌ಪಿ ಹುದ್ದೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೨೧ (೧೦೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಪೊಲೀಸ್ ಇಲಾಖೆಯಲ್ಲಿ ಮಂಜೂರಾಗಿರುವ ಡಿಎಸ್‌ಪಿ ಹುದ್ದೆಗಳೆಷ್ಟು; ಅದರಲ್ಲಿ ನೇರ ನೇಮಕಾತಿ ಮತ್ತು ಬಡ್ತಿಗೆ ಮೀಸಲಿಟ್ಟ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಡಿಎಸ್‌ಪಿ ಹಂತದ ಅಧಿಕಾರಿಗಳನ್ನು ಇತರೆ ಇಲಾಖೆಗಳಿಗೆ ನಿಯೋಜನೆ/ವರ್ಗಾವಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಡಿಎಸ್‌ಪಿ ಹುದ್ದೆಗೆ ಎಷ್ಟು ಸಲ ಬಡ್ತಿ ನೀಡಲಾಗಿದೆ ; (ವಿವರ ನೀಡುವುದು)

(ಈ) ಡಿಎಸ್‌ಪಿ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿ ತಯಾರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಡಿಎಸ್‌ಪಿ ಹುದ್ದೆಗೆ ಬಡ್ತಿ ಹೊಂದಿದ್ದರೂ ಅಧಿಕಾರಿಗಳ ಜೇಷ್ಠತಾ ಪಟ್ಟಿ ತಯಾರಿಸಲು ವಿಳಂಬ ಮಾಡುತ್ತಿರಲು ಇರುವ ಕಾರಣವೇನು ? (ವಿವರ ನೀಡುವುದು)

## ಕರಾವಳಿ ಕರ್ನಾಟಕದಲ್ಲಿ ಪ್ರವಾಸೋದ್ಯಮಕ್ಕಾಗಿ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨೨ (೧೧೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಕರ್ನಾಟಕದಲ್ಲಿ ಪ್ರವಾಸೋದ್ಯಮಕ್ಕಾಗಿ ಇಲಾಖೆಯು ಕೈಗೊಂಡಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಕರಾವಳಿ ಕರ್ನಾಟಕದ ಬೀಚ್‌ಗಳ ಅಭಿವೃದ್ಧಿಗೆ "ಸಿಆರ್‌ಜಡ್" ನಿಯಮಗಳು ತೊಂದರೆಯಾಗುತ್ತಿದ್ದು, ಇದರ ತಿದ್ದುಪಡಿಗೆ ರಾಜ್ಯ ಸರ್ಕಾರ ಪ್ರಯತ್ನಿಸಿರುವುದಿಲ್ಲವೆಂದು ದೂರುಗಳಿರುವುದು ನಿಜವೇ ; (ವಿವರ ನೀಡುವುದು)

(ಇ) ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮಕ್ಕೆ ಬೆಂಬಲ ನೀಡಲು ಪಂಚತಾರ ದರ್ಜೆಯ ಹೋಟೆಲ್‌ಗಳು ಇಲ್ಲದೇ ಇರುವುದು ಸರ್ಕಾರದ ಗಮನದಲ್ಲಿದೆಯೇ ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರಾರಂಭಗೊಂಡ "ಕೋಸ್ಟಲ್ ಕರ್ನಾಟಕ ಡೆವೆಲಪ್‌ಮೆಂಟ್ ಕೌನ್ಸಿಲ್" ಇದಕ್ಕೆ ಮಾನ್ಯತೆ ನೀಡಿ ಕಾರ್ಯಕ್ರಮ ರೂಪಿಸಲು ಕೈಗೊಂಡಿರುವ ಕ್ರಮಗಳ ಕುರಿತಂತೆ ಯಾವ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಮಂಗಳೂರಿನಲ್ಲಿ ರಾಷ್ಟ್ರಮಟ್ಟದ ಕ್ರಿಕೆಟ್ ಕ್ರೀಡಾಂಗಣ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨೩ (೧೧೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ರಾಷ್ಟ್ರಮಟ್ಟದ ಕ್ರಿಕೆಟ್ ಕ್ರೀಡಾಂಗಣದ ಬಗ್ಗೆ ಸರ್ಕಾರ ಸ್ಥಳವನ್ನು ಗುರುತಿಸಿದ್ದರೂ, ಇನ್ನೂ ಕಾರ್ಯಗತಗೊಳಿಸಲು ಕ್ರಮಕೈಗೊಳ್ಳದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ಮಂಗಳೂರಿನಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕೆ ಬೇಕಾದ ಸ್ಥಳ ಮತ್ತು ಸ್ಥಾಪಿಸಲು ಬೇಕಾದ ಎಲ್ಲಾ ಮೂಲಭೂತ ಸೌಲಭ್ಯಗಳು ಇದ್ದರೂ, ಕ್ರೀಡಾ ಇಲಾಖೆ ನಿರ್ಲಕ್ಷ ತೋರಿಸುತ್ತಿದೆ ಎಂಬ ದೂರುಗಳಿದ್ದು, ಈ ಬಗ್ಗೆ ಕೂಡಲೇ ಕ್ರಮತೆಗೆದುಕೊಳ್ಳಲಾಗುವುದೇ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೧೦ ಮೆಡಿಕಲ್ ಕಾಲೇಜು, ೨೦ಕ್ಕೂ ಹೆಚ್ಚು ಇಂಜಿನಿಯರಿಂಗ್ ಕಾಲೇಜು ೫ ವಿಶ್ವವಿದ್ಯಾನಿಲಯಗಳು ಇದ್ದರೂ ವಿದ್ಯಾರ್ಥಿಗಳಿಗೆ ಕ್ರೀಡೆಯಲ್ಲಿ ಪ್ರೋತ್ಸಾಹಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಈ) ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ ನೀಡಲು ಮಂಗಳೂರು ಜಿಲ್ಲೆಗಳಲ್ಲಿ ಕೈಗೊಂಡ ಕ್ರಮವೇನು ;

(ಉ) ಮಂಗಳೂರು ನಗರದಲ್ಲಿ ಪ್ರಾರಂಭಿಸುವ ಮಲ್ಟಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್‌ನಲ್ಲಿ ಕ್ರೀಡಾಳುಗಳ ಉಪಯೋಗಕ್ಕೆ ಯಾವಾಗ ನೀಡಲಾಗುವುದು ; ಎಷ್ಟು ವರ್ಷದಿಂದ ಈ ಕಾಮಗಾರಿಗಳು ನಡೆಯುತ್ತಿವೆ ; ಇದಕ್ಕೆ ವಿನಿಯೋಗಿಸಿದ ಹಣ ಎಷ್ಟು ; ಯಾವ ಯಾವ ಕ್ರೀಡೆಗಳಿಗೆ ಅವಕಾಶ ನೀಡಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಆಮದು ಮದ್ಯ – ವಿದೇಶಿ ಮದ್ಯದ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೪ (೧೧೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಮದು ಮದ್ಯ (Imported Liquor)- ವಿದೇಶಿ ಮದ್ಯ ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಶೇಕಡಾ ೪೦% ರಷ್ಟು ಹೆಚ್ಚು ದರ ಇರುವುದರಿಂದ ಮಾರಾಟದಲ್ಲಿ ಕಡಿಮೆ ಆಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ಹಾಗೂ ಕೈಗೊಂಡ ಕ್ರಮವೇನು ;

(ಆ) ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರದಲ್ಲಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಕಡಿಮೆ ದರ ಮದ್ಯಗಳನ್ನು ಉತ್ಪಾದಿಸಲು ಪೂರೈಸುತ್ತಿರುವ ಸ್ಪಿರಿಟ್‌ನ ಬೆಲೆ ಜಾಸ್ತಿ ಮಾಡಿರುವುದರಿಂದ ಬೆಲೆ ಏರಿಕೆ ಕಾರಣ ಮದ್ಯ ಮಾರಾಟ ಕಡಿಮೆ ಆಗುತ್ತಿರುವುದರ ಬಗ್ಗೆ ಇಲಾಖೆ ಕ್ರಮಕೈಗೊಂಡಿದೆಯೇ ;

(ಈ) ರಾಜ್ಯದಲ್ಲಿ ಎಂ.ಎಸ್.ಐ.ಎಲ್ ಶಾಪ್‌ಗಳಲ್ಲಿ ಕೇವಲ ಕೆಲವೇ ಬ್ರಾಂಡ್‌ಗಳು ಲಭ್ಯವಿರುವುದು ಕಂಡುಬಂದಿದ್ದು ಮತ್ತು ಅವುಗಳಲ್ಲಿ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ತೆಗೆದುಕೊಳ್ಳುವ ಕ್ರಮವೇನು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೂತನವಾಗಿ ತಾಲ್ಲೂಕುಗಳಲ್ಲಿ ನೋಟರಿ ಪಬ್ಲಿಕ್ ನಡೆಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೨೫ (೧೧೦೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೂತನವಾಗಿ ರಚಿಸಲ್ಪಟ್ಟ ತಾಲ್ಲೂಕುಗಳಲ್ಲಿ ನೋಟರಿ ಪಬ್ಲಿಕ್ ಹುದ್ದೆಗಳ ಅವಶ್ಯಕತೆ ಇದ್ದು, ಈ ಬಗ್ಗೆ ಇಲಾಖೆ ಕ್ರಮಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿಯೂ ಕಾನೂನು ಸೇವಾ ಪ್ರಾಧಿಕಾರ ರಚಿಸಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಆದರೆ ಮೂಡಬಿದ್ರೆಯನ್ನು ತಾಲ್ಲೂಕು ಮಾಡಿಲ್ಲ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ನೂತನವಾಗಿ ಜಾರಿಗೆ ಬಂದಿರುವ ಐಪಿಸಿ ಮತ್ತು ಸಿಆರ್‌ಪಿಸಿಗಳನ್ನು ಜಾರಿಗೆ ತರುವ ಸಂದರ್ಭದಲ್ಲಿ ಪೂರ್ವಸಿದ್ಧತೆಗಳನ್ನು ಮಾಡಲಾಗಿದೆಯೇ ? (ವಿವರ ನೀಡುವುದು)

## ತ್ಯಾಜ್ಯ ವಿಲೇವಾರಿ ಘಟಕದ ಸ್ಥಳಾಂತರ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೨೬ (೧೦೫೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆ ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ದೊಡ್ಡಬಿದರಕಲ್ಲು, ಸೀಗೇಹಳ್ಳಿ, ಕನ್ನಹಳ್ಳಿ, ಸುಬ್ರಯಪ್ಪನಪಾಳ್ಯ ಹಾಗೂ ಲಿಂಗದೀರನಹಳ್ಳಿಯ ಘಟಕಗಳಲ್ಲಿ ತ್ಯಾಜ್ಯ ಕಸ ವಿಲೇವಾರಿ ಮಾಡಲು ಘಟಕಗಳನ್ನು ಸ್ಥಾಪನೆ ಮಾಡಿ ಎಷ್ಟು ವರ್ಷ ಕಳೆದಿವೆ ; (ವಿವರ ನೀಡುವುದು)

(ಆ) ಈ ತ್ಯಾಜ್ಯ ಘಟಕಗಳಿಂದ ಇಲ್ಲಿಯತನಕ ಎಷ್ಟು ಪ್ರಮಾಣದ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗಿದೆ ; ಸದರಿ ತ್ಯಾಜ್ಯವನ್ನು ಸಂಪೂರ್ಣವಾಗಿ ನಿಷ್ಕ್ರಿಯೆಗೊಳಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಈ ತ್ಯಾಜ್ಯ ವಿಲೇವಾರಿ ಘಟಕಗಳಿಂದ ಅಕ್ಕಪಕ್ಕದ ಬಡಾವಣೆಯ ನಿವಾಸಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಬಂದಿದ್ದಲ್ಲಿ, ಈ ಘಟಕಗಳನ್ನು ಸ್ಥಳಾಂತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಈ ೫ ತ್ಯಾಜ್ಯ ವಿಲೇವಾರಿ ಘಟಕಗಳನ್ನು ಯಾವ ಕಾಲಮಿತಿಯೊಳಗೆ ಬೇರೆ ಕಡೆಗೆ ಸ್ಥಳಾಂತರ ಮಾಡಲಾಗುವುದು ? (ಈ ಬಗ್ಗೆ ಸರ್ಕಾರ ಸ್ಪಷ್ಟ ಉತ್ತರ ನೀಡುವುದು)

# ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಬೋಧಕೇತರ ವೃಂದದ ಹುದ್ದೆಗಳ ಸೃಜನೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೭ (೧೦೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಬೋಧಕೇತರ ವೃಂದದ ಗ್ರೂಪ್ 'ಸಿ' ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಬಗ್ಗೆ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಎಫ್‌ಡಿ/೮೩೯/ವೆಚ್ಚ-೮/೨೦೧೪, ದಿನಾಂಕ:೦೯.೦೭.೨೦೧೫ರನ್ವಯ ಸಹಮತಿ ನೀಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ಉದ್ದೇಶಗಳಿಗಾಗಿ ಯಾವ್ಯಾವ ಹಾಗೂ ಎಷ್ಟು ಹುದ್ದೆಗಳ ಸೃಜನೆಗೆ ಸಹಮತಿ ನೀಡಲಾಗಿದೆ ; ಸದರಿ ಸಹಮತಿಯ ಪ್ರತಿಯನ್ನು ನೀಡುವುದು ;

(ಆ) ನೀಡಲಾದ ಸಹಮತಿಯಲ್ಲಿ ಅಕೌಂಟ್ಸ್ ಅಧೀಕ್ಷಕರು ೭೦ ಹುದ್ದೆಗಳು ಹಾಗೂ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರು ೨೦೪ ಹುದ್ದೆಗಳನ್ನು ಯಾವ ಇಲಾಖೆಗೆ ಸಂಬಂಧಿಸಿದವುಗಳೆಂದು ಸೃಜಿಸಲಾಗಿದೆ; ರಾಜ್ಯ ಲೆಕ್ಕಪತ್ರ ಇಲಾಖೆಗೆ ಸೃಜನೆಯಾದ ಹುದ್ದೆಗಳಾದಲ್ಲಿ ಇಲ್ಲಿಯುವರೆಗೆ ಏಕೆ ನೇಮಕಾತಿ/ಬಡ್ತಿ ಮಾಡಿರುವುದಿಲ್ಲ; ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಹುದ್ದೆಗಳಾದಲ್ಲಿ, ಸೃಜನೆಯಾದ ಹುದ್ದೆಗಳಾದಲ್ಲಿ ಇಲ್ಲಿಯವರೆಗೆ ಏಕೆ ನೇಮಕಾತಿ/ಬಡ್ತಿ ಮಾಡಿರುವುದಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಎಫ್‌ಡಿ/೩೦೪/ಎಸ್‌ಎಡಿ/೨೦೧೧, ದಿನಾಂಕ:೩೦.೧೦.೨೦೧೨ರ ಆದೇಶದ ಪ್ಯಾರಾ 'ಇ'ನಲ್ಲಿ ಮತ್ತು ಆಇ/೨೧೬/ರಾಲೆಪ/೨೦೨೩,

ದಿನಾಂಕ : ೧೫.೦೯.೨೦೨೩ರ ಆದೇಶದ ಕ್ರಮ ಸಂಖ್ಯೆ:೮ರಲ್ಲಿ ತಿಳಿಸಿರುವಂತೆ ಕಿರಿಯ ಲೆಕ್ಕ ಸಹಾಯಕರು, ಪ್ರಥಮ ದರ್ಜೆ ಲೆಕ್ಕ ಸಹಾಯಕರು ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ತುಂಬುವ ಬಗ್ಗೆ ತಿಳಿಸಿದ್ದಾಗ್ಯೂ ಸಹ ಖಾಲಿ ಇರುವಂತಹ ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ತುಂಬದಿರಲು ಕಾರಣಗಳೇನು; ಈ ಹುದ್ದೆಗಳನ್ನು ತುಂಬಲು ತೀರ್ಮಾನ ತೆಗೆದುಕೊಂಡು ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸೂಕ್ತ ಮಾರ್ಗದರ್ಶನ ನೀಡಲಾಗುವುದೇ ; ಹಾಗಿದ್ದಲ್ಲಿ, ಮಾರ್ಗದರ್ಶನ ನೀಡುವ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಈ) ೨೦೧೫ ರಿಂದ ಇಲ್ಲಿಯವರೆಗೆ ಖಾಲಿಯಿರುವ ಹುದ್ದೆಗಳನ್ನು ತುಂಬದಿರುವ ಬಗ್ಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಮೇಲೆ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ಇತರೆ ಇಲಾಖೆಗಳಿಗೆ ಹುದ್ದೆಗಳ ನಿಯೋಜನೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೨೮ (೧೦೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ನಿಯೋಜನೆ ಮೇರೆಗೆ ಮೀಸಲಿರಿಸಿದ ಹುದ್ದೆಗಳನ್ನು ಹಂಚಿಕೆ ಮಾಡುವ ಕುರಿತು ಎಲ್ಲಾ ಇಲಾಖೆಗಳಿಗೆ ಅನ್ವಯವಾಗುವಂತೆ ಮಾರ್ಗಸೂಚಿಗಳನ್ನು ರಚಿಸಲಾಗಿದೆಯೇ; ಹಾಗಿದ್ದಲ್ಲಿ, ಎಫ್‌ಡಿ/ ೩೦೪/ ಎಸ್‌ಎಡಿ/೨೦೧೧, ದಿನಾಂಕ:೩೦.೧೦.೨೦೧೨ರ

ಆದೇಶದ ಪ್ರತಿಯೊಂದಿಗೆ ಈ ಆದೇಶದಲ್ಲಿ ಓದಲಾಗಿರುವ ದಿನಾಂಕ:೨೪.೦೯.೨೦೧೨ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಸಭಾ ನಡವಳಿ ಪ್ರತಿ, ದಿನಾಂಕ:೩೦.೦೯.೨೦೧೨ರಂದು ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ಅಡ್ವೊಕೇಟ್ ಜನರಲ್‌ರವರು ಸಲ್ಲಿಸಿರುವ ಮೆಮೋ ಪ್ರತಿ ಹಾಗೂ ಯು.ಓ.ನೋಟ್ ನಂ:ಡಿಪಿಎಆರ್/೧೪೮/ಎಸ್‌ಆರ್‌ಡಿ/೨೦೧೨, ದಿನಾಂಕ:೧೮.೧೦.೨೦೧೨ರ ಎಲ್ಲಾ ಪ್ರತಿಗಳನ್ನು ನೀಡುವುದು;

(ಆ) ಈ ಮಾರ್ಗಸೂಚಿಗಳಿದ್ದಾಗ್ಯೂ ಸಹ ಈ ಹುದ್ದೆಗಳನ್ನು ಹಂಚಿಕೆ ಮಾಡುವಲ್ಲಿ ತೊಡಕುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ತೊಡಕುಂಟಾಗಲು ಕಾರಣಗಳೇನು; ಈ ತೊಡಕುಗಳನ್ನು ನಿವಾರಿಸಲು ಸರ್ಕಾರ ಪರಿಷ್ಕೃತವಾಗಿ ಆದೇಶವನ್ನು ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಆಇ/೨೧೭/ರಾಲೆಪ/೨೦೨೩, ದಿನಾಂಕ:೧೫.೦೯.೨೦೨೩ರ ಆದೇಶದ ಪ್ರತಿಯೊಂದಿಗೆ ಈ ಆದೇಶದಲ್ಲಿ ಓದಲಾಗಿರುವ ದಿನಾಂಕ:೨೧.೦೭.೨೦೨೩ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಸಭಾ ನಡವಳಿ ಪ್ರತಿಯನ್ನು ನೀಡುವುದು ;

(ಇ) ಎಫ್‌ಡಿ/೩೦೪/ಎಸ್‌ಎಡಿ/೨೦೧೧, ದಿನಾಂಕ:೩೦.೧೦.೨೦೧೨ರ ಆದೇಶದ ಪ್ಯಾರಾ 'ಇ'ನಲ್ಲಿ ಮತ್ತು ಆಇ/೨೧೭/ರಾಲೆಪ/೨೦೨೩, ದಿನಾಂಕ:೧೫.೦೯.೨೦೨೩ರ ಆದೇಶದ ಕ್ರಮ ಸಂಖ್ಯೆ:೮ರಲ್ಲಿ ತಿಳಿಸಿರುವಂತೆ ಕಿರಿಯ ಲೆಕ್ಕ ಸಹಾಯಕರು, ಪ್ರಥಮ ದರ್ಜೆ ಲೆಕ್ಕ ಸಹಾಯಕರು ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ಯಾವ

ರೀತಿ ತುಂಬುವ ಬಗ್ಗೆ ತಿಳಿಸಲಾಗಿದೆ; ಮಾಹಿತಿ ನೀಡುವುದು; ಆದಾಗ್ಯೂ ಸಹ ಇತರೆ ಇಲಾಖೆಗಳಲ್ಲಿ ಮಂಜೂರಾದ ದಿನದಿಂದ ಇಲ್ಲಿಯವರೆಗೆ ಖಾಲಿ ಇರುವಂತಹ ಪ್ರಥಮ ದರ್ಜೆ ಲೆಕ್ಕ ಸಹಾಯಕರು ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ತುಂಬಲು ಸಹಮತಿ ನೀಡದಿರಲು ಕಾರಣಗಳೇನು ;

(ಈ) ಇತರೆ ಇಲಾಖೆಗಳಲ್ಲಿ ಖಾಲಿ ಇರುವಂತಹ ಪ್ರಥಮ ದರ್ಜೆ ಲೆಕ್ಕ ಸಹಾಯಕರು ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ತುಂಬುವ ಬಗ್ಗೆ ಮತ್ತು ಸಂಬಂಧಿಸಿದ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಈ ಹುದ್ದೆಗಳಿಗೆ ಅವಕಾಶ ಇಲ್ಲದೇ ಇದ್ದಲ್ಲಿ ಅವಕಾಶ ಕಲ್ಪಿಸುವ ಕುರಿತು ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ಆಡಳಿತ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೨೯ (೧೦೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಹಾಗೂ ಮೂರು ವರ್ಷಗಳಿಗೊಮ್ಮೆ ಪರಿಶೀಲಿಸುವ ಕುರಿತು ಸರ್ಕಾರದಿಂದ ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಅಗತ್ಯ ಕಾರಣಗಳೇನು; ಯಾವ ಉದ್ದೇಶಗಳಿಗಾಗಿ

ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗುತ್ತದೆ ; (ಮಾಹಿತಿ ನೀಡುವುದು)

(ಆ) ೨೦೦೪ ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಹಲವಾರು ಸುತ್ತೋಲೆಗಳು ಮತ್ತು ನೆನಪೋಲೆಗಳನ್ನು ಹೊರಡಿಸಲಾಗಿದ್ದರೂ, ಇದುವರೆಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಮತ್ತು ಪರಿಷ್ಕರಿಸದಿರುವ ಇಲಾಖೆಗಳು ಯಾವುವು; ಪರಿಷ್ಕರಿಸಿರುವ ಇಲಾಖೆಗಳಲ್ಲಿ ಪರಿಷ್ಕರಿಸಲು ಕಾರಣಗಳೇನು; ಪರಿಷ್ಕರಿಸದಿರುವ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಅಗತ್ಯವಿಲ್ಲವೇ; ಹಾಗಿದ್ದಲ್ಲಿ, ಅಗತ್ಯತೆ ಏಕಿಲ್ಲ; ಅಗತ್ಯವಿದ್ದಲ್ಲಿ ಇದುವರೆಗೆ ಪರಿಷ್ಕರಿಸದಿರಲು ಕಾರಣಗಳೇನು;

(ಇ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ದೀರ್ಘಕಾಲದಿಂದ ಪರಿಷ್ಕರಿಸದಿರುವ ಇಲಾಖೆಗಳಲ್ಲಿ ಸಮಗ್ರವಾಗಿ ಪರಷ್ಕರಿಸುವ ಕುರಿತು ಸರ್ಕಾರ ಕ್ರಮ ವಹಿಸುವುದೇ; ಹಾಗಿದ್ದಲ್ಲಿ, ಸದರಿ ನಿಯಮಗಳನ್ನು ಪರಿಷ್ಕರಿಸಲು ಬೇಕಾಗುವ ಸಮಯಾವಕಾಶವೆಷ್ಟು ; ಸರ್ಕಾರ ಯಾವುದಾದರೂ ಕಾಲಮಿತಿ ನಿಗದಿಪಡಿಸಿದೆಯೇ ; ಹಾಗಿದ್ದಲ್ಲಿ, ಕನಿಷ್ಠ ಮೂರು ಗರಿಷ್ಠ ಆರು ತಿಂಗಳೊಳಗಾಗಿ ಪರಿಷ್ಕರಣೆ ಮಾಡುವ ಕುರಿತು ಸರ್ಕಾರದ ನಿರ್ಧಾರವೇನು ; (ಮಾಹಿತಿ ನೀಡುವುದು)

(ಈ) ಪರಿಷ್ಕರಿಸದಿರುವ ಇಲಾಖೆಗಳ ಮುಖ್ಯಸ್ಥರುಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮವಹಿಸಿದೆ ? (ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೩೦ (೧೧೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಡೆಯುತ್ತಿರುವ "ಬಾಗಿಲಿಗೆ ಬಂತು ಸರ್ಕಾರ" ಕಾರ್ಯಕ್ರಮದ ಉದ್ದೇಶವೇನು; ಈವರೆಗೆ ಎಷ್ಟು ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯಕ್ರಮ ನಡೆದಿದೆ ;

(ಆ) ಈ ಕಾರ್ಯಕ್ರಮ/ಸಭೆಗಳಲ್ಲಿ ಬಂದಿರುವ ಮನವಿ/ದೂರುಗಳೆಷ್ಟು; (ಪ್ರತೀ ಕಾರ್ಯಕ್ರಮದ ವಿವರ ಒದಗಿಸುವುದು)

(ಇ) ಸದರಿ ದೂರುಗಳ ಪೈಕಿ ಇತ್ಯಾರ್ಥಗೊಂಡಿರುವ ದೂರುಗಳೆಷ್ಟು; ಇತ್ಯಾರ್ಥಗೊಳ್ಳಲು ಬಾಕಿ ಇರುವ ದೂರುಗಳನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸುವುದರ ಜೊತೆಗೆ ರಾಜಕಾಲುವೆ ಒತ್ತುವರಿ ಮತ್ತು ಸ್ಮಶಾನಕ್ಕೆ ಜಾಗದ ಅವಶ್ಯಕತೆ ಕುರಿತು ಬಂದಿರುವ ದೂರುಗಳ ಮೇಲೆ ಕೈಗೊಂಡಿರುವ ಕ್ರಮಗಳೇನು ;

(ಈ) ಕಾರ್ಯಕ್ರಮಗಳಲ್ಲಿ ಹೆಚ್ಚಾಗಿ ಕೇಳಿ ಬಂದಿರುವ ದೂರುಗಳು ಯಾವುವು ; ಸದರಿ ದೂರುಗಳು ಪುನರಾವರ್ತನೆ ಆಗದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆ್ಯಸಿಡ್ ದಾಳಿಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೩೧ (೧೧೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆ್ಯಸಿಡ್ ದಾಳಿಗೆ ಒಳಗಾದ ಸಂತ್ರಸ್ಥರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಆ್ಯಸಿಡ್ ದಾಳಿಗೆ ಒಳಗಾದವರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು; ಸಂತ್ರಸ್ಥರಿಗೆ ನಿವೇಶನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ನಿವೇಶನ ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈವರೆಗೆ ಎಷ್ಟು ಸಂತ್ರಸ್ಥರಿಗೆ ನಿವೇಶನ ವಿತರಿಸಲಾಗಿದೆ ;

(ಈ) ರಾಜ್ಯದಲ್ಲಿ ಆ್ಯಸಿಡ್ ಮಾರಾಟ ನಿಷೇಧಿಸಲಾಗಿದೆಯೇ ; ಅಕ್ರಮವಾಗಿ ಆ್ಯಸಿಡ್ ಮಾರಾಟ ಮಾಡುವ ಎಷ್ಟು ಜನರ ಮೇಲೆ ಕ್ರಮ ಕೈಗೊಳ್ಳಲಾಗಿದೆ ?

## ನೀರು ಬಳಕೆದಾರರ ಸಂಘಗಳ ಬಲವರ್ಧನೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೯೩೨ (೧೧೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳಡಿ ರಾಜ್ಯದಲ್ಲಿ ನೋಂದಣಿ ಆಗಿರುವ ಮತ್ತು ಕಾರ್ಯನಿರ್ವಹಿಸುತ್ತಿರುವ ನೀರು ಬಳಕೆದಾರರ ಸಹಕಾರ ಸಂಘಗಳೆಷ್ಟು ; ಈ ಪೈಕಿ ಎಂ.ಓ.ಯು ಒಪ್ಪಂದ ಮಾಡಿಕೊಂಡಿರುವ ಸಂಘಗಳೆಷ್ಟು; ಇದರಲ್ಲಿ ನೀರು ನಿರ್ವಹಣೆ ಮಾಡುತ್ತಿರುವ ಸಂಘಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನೀರು ನಿರ್ವಹಣೆ ಮಾಡುತ್ತಿದ್ದಲ್ಲಿ ಎಷ್ಟು ಸಂಘಗಳು ನೀರಿನ ಕರ ವಸೂಲಾತಿ ಮಾಡುತ್ತಿವೆ ಹಾಗೂ ಅವುಗಳು ಸಂಗ್ರಹಿಸಿರುವ ನೀರಿನ ಕರ ವಸೂಲಾತಿ ಮೊತ್ತ ಎಷ್ಟು ; (ಜಿಲ್ಲಾವಾರು, ಸಂಘಗಳವಾರು ಮಾಹಿತಿ ನೀಡುವುದು)

(ಇ) ನೀರು ಬಳಕೆದಾರ ಸಹಕಾರ ಸಂಘಗಳಿಗೆ ಪ್ರಸ್ತುತ ಒದಗಿಸುತ್ತಿರುವ ರೂ.೧ ಲಕ್ಷಗಳ ವಾರ್ಷಿಕ ಕಾರ್ಯಾನುದಾನ ತೀರಾ

ಕಡಿಮೆಯಿದ್ದು, ಇದನ್ನು ಪರಿಷ್ಕರಿಸುವ ಕುರಿತು ಸರ್ಕಾರದ ನಿಲುವೇನು ;

(ಈ) ನೀರು ಬಳಕೆದಾರರ ಸಹಕಾರ ಸಂಘಗಳ ಬಲವರ್ಧನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ತ. ಮ. ವಿಜಯಭಾಸ್ಕರ್ ಅವರ ಅಧ್ಯಕ್ಷತೆಯ ಕರ್ನಾಟಕ ಆಡಳಿತ ಸುಧಾರಣಾ ಆಯೋಗ–೨ರ ೬ನೇ ವರದಿಯಲ್ಲಿನ ಅಂಶಗಳನ್ನು ಜಾರಿಗೊಳಿಸುವ ಕುರಿತು ಸರ್ಕಾರದ ನಿಲುವೇನು ?

**ಬಡ್ಸ್ ಕಾಯ್ದೆ–೨೦೧೯ರಡಿ ದಾಖಲಾಗಿರುವ ದೂರುಗಳ ಕುರಿತು**

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೩೩ (೧೧೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆಲವು ಹಣಕಾಸು ಸಂಸ್ಥೆಗಳು, ಕಂಪನಿಗಳು ಮತ್ತು ಸೊಸೈಟಿಗಳು ಹೆಚ್ಚಿನ ಬಡ್ಡಿಯ ಆಸೆ ತೋರಿಸಿ ಅಕ್ರಮವಾಗಿ ಕೋಟ್ಯಂತರ ರೂಪಾಯಿ ಠೇವಣಿ ಸಂಗ್ರಹಿಸಿ ವಂಚಿಸುತ್ತಿರುವುದರಿಂದ ಜನರು ತೀವ್ರ ಮೋಸ, ವಂಚನೆ, ನಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಂತಹ ಸಂಸ್ಥೆಗಳ ವಂಚನೆ ಪ್ರಕರಣಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು; ಎಷ್ಟು ಸಂಸ್ಥೆಗಳ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅನಿಯಂತ್ರಿತ ಠೇವಣಿ ಯೋಜನೆಗಳ ನಿಷೇಧ ಕಾಯ್ದೆ–2019 (The Banning of Unregulated Deposit Scheme

Act-2019) ಜಾರಿಗೆ ಬಂದ ನಂತರದಿಂದ ಇದುವರೆವಿಗೂ ರಾಜ್ಯದಲ್ಲಿ ದಾಖಲಾಗಿರುವ ದೂರು ಪ್ರಕರಣಗಳ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸಂತ್ರಸ್ತರು ಯಾವ ಯಾವ ಸಂಸ್ಥೆಗಳ ವಿರುದ್ಧ ದೂರು ದಾಖಲಿಸಿದ್ದಾರೆ; ಇಂತಹ ಎಷ್ಟು ಸಂಸ್ಥೆಗಳ ವಿರುದ್ಧ ಕ್ರಮ ಜರುಗಿಸಲಾಗಿದೆ; ಜಪ್ತಿ ಮಾಡಿರುವ ಆಸ್ತಿಗಳ ಮೌಲ್ಯ (ರೂ.ಗಳಲ್ಲಿ) ಎಷ್ಟು; ಎಷ್ಟು ಸಂತ್ರಸ್ತರಿಗೆ ಪರಿಹಾರ ಸಿಕ್ಕಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ನಿಯಂತ್ರಿತ ಮತ್ತು ಅನಿಯಂತ್ರಿತ ಠೇವಣಿ ಎಂದರೇನು ? (ವಿವರ ನೀಡುವುದು)

## ಮಂಡ್ಯ ಪಿಆರ್‌ಇಡಿ–ಹಣ ಅಕ್ರಮ ವರ್ಗಾವಣೆ–ಸಿಐಡಿ ತನಿಖೆ ಪ್ರಗತಿ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೩೪ (೧೧೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಪಿಆರ್‌ಇಡಿ ವಿಭಾಗದಲ್ಲಿ ಹಣ ಅಕ್ರಮ ವರ್ಗಾವಣೆ/ ದುರುಪಯೋಗ ಕುರಿತು ಸಿಐಡಿ ನಡೆಸುತ್ತಿರುವ ಪ್ರಕರಣದ ತನಿಖೆ ಪ್ರಸ್ತುತ ಯಾವ ಹಂತದಲ್ಲಿದೆ; ಪ್ರಕರಣದಲ್ಲಿ ಎಷ್ಟು ಹಣ ಅಕ್ರಮ ವರ್ಗಾವಣೆ ಆಗಿರುವುದನ್ನು ಪತ್ತೆ ಹಚ್ಚಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಪ್ರಕರಣದ ತನಿಖಾ ಭಾಗವಾಗಿ ಈವರೆವಿಗೂ ಎಷ್ಟು ಮಂದಿ ಆರೋಪಿಗಳನ್ನು ವಿಚಾರಣೆ/ ತನಿಖೆಗೆ ಒಳಪಡಿಸಲಾಗಿದೆ

ತನಿಖೆಗೆ ಪೂರಕವಾಗಿ ಎಷ್ಟು ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ ಹಾಗೂ ಎಷ್ಟು ವರದಿಗಳನ್ನು ನಿರೀಕ್ಷಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಪ್ರಕರಣದ ತನಿಖೆ ವಿಳಂಬವಾಗಲು ಕಾರಣಗಳೇನು ?

## ಯುವಜನ ಮೇಳ ಮತ್ತು ಯುವ ಜನೋತ್ಸವಗಳು ಸ್ಥಗಿತವಾಗಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೯೩೫ (೧೧೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಯುವಕ ಸಂಘ ಹಾಗೂ ಯುವತಿ ಮಂಡಳಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ನೋಂದಣಿ ಆಗಿರುವ, ಕಾರ್ಯನಿರ್ವಹಣೆ ಮಾಡುತ್ತಿರುವ ಯುವಕ ಸಂಘ ಹಾಗೂ ಯುವತಿ ಮಂಡಳಿಗಳ ಸಂಖ್ಯೆ ಎಷ್ಟು;

(ಇ) ಸರ್ಕಾರದಿಂದ ಯುವಕ ಸಂಘ ಹಾಗೂ ಯುವತಿ ಮಂಡಳಿಗಳಿಗೆ ಯಾವ ರೀತಿಯ ಪ್ರೋತ್ಸಾಹ ನೀಡಲಾಗುತ್ತಿದೆ ; ವಾರ್ಷಿಕ ಎಷ್ಟು ಅನುದಾನ ನೀಡಲಾಗುತ್ತಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ವರ್ಷವಾರು, ಸಂಸ್ಥೆಗಳವಾರು ಮಾಹಿತಿ ನೀಡುವುದು)

(ಉ) ಯುವಜನ ಮೇಳ ಮತ್ತು ಯುವ ಜನೋತ್ಸವ ಕಾಲಕಾಲಕ್ಕೆ ನಡೆಯದಿರಲು ಕಾರಣವೇನು ?

## ನ್ಯಾಯಾಲಯಗಳಲ್ಲಿ ವಿವಾದ ನಿರ್ಣಯ ವ್ಯವಸ್ಥೆಯನ್ನು ಜಾರಿಗೆ ತರುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೩೬ (೧೦೨೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಲಾಗಿರುವ ನ್ಯಾಯಾಲಯಗಳಲ್ಲಿ ಆನ್‌ಲೈನ್ ವಿವಾದ ನಿರ್ಣಯ (ODR) ವ್ಯವಸ್ಥೆಯನ್ನು ಜಾರಿಗೆ ತರಲು ಕರ್ನಾಟಕ ಸರ್ಕಾರವು ಕ್ರಮಗಳನ್ನು ಕೈಗೊಂಡಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ನ್ಯಾಯಾಲಯಗಳಲ್ಲಿ ಆನ್‌ಲೈನ್ ವಿವಾದ ನಿರ್ಣಯ (ODR) ವ್ಯವಸ್ಥೆಯನ್ನು ಯಶಸ್ವಿಯಾಗಿ ಜಾರಿಗೆ ತರಲಾಗಿದೆ ;

(ಇ) ಇದುವರೆಗೂ ಎಷ್ಟು ಪ್ರಕರಣಗಳನ್ನು ಆನ್‌ಲೈನ್ ವಿವಾದ (ODR) ವ್ಯವಸ್ಥೆಯ ಅಡಿಯಲ್ಲಿ ತರಲಾಗಿದೆ ಮತ್ತು ಎಷ್ಟು ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ? (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

## ಸುಳ್ಳು ಪ್ರಕರಣಗಳನ್ನು ಸಲ್ಲಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೩೭ (೧೦೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸುಳ್ಳು ಪ್ರಕರಣಗಳನ್ನು ಸಲ್ಲಿಸುವ ವ್ಯಕ್ತಿಗಳ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲು ಕರ್ನಾಟಕ ಸರ್ಕಾರವು ಪ್ರಸ್ತಾಪಿಸಿದೆಯೇ ; ಹಾಗಿದ್ದಲ್ಲಿ, ಅದರ ವಿವರಗಳು ;

(ಆ) ಸುಳ್ಳು ಪ್ರಕರಣಗಳನ್ನು ಸಲ್ಲಿಸುವವರಿಗೆ ಸೆರೆಮನೆ ಅಥವಾ ಕಾರಾಗೃಹವಾಸ ಶಿಕ್ಷೆಯನ್ನು ನೀಡುವ ಉಪಬಂಧಗಳನ್ನು ಜಾರಿಗೆ ತರಲು ಸರ್ಕಾರವು ಪ್ರಸ್ತಾಪಿಸಿದೆಯೇ ;

(ಇ) ಸುಳ್ಳು ಪ್ರಕರಣಗಳನ್ನು ಸಲ್ಲಿಸುವ ವ್ಯಕ್ತಿಗಳು ಸದರಿ ವೆಚ್ಚಗಳ ಸಂಪೂರ್ಣ ವಿವರಗಳನ್ನು ಒದಗಿಸತಕ್ಕದೆಂಬುದನ್ನು ಖಚಿತ ಪಡಿಸಲು ಸರ್ಕಾರವು ಯಾವುದಾದರೂ ಕ್ರಮಗಳನ್ನು ತೆಗೆದುಕೊಂಡಿದೆಯೇ ; ಹಾಗಿದ್ದಲ್ಲಿ, ಅದರ ವಿವರಗಳೇನು ?

**ಕಂದಾಯ ಗ್ರಾಮಗಳನ್ನು ಬಿಬಿಎಂಪಿ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ**

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೩೮ (೧೦೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರಾಜಧಾನಿಯಾದ ಬೆಂಗಳೂರು ನಗರ (ಬಿ.ಬಿ.ಎಂ.ಪಿ)ದ ವಿಸ್ತೀರ್ಣವೆಷ್ಟು ; ಈ ನಗರದಲ್ಲಿ (ಬಿ.ಬಿ.ಎಂ.ಪಿ ವ್ಯಾಪ್ತಿ) ಸುಮಾರು ೧.೩ ಕೋಟಿ ಜನಸಂಖ್ಯೆ ಇದ್ದು ಸುತ್ತಮುತ್ತಲಿನ ಕಂದಾಯ ಗ್ರಾಮಗಳನ್ನು ಒಗ್ಗೂಡಿಸಿದ್ದಲ್ಲಿ ಸುಮಾರು ೨ ಕೋಟಿ ಜನಸಂಖ್ಯೆ ಹೊಂದಿರುವ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಈ ನಗರಕ್ಕೆ ಮೂಲಭೂತ ಸೌಕರ್ಯಗಳು ಕುಡಿಯುವ ನೀರಿನ ಸಮಸ್ಯೆ, ಟ್ರಾಫಿಕ್ ಸಮಸ್ಯೆ, ಸರಿಯಾದ ನೈರ್ಮಲ್ಯ ಇಲ್ಲದಿರುವುದರಿಂದ ಉತ್ತಮ ರೀತಿಯಲ್ಲಿ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಈಗಾಗಲೇ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿರುವ ೧೯೮ ವಾರ್ಡ್‌ಗಳನ್ನು ೨೨೫ಕ್ಕೆ ಹೆಚ್ಚಿಸಿದ್ದು ಇನ್ನುಳಿದ ಕಂದಾಯ ಗ್ರಾಮಗಳನ್ನು ಬಿ.ಬಿ.ಎಂ.ಪಿ ವ್ಯಾಪ್ತಿಗೆ ಒಳಪಡಿಸುವ ಯೋಜನೆ ಸರ್ಕಾರದ

ಮುಂದಿದೆಯೇ ; ಅಥವಾ ಬಿ.ಬಿ.ಎಂ.ಪಿ ವಾರ್ಡ್‌ಗಳನ್ನು ಹೆಚ್ಚಿಸಲು ಯೋಜನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಅವು ಯಾವ ಯಾವ ಕಂದಾಯ ಗ್ರಾಮಗಳು ಅಥವಾ ಯಾವ ಯಾವ ಪ್ರದೇಶಗಳಿವೆ ? (ಮಾಹಿತಿ ನೀಡುವುದು)

## **KHIR** ನಗರವನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೯ (೪೨೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಬೆಂಗಳೂರಿನ ಹೊರ ವಲಯದಲ್ಲಿ ೨ ಹಂತಗಳಲ್ಲಿ ೨೦೦೦ ಎಕರೆ ಭೂಮಿಯಲ್ಲಿ ಜ್ಞಾನ, ಆರೋಗ್ಯ, ಅವಿಷ್ಕಾರ ಮತ್ತು ಸಂಶೋಧನೆ (KHIR- Knowledge, Healthcare, Innovation & Research) ನಗರವನ್ನು ಸ್ಥಾಪಿಸಲು ಈಗಾಗಲೇ ಯೋಜಿಸಿದ್ದು, ಈ ಯೋಜನೆ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆಯಲ್ಲಿ ಯಾವುದಾದರೂ ಸಂಸ್ಥೆ ಹೂಡಿಕೆ ಮಾಡಲು ಆಸಕ್ತಿ ಹೊಂದಿದ್ದಾರೆಯೇ ; ಹಾಗಿದ್ದಲ್ಲಿ, ಸದರಿ ಸಂಸ್ಥೆ ಎಷ್ಟು ಹೂಡಿಕೆ ಮಾಡುತ್ತಿದೆ ? (ಸದರಿ ಸಂಸ್ಥೆಯ ಪೂರ್ಣ ವಿವರ ನೀಡುವುದು)

## ಬಿ.ಬಿ.ಎಂ.ಪಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೯೪೦ (೧೦೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜು, ಪದವಿ ಕಾಲೇಜುಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ ಬೋಧಕೇತರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರೆಷ್ಟು ; (ವಿವರ ನೀಡುವುದು)

(ಈ) ಈ ಶಾಲಾ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಪ್ರತಿ ತಿಂಗಳು ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕಾರಣ ಸಹಿತ ವಿವರ ನೀಡುವುದು)

(ಉ) ಸದರಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ಕೋರ್ಟ್ ಆದೇಶದಂತೆ ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಸರ್ಕಾರಿ ನೌಕರರಿಗೆ ೭ನೇ ವೇತನ ಆಯೋಗದ ವರದಿಯನ್ನು ಜಾರಿಗೊಳಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೯೪೧ (೧೦೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ನೌಕರರಿಗೆ ವೇತನ ಪರಿಷ್ಕರಣೆಯ ಪೂರ್ಣ ಪ್ರಮಾಣದ ವರದಿಯನ್ನು ಯಾವಾಗ ನೀಡಲಾಗಿದೆ ; (ಆಯೋಗದ ವರದಿ ನೀಡುವುದು)

(ಆ) ನೌಕರರಿಗೆ ೭ನೇ ವೇತನ ಆಯೋಗದ ಸಮಿತಿಗೆ ವರದಿಯನ್ನು ಜಾರಿಗೊಳಿಸಲು ಬಜೆಟ್‌ನಲ್ಲಿ ಹಣವನ್ನು ನಿಗದಿಗೊಳಿಸಲಾಗಿದೆಯೇ ; (ವಿವರ ನೀಡುವುದು)

(ಇ) ಸರ್ಕಾರಿ ನೌಕರರಿಗೆ ವೇತನ ಆಯೋಗವು ನೀಡಿರುವ ವರದಿಯನ್ನು ಯಾವ ದಿನಾಂಕದಿಂದ ಜಾರಿಗೊಳಿಸಲಾಗುತ್ತದೆ ; ವೇತನ ಆಯೋಗ ಜಾರಿಗೊಳಿಸಲು ಬೇಕಾಗುವ ಅಂದಾಜು ಮೊತ್ತವೆಷ್ಟು;

(ಈ) ೭ನೇ ವೇತನ ಆಯೋಗದ ವರದಿಯನ್ನು ಇದುವರೆವಿಗೆ ಜಾರಿಗೊಳಿಸದಿರಲು ಕಾರಣವೇನು ? (ವಿವರ ನೀಡುವುದು)

## ಹುಬ್ಬಳ್ಳಿ ಮತ್ತು ಧಾರವಾಡ ಅವಳಿ ನಗರದ ಅಪರಾಧ ಪ್ರಕರಣಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೪೨ (೧೦೩೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿ ಮತ್ತು ಧಾರವಾಡ ಅವಳಿ ನಗರದಲ್ಲಿನ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಪರಾಧ ಪ್ರಕರಣಗಳನ್ನು ಹತ್ತಿಕ್ಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅಪರಾಧ ಪ್ರಕರಣಗಳನ್ನು ತಡೆಯಲು ವಿಫಲರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?

## ವಿಜಯಪುರ ಜಿಲ್ಲೆಯಲ್ಲಿ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೯೪೩ (೧೧೯೨) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಹಲವಾರು ಭಾಗಗಳ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳು ಎಷ್ಟು ವರ್ಷಗಳಿಂದ ಬಾಕಿ ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬರಗಾಲ ಪೀಡಿತ ಪ್ರದೇಶವಾದ ಈ ಜಿಲ್ಲೆಯಲ್ಲಿ ಹಲವಾರು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಎಷ್ಟು ಅನುದಾನದ ಅವಶ್ಯಕತೆ ಇದೆ ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕಿನ ಕೆರೆಗಳನ್ನು ನೀರು ತುಂಬಿಸುವ ಯೋಜನೆಗೆ ಒಳಪಡಿಸಲು ಪ್ರಸ್ತುತ ಸಾಲಿನಲ್ಲಿ ಅನುದಾನ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆಲಮಟ್ಟಿ ಅಣೆಕಟ್ಟಿನ ಎತ್ತರದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೯೪೪ (೧೧೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪ರಲ್ಲಿಯೇ ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ೫೨೪ ಅಡಿಗೆ ಎತ್ತರಿಸಲು ಅಂತಿಮ ಆದೇಶವಾಗಿರುವುದು ನಿಜವೇ ;

(ಆ) ಆದೇಶವಾಗಿದ್ದರೂ ಅಧಿಸೂಚನೆ ಹೊರಡಿಸದೇ ಇಲ್ಲಿಯವರೆಗೂ ೫೧೯ ಅಡಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಟ್ರಿಬ್ಯೂನಲ್ ನಲ್ಲಿ ೫೨೪ ಅಡಿ ಎತ್ತರಿಸಲು ಆದೇಶವಾಗಿದ್ದರೂ, ವಿಳಂಬವಾಗಲು ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗಾಗಿ ಅನುದಾನವನ್ನು ಒದಗಿಸಿ, ಅಣೆಕಟ್ಟಿನ ಎತ್ತರವನ್ನು ೫೨೪ ಅಡಿಗೆ ಹೆಚ್ಚಿಸುವ ಕಾಮಗಾರಿ ಪ್ರಾರಂಭಿಸಲಾಗುವುದು ?

## ವಿಜಯಪುರ ಜಿಲ್ಲೆಯ ಪೊಲೀಸ್ ಠಾಣೆಯಲ್ಲಿ ಕಡತಗಳ ನಾಪತ್ತೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೬೪೫ (೧೧೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲಾ ಪೊಲೀಸ್ ಕಛೇರಿಯ ಆಯ್ದ ಶಾಖೆಯಲ್ಲಿ ಕಡತಗಳು ನಾಪತ್ತೆ ಹಾಗೂ ದಾಖಲೆಗಳ ನಾಶಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತಹ ಅಪರಾಧ ಎಸಗಿದವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಇದುವರೆಗೂ ಕಡತ ನಾಪತ್ತೆ ಹಾಗೂ ದಾಖಲೆ ನಾಶಪಡಿಸಿದವರ ಮೇಲೆ ಅಪರಾಧ ಪ್ರಕರಣಗಳನ್ನು ದೂರು ದಾಖಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅಪರಾಧ ಎಸಗಿದ ಸಿಬ್ಬಂದಿಗಳನ್ನು ಬೇರೆಯಡೆ ವರ್ಗಾಯಿಸಿ, ಅವರನ್ನು ರಕ್ಷಿಸುವ ಕ್ರಮಗಳನ್ನು ಜರುಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಪೊಲೀಸ್ ಇಲಾಖೆಯಲ್ಲಿ ಸಿಬ್ಬಂದಿಗಳ ಆರೋಗ್ಯ ಭಾಗ್ಯದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೬೪೬ (೧೧೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೊಲೀಸ್ ಇಲಾಖೆಯಲ್ಲಿ ಸಿಬ್ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಭಾಗ್ಯ ಯೋಜನೆ ಜಾರಿ ತಂದಿದ್ದು, ಅದರ ಉಪಯೋಗ ಪಡೆದು ಚಿಕಿತ್ಸಾ ವೆಚ್ಚದ ಬಿಲ್ಲುಗಳನ್ನು ಮರುಪಾವತಿಗಾಗಿ ಇಲಾಖೆಗೆ ನೀಡಿದ ಬಳಿಕ ನಿಯಮ ಉಲ್ಲಂಘಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕಿತ್ಸಾ ವೆಚ್ಚದ ಬಿಲ್ಲುಗಳು ನಿಯಮದ ಪ್ರಕಾರ ಸರಿ ಇದ್ದರೂ, ನಿಯಮದಡಿ ಸರಿ ಇಲ್ಲ ಎಂದು ತಿಳಿಸಿ, ಲೆಕ್ಕಪರಿಶೋಧನೆ ಸಮಿತಿ ವಸೂಲಾತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಸಿಬ್ಬಂದಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಆರೋಗ್ಯ ಭಾಗ್ಯ ಯೋಜನೆಯಡಿ ಪರಿಹಾರ ಪಡೆದವರು ಹಲವಾರು ಸಿಬ್ಬಂದಿಗಳು ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿಯಡಿಯಲ್ಲಿಯೂ ಪರಿಹಾರ ಪಡೆಯಲು ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ವಿಜಯಪುರ ಜಿಲ್ಲೆಯಲ್ಲಿ ನಿಯಮ ಮೀರಿ ವರ್ಗಾವಣೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೯೪೭ (೧೮೯೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಕಳೆದ ವರ್ಷ ಠಾಣೆಗಳಿಗೆ ನಿಯಮ ಮೀರಿ ವರ್ಗಾವಣೆ ಮಾಡಿ ಆದೇಶ ಮಾಡಿರುವುದು ಹಾಗೂ ಮಂಜೂರಾತಿ ಹುದ್ದೆಗಿಂತ ಹೆಚ್ಚಿನ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಿ ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಹೆಚ್ಚುವರಿ ವರ್ಗಾವಣೆಗಳನ್ನು ಸರಿಪಡಿಸಲಾಗಿದ್ದು, ೨೦೨೪ನೇ ಸಾಲಿನಲ್ಲಿ ಮತ್ತೆ ಹೆಚ್ಚುವರಿ ಸಿಬ್ಬಂದಿಗಳನ್ನು ವರ್ಗಾವಣೆ, ನಿಯೋಜನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ರೀತಿಯ ಸಮಸ್ಯೆಗಳು ಪದೇ ಪದೇ ಉದ್ಭವಿಸದಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಡ್ರಗ್ಸ್ ಮಾರಾಟ ದಂಧೆ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೪೮ (೧೦೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು ;

(ಇ) ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ವಿದೇಶಿಯರ ವಿರುದ್ಧ ಕಳೆದ ೩ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ಹಾಗೂ ಸದರಿ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹಲವಾರು ವಿದೇಶಿ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕಾಗಿ ಇಲ್ಲಿಗೆ ಬಂದು, ನೆಲೆಸಿ ತಾವು ಓದುತ್ತಿರುವ ಕಾಲೇಜು ಮತ್ತು ಇತರೇ ಕಾಲೇಜುಗಳ ವಿದ್ಯಾರ್ಥಿಗಳನ್ನು ಗುರಿಯಾಗಿಸಿ ಅವರುಗಳನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣಗಳು ಕಂಡು ಬಂದಿದ್ದು ಸದರಿ ಪ್ರಕರಣಗಳಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ನಿವೃತ್ತ ಅಧಿಕಾರಿಗಳ ಹಾಗೂ ನೌಕರರನ್ನು ನೇಮಕ ಮಾಡಿಕೊಳ್ಳುತ್ತಿರುವುದರಿಂದ ಆಗುತ್ತಿರುವ ಋಣಾತ್ಮಕ ಪರಿಣಾಮ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೪೯ (೧೦೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನಿವೃತ್ತ ಅಧಿಕಾರಿಗಳು ಹಾಗೂ ನೌಕರರನ್ನು ನೇಮಕ ಮಾಡಿಕೊಳ್ಳುತ್ತಿರುವುದರಿಂದ ಆಡಳಿತ ಸುಧಾರಣೆ ಮೇಲೆ ಋಣಾತ್ಮಕ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಈ ಕುರಿತು ಹೊಂದಿರುವ ನಿಯಮ ಮತ್ತು ಮಾನದಂಡಗಳೇನು ;

(ಇ) ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಅಧಿಕಾರಿಗಳು ಹಾಗೂ ನೌಕರರ ಸಂಖ್ಯೆ ಎಷ್ಟು ;

(ಈ) ಯಾವ ಕಾಲಮಿತಿಯೊಳಗೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಅಧಿಕಾರಿಗಳು ಹಾಗೂ ನೌಕರರನ್ನು ಬಿಡುಗಡೆಗೊಳಿಸಲಾಗುವುದು ?

## ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೦ (೧೦೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆ ಜಾರಿಯಾಗಿದೆಯೇ ;

(ಆ) ಸದರಿ ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಿಗುವ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳ ವಿವರಗಳೇನು ;

(ಇ) ಸದರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಸರ್ಕಾರ ರೂಪಿಸಿರುವ ನಿಯಮ ಹಾಗೂ ಮಾನದಂಡಗಳೇನು ;

(ಈ) ಕಳೆದ ಆರ್ಥಿಕ ವರ್ಷದಲ್ಲಿ ಎಷ್ಟು ಜನ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ನಗದು ರಹಿತ ವೈದ್ಯಕೀಯ ಸೇವೆ ಯೋಜನೆಯ ಲಾಭ ಪಡೆದಿದ್ದಾರೆ ಮತ್ತು ಅದಕ್ಕೆ ಖರ್ಚಾಗಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಪೊಲೀಸ್ ವಸತಿ ಗೃಹಗಳು ಅತ್ಯಂತ ದುಸ್ಥಿತಿಯಲ್ಲಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೧ (೧೦೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಾದ್ಯಂತ ಬೆಂಗಳೂರು ನಗರವು ಸೇರಿದಂತೆ ಬಹುತೇಕ ನಗರ ಪ್ರದೇಶ ಮತ್ತು ಗ್ರಾಮೀಣ ಪ್ರದೇಶಗಳಲ್ಲಿರುವ ಪೊಲೀಸ್ ವಸತಿ ಗೃಹಗಳು ಪಾಳುಬಿದ್ದು ಶಿಥಿಲಾವಸ್ಥೆ ತಲುಪಿ ಅತ್ಯಂತ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಳೆಯ ವಸತಿ ಗೃಹಗಳ ನವೀಕರಣ ಹಾಗೂ ಸುಸಜ್ಜಿತ ಹೊಸ ವಸತಿ ಗೃಹಗಳ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದೆಯೇ ;

(ಇ) ಬಹುತೇಕ ಪೊಲೀಸ್ ವಸತಿ ಗೃಹಗಳಲ್ಲಿ ಸಾಕಷ್ಟು ಮೂಲಭೂತ ಸೌಕರ್ಯಗಳ ಕೊರತೆ ಇದ್ದು ಅವುಗಳ ನಿವಾರಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಪೊಲೀಸ್ ವಸತಿ ಗೃಹಗಳ ಅವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ಕಳೆದ ಆರ್ಥಿಕ ವರ್ಷದಲ್ಲಿ ಕೈಗೊಂಡಿರುವ ಕಾಮಗಾರಿಗಳು ಹಾಗೂ ವಿನಿಯೋಗಿಸಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ಕ್ರೀಡಾ ಹಾಸ್ಟೆಲ್‌ಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೨ (೧೦೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೇ ; ಹಾಗೂ ಅವುಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ;

(ಇ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಪ್ರತಿ ಹಾಸ್ಟೆಲ್‌ನ ವಿವರ ಪ್ರತ್ಯೇಕವಾಗಿ ನೀಡುವುದು)

(ಈ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಯಾವುವು ;

(ಉ) ಸದರಿ ವಿದ್ಯಾರ್ಥಿಗಳು ಕ್ರೀಡಾ ರಂಗದಲ್ಲಿ ಅದ್ವಿತೀಯ ಸಾಧನೆ ಮಾಡುವಂತೆ ಉತ್ತೇಜನ ಮತ್ತು ಪ್ರೇರೆಪಣೆ ನೀಡಲು ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು ?

## ಗ್ಯಾರಂಟಿ ಹಾಗೂ ಇನ್ನಿತರ ಸರ್ಕಾರಿ ವೆಚ್ಚಗಳಿಗೆ ಅಗತ್ಯವಿರುವ ಹಣ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು)**

೯೫೩ (೧೦೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಸಂಗ್ರಹವಾಗುತ್ತಿರುವ ಮಾಸಿಕ ಆದಾಯ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಗ್ಯಾರಂಟಿ ಯೋಜನೆಗಳು ಅಸ್ತಿತ್ವಕ್ಕೆ ಬಂದಾಗಿನಿಂದ ಯೋಜನೆಗಳಿಗೆ ವೆಚ್ಚವಾಗಿರುವ ಹಣ ಎಷ್ಟು ; ಗ್ಯಾರಂಟಿ ಯೋಜನೆಗಳಿಗಾಗಿ ಪ್ರತಿ ವರ್ಷಕ್ಕೆ ಅಗತ್ಯವಿರುವ ಹಣ ಎಷ್ಟು ; (ಯೋಜನೆವಾರು ಸಮಗ್ರ ಮಾಹಿತಿ ಒದಗಿಸುವುದು)

(ಇ) ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ರಚನೆ ಮಾಡಲಾಗಿದೆಯೇ ; ಅವರಿಗೆ ನೀಡುತ್ತಿರುವ ವೇತನ/ಗೌರವ ಧನ ಹಾಗೂ ಇನ್ನಿತರೆ ಸೌಲಭ್ಯಗಳೇನು ; ಇದಕ್ಕೆ ಅಗತ್ಯವಿರುವ ಹಣ ಎಷ್ಟು ;

(ಈ) ಗ್ಯಾರಂಟಿ ಯೋಜನೆಗಳನ್ನು ಹೊರತುಪಡಿಸಿ ಸರ್ಕಾರಿ ಇಲಾಖೆಗಳ ಕಾರ್ಯನಿರ್ವಹಣೆಗೆ ಮತ್ತು ನೌಕರರ ವೇತನ/ಪಿಂಚಣಿ ಸೇರಿದಂತೆ ಇನ್ನಿತರೆ ಸರ್ಕಾರಿ ವೆಚ್ಚಗಳಿಗೆ ಪ್ರತಿ ತಿಂಗಳು ಅಗತ್ಯವಿರುವ ಹಣ ಎಷ್ಟು ; (ಇಲಾಖೆವಾರು ವಿವರ ನೀಡುವುದು)

(ಉ) ರಾಜ್ಯ ಸರ್ಕಾರ ವಿವಿಧ ಮೂಲಗಳಿಂದ ಪಡೆದಿರುವ ಸಾಲಕ್ಕೆ ಪ್ರತಿ ತಿಂಗಳು ಪಾವತಿಸುತ್ತಿರುವ ಅಸಲು ಹಾಗೂ ಬಡ್ಡಿ ಎಷ್ಟು; ಕಳೆದ ಒಂದು ವರ್ಷದಿಂದ ರಾಜ್ಯ ಸರ್ಕಾರ ಪಡೆದಿರುವ ಬಾಹ್ಯ ಮತ್ತು ಆಂತರಿಕ ಸಾಲ ಎಷ್ಟು ? (ವಿವರ ನೀಡುವುದು)

## ರಾಜ್ಯಾದ್ಯಂತ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೪ (೧೦೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಸೇರಿದಂತೆ ರಾಜ್ಯಾದ್ಯಂತ ಕೊಲೆ, ಅತ್ಯಾಚಾರ, ಡ್ರಗ್ ಮಾಫಿಯಾ, ಗ್ಯಾಂಗ್‌ವಾರ್ ಸೇರಿದಂತೆ ಗಂಭೀರ ಅಪರಾಧ ಪ್ರಕರಣಗಳು ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕಳೆದ ಒಂದು ವರ್ಷದಿಂದ ನಡೆದಿರುವ ಪ್ರಕರಣಗಳ ಜಿಲ್ಲಾವಾರು ವಿವರವನ್ನು ನೀಡುವುದು)

(ಆ) ಎಷ್ಟು ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಾಗಿದೆ ; ಎಫ್.ಐ.ಆರ್ ದಾಖಲಾದ ನಂತರ ಬಿ ರಿಪೋರ್ಟ್ ಸಲ್ಲಿಸಲಾದ ಮತ್ತು ಪತ್ತೆ ಹಚ್ಚಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಪರಾಧ ಪ್ರಕರಣಗಳು ಹೆಚ್ಚಳವಾಗಲು ಕಾರಣಗಳೇನು ; ಅಪರಾಧ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ;

(ಈ) ಅಪರಾಧ ಕೃತ್ಯಗಳನ್ನು ತಡೆಯಲು ವಿಫಲವಾಗಿರುವ ಎಷ್ಟು ಜನ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯ ಸರ್ಕಾರಿ ನೌಕರರಿಗೆ ೭ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿ ಮಾಡುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೫ (೧೦೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ರಚಿಸಿದ್ದ ೭ನೇ ವೇತನ ಆಯೋಗ ತನ್ನ ವರದಿಯನ್ನು ಸಲ್ಲಿಸಿದೆಯೇ ; ವೇತನ ಆಯೋಗದ ಶಿಫಾರಸ್ಸುಗಳೇನು ;

(ಆ) ವೇತನ ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ಅಂಗೀಕರಿಸಿದೆಯೇ ; ಹಾಗಿದ್ದಲ್ಲಿ, ಆಯೋಗದ ಶಿಫಾರಸ್ಸುಗಳನ್ನು ಈವರೆಗೆ ಜಾರಿಗೆ ತರದಿರಲು ಕಾರಣಗಳೇನು ;

(ಇ) ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೆ ತರುವಂತೆ ನೌಕರರು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಶಿಫಾರಸ್ಸುಗಳ ಜಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಂದಿನಿಂದ ಜಾರಿಗೆ ತರಲಾಗುವುದು ?

## ಬಿಟ್ ಕಾಯಿನ್ ಪ್ರಕರಣದ ತನಿಖೆ ವಿಳಂಬಗೊಂಡಿರುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೬ (೧೦೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಟ್ ಕಾಯಿನ್ ಪ್ರಕರಣದ ತನಿಖೆ ಆರಂಭಗೊಂಡಿದ್ದು ಯಾವಾಗ ; ದಾಖಲಿಸಿರುವ ಪ್ರಕರಣಗಳೆಷ್ಟು ; ತನಿಖೆ ಯಾವ ಹಂತದಲ್ಲಿದೆ ; ಒಟ್ಟು ಎಷ್ಟು ಬಿಟ್ ಕಾಯಿನ್‌ಗಳು ಕಳುವಾಗಿದೆ ; ಇದರ ಮೌಲ್ಯ ಎಷ್ಟು ; (ಸಮಗ್ರ ಮಾಹಿತಿ ನೀಡುವುದು)

(ಆ) ಪೊಲೀಸ್ ಅಧಿಕಾರಿ/ಸಿಬ್ಬಂದಿಗಳೂ ಸೇರಿದಂತೆ ಪ್ರಕರಣದಲ್ಲಿ ಈವರೆಗೆ ಎಷ್ಟು ಜನರನ್ನು ಬಂಧಿಸಲಾಗಿದೆ ; ಬಂಧಿತರ ವಿರುದ್ಧ ಹೂಡಿರುವ ಪ್ರಕರಣಗಳ ಮಾಹಿತಿ ನೀಡುವುದು ; ಪ್ರಕರಣದಲ್ಲಿ ನಾಪತ್ತೆಯಾದವರ ವಿವರ ನೀಡುವುದು ;

(ಇ) ಪ್ರಕರಣದ ತನಿಖಾಧಿಕಾರಿ ಹತ್ಯೆಗೆ ಯತ್ನ ನಡೆದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಹತ್ಯೆಯನ್ನು ನಡೆಸಿದ್ದು ಯಾರು ;

(ಈ) ಪ್ರಕರಣದ ತನಿಖೆ ವಿಳಂಬಗೊಳ್ಳಲು ಕಾರಣಗಳೇನು ; ತ್ವರಿತಗತಿಯಲ್ಲಿ ತನಿಖೆ ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫೭ (೧೦೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರದ ಸಚಿವಾಲಯ ಸೇರಿದಂತೆ ವಿವಿಧ ಇಲಾಖೆಗಳು ಹಾಗೂ ನಿಗಮ/ಮಂಡಳಿಗಳಲ್ಲಿ ಮಂಜೂರಾಗಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; ಈ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು ; (ಇಲಾಖೆವಾರು ವಿವರವನ್ನು ಹುದ್ದೆವಾರು ನೀಡುವುದು)

(ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ; ದೊಡ್ಡ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಇರುವುದರಿಂದ ದೈನಂದಿನ ಆಡಳಿತ ನಿರ್ವಹಣೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಹುದ್ದೆಗಳ ಭರ್ತಿಗೆ ಹೊರಡಿಸಿರುವ ಅಧಿಸೂಚನೆಗಳೆಷ್ಟು ; ಕಳೆದ ಒಂದು ವರ್ಷದಿಂದ ಆಗಿರುವ ನೇಮಕಾತಿಗಳೆಷ್ಟು ? (ಸಮಗ್ರ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕ್ರೀಡಾಂಗಣಗಳ ಕೊರತೆಯಿರುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೫೮ (೧೦೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶೇಕಡಾ ೨೫ರಷ್ಟು ಶಾಲಾ-ಕಾಲೇಜುಗಳಿಗೆ ಕ್ರೀಡಾಂಗಣಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳಿಗೆ ಕ್ರೀಡಾಂಗಣಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಕ್ರೀಡಾಂಗಣಗಳನ್ನು ಹೊಂದಿರುವ ಶಾಲಾ-ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಜಿಲ್ಲಾವಾರು ನೀಡುವುದು)

(ಇ) ರಾಜ್ಯದಲ್ಲಿರುವ ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದ ಕ್ರೀಡಾಂಗಣಗಳ ನಿರ್ವಹಣೆಗೆ ಸಂಪನ್ಮೂಲದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕ್ರೀಡಾಂಗಣಗಳ ನಿರ್ವಹಣೆಗೆ ಕಳೆದ ೫ ವರ್ಷಗಳಲ್ಲಿ ಸರ್ಕಾರ ಒದಗಿಸಿರುವ ಅನುದಾನವೆಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೯ (೧೦೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಹಾಗೂ ಮೂರು ವರ್ಷಗಳಿಗೊಮ್ಮೆ ಪರಿಶೀಲಿಸುವ ಕುರಿತು ಸರ್ಕಾರದಿಂದ ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ ; ಹಾಗಿದ್ದಲ್ಲಿ, ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಅಗತ್ಯ ಕಾರಣಗಳೇನು ; ಯಾವ ಉದ್ದೇಶಗಳಿಗಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗುತ್ತದೆ ; (ಮಾಹಿತಿ ನೀಡುವುದು)

(ಆ) ೨೦೦೪ನೇ ಸಾಲಿನಿಂದ ಇಲ್ಲಿಯವರೆಗೆ ಸರ್ಕಾರದಿಂದ ಹಲವಾರು ಸುತ್ತೋಲೆಗಳು ಮತ್ತು ನೆನಪೋಲೆಗಳನ್ನು ಹೊರಡಿಸಲಾಗಿದ್ದರೂ, ಇದುವರೆಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಮತ್ತು ಪರಿಷ್ಕರಿಸದಿರುವ ಇಲಾಖೆಗಳು ಯಾವುವು ; ಪರಿಷ್ಕರಿಸದಿರುವ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಅಗತ್ಯವಿಲ್ಲವೇ ; ಹಾಗಿದ್ದಲ್ಲಿ, ಅಗತ್ಯತೆ ಏಕಿಲ್ಲ ; ಅಗತ್ಯವಿದ್ದಲ್ಲಿ, ಇದುವರೆಗೆ ಪರಿಷ್ಕರಿಸದಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ದೀರ್ಘಕಾಲದಿಂದ ಪರಿಷ್ಕರಿಸದಿರುವ ಇಲಾಖೆಗಳಲ್ಲಿ ಸಮಗ್ರವಾಗಿ ಪರಿಷ್ಕರಿಸುವ ಕುರಿತು ಸರ್ಕಾರ ಕ್ರಮ ವಹಿಸುವುದೇ ; ಹಾಗಿದ್ದಲ್ಲಿ, ಸರ್ಕಾರ ಯಾವುದಾದರೂ ಕಾಲಮಿತಿ ನಿಗದಿಪಡಿಸಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಈ) ಪರಿಷ್ಕರಿಸದಿರುವ ಇಲಾಖೆಗಳ ಮುಖ್ಯಸ್ಥರುಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮ ವಹಿಸಿದೆ ? (ಮಾಹಿತಿ ನೀಡುವುದು)

## ರಾಜ್ಯ ಸರ್ಕಾರದ ವಿರುದ್ಧ ದಾಖಲಾಗಿರುವ ನ್ಯಾಯಾಲಯ ಪ್ರಕರಣಗಳ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೬೦ (೧೦೨೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ಮತ್ತು ರಾಜ್ಯದ ವಿವಿಧ ಇಲಾಖೆಗಳ ವಿರುದ್ಧ ಸರ್ವೋಚ್ಚ ನ್ಯಾಯಾಲಯ, ಉಚ್ಚ ನ್ಯಾಯಾಲಯ ಮತ್ತು ಇತರೆ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸಲು ಇಲಾಖೆಗಳು ನಿರುತ್ಸಾಹ ತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಪ್ರಕರಣಗಳಲ್ಲಿ ರಾಜ್ಯ ಸರ್ಕಾರದ ಪರವಾಗಿ ವಾದಿಸಲು ನೇಮಿಸಿಕೊಂಡಿರುವ ನ್ಯಾಯವಾದಿಗಳ ಸಂಖ್ಯೆ ಎಷ್ಟು ; ಈ ಪೈಕಿ ಖಾಸಗಿ ನ್ಯಾಯವಾದಿಗಳು ಎಷ್ಟು ಮತ್ತು ಸರ್ಕಾರಿ ಅಭಿಯೋಜಕರ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಅಕ್ರಮ ರೋಹಿಂಗ್ಯಾ ಮತ್ತು ಬಾಂಗ್ಲಾದೇಶಿಯರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೭೧ (೧೦೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಮಾರತ್ ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರಬೀಸನ ಹಳ್ಳಿ, ಕಾಡು ಬೀಸನ ಹಳ್ಳಿ ಮುಂತಾದ ಕಡೆಗಳಲ್ಲಿ ಅಕ್ರಮವಾಗಿ ದೇಶ ಪ್ರವೇಶಿಸಿ ವಾಸಿಸುತ್ತಿರುವ ಬಾಂಗ್ಲಾದೇಶಿಯರ ಕ್ಯಾಂಪ್‌ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರು ನಗರದಲ್ಲಿ ವಾಸಿಸುತ್ತಿರುವ ಅಕ್ರಮ ವಲಸಿಗರಾದ ಬಾಂಗ್ಲಾದೇಶಿಗಳು ಸರ್ಕಾರದ ಸೌಲಭ್ಯಗಳನ್ನು ಅನಧಿಕೃತವಾಗಿ ಬಳಸುತ್ತಿದ್ದು, ಇದಕ್ಕೆ ಯಾವುದೇ ರೀತಿಯ ತೆರಿಗೆ ಪಾವತಿಸುತ್ತಿಲ್ಲವಾದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರು ಸ್ಥಳೀಯವಾಗಿ ಲಭ್ಯವಿರುವ ಶ್ರಮಜೀವಿ ಕೆಲಸಗಳನ್ನು ಕಡಿಮೆ ಕೂಲಿಗೆ ಮಾಡುತ್ತಿರುವುದರಿಂದ ಕನ್ನಡಿಗರಿಗೆ ಸಣ್ಣ ಪುಟ್ಟ ಕೆಲಸಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರವು ಈ ಅಕ್ರಮ ಬಾಂಗ್ಲಾದೇಶಿಯರಿಗೆ ವರ್ಕ್ ಪರ್ಮಿಟ್ ನೀಡಿದೆಯೇ ;

(ಈ) ಅಕ್ರಮ ವಲಸಿಗರು ಬೆಂಗಳೂರಿನಲ್ಲಿ ನೆಲೆಸಿ ಕೊಲೆ ದರೋಡೆ ಮತ್ತಿತರ ಪ್ರಕರಣಗಳನ್ನು ನಡೆಸಿ ಬಳಿಕ ತಮ್ಮ ತವರಿಗೆ ಹೋಗುತ್ತಿರುವುದರಿಂದ ಹಲವಾರು ಕೊಲೆ ಪ್ರಕರಣಗಳು ಇದುವರೆಗೂ ಪತ್ತೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ ಸರ್ಕಾರದ ನಿಲುವೇನು ?

## ಐ.ಎಂ.ಎ ಹಗರಣದ ಆರೋಪಿ ಅಧಿಕಾರಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೨ (೧೦೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐ.ಪಿ.ಎಸ್ ಅಧಿಕಾರಿಗಳಿಗೆ ಯಾವ ದಿನಾಂಕದಂದು ಇಲಾಖಾ ವಿಚಾರಣೆಯ ಸಂಬಂಧ ನೋಟೀಸ್ ನೀಡಲಾಗಿದೆ ; ಯಾವ ಅಧಿಕಾರವನ್ನು ವಿಚಾರಣಾ ಅಧಿಕಾರಿಯನ್ನಾಗಿ ನೇಮಿಸಲಾಗಿದೆ ; ಇದುವರೆಗೆ ಎಷ್ಟು ದಿನಗಳ ಕಾಲ ಇಲಾಖಾ ವಿಚಾರಣೆ ನಡೆಸಲಾಗಿದೆ ; (ದಿನಾಂಕದೊಂದಿಗೆ ಮಾಹಿತಿ ನೀಡುವುದು)

(ಆ) ತನಿಖಾ ಸಂಸ್ಥೆಯು ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐ.ಪಿ.ಎಸ್ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳಬೇಕೆಂದು ಶಿಫಾರಸ್ಸು ಮಾಡಿದೆ ; ಯಾವ ದಿನಾಂಕದಂದು ಮಾಡಿದೆ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐ.ಪಿ.ಎಸ್ ಅಧಿಕಾರಿಗಳ ಮೇಲಿನ ಆರೋಪದ ಕುರಿತು ಯು.ಪಿ.ಎಸ್ಸಿ ಮತ್ತು ಕೇಂದ್ರ ಗೃಹ ಇಲಾಖೆಗೆ ಪತ್ರ ಬರೆಯುಲಾಗಿದೆಯೇ ; ಯಾವ ದಿನಾಂಕದಂದು ಪತ್ರ ಬರೆಯಲಾಗಿದೆ ; ಭ್ರಷ್ಟ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ನಿಯಮದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಐ.ಪಿ.ಎಸ್ ಅಧಿಕಾರಿಗಳು ಈ ಪ್ರಕರಣದಲ್ಲಿ ಭಾಗಿಯಾಗಿರುವ ಕಾರಣಕ್ಕಾಗಿ ಅವರನ್ನು ರಕ್ಷಿಸಲು ಮತ್ತು ಕೆಳ ಹಂತದ ಅಧಿಕಾರಿಗಳನ್ನು ಮಾತ್ರವೇ ಶಿಕ್ಷಿಸಲು ಲಾಭಿ ನಡೆಯುತ್ತಿರುವ ಕುರಿತು ಸರ್ಕಾರದ ನಿಲುವೇನು ; ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐ.ಪಿ.ಎಸ್ ಅಧಿಕಾರಿಗಳಿಗೆ ಮುಂಬಡ್ತಿಯನ್ನು ನೀಡುವ ಮೂಲಕ ಭ್ರಷ್ಟ ಅಧಿಕಾರಿಗಳನ್ನು ಸರ್ಕಾರ ರಕ್ಷಿಸುತ್ತದೆ ಮತ್ತು ಭ್ರಷ್ಟಚಾರವನ್ನು ಪ್ರೋತ್ಸಾಹಿಸುತ್ತದೆ ಎಂಬುದರ ಕುರಿತು ಸರ್ಕಾರದ ನಿಲುವೇನು ?

## ಅಗ್ನಿ ಶಾಮಕ ಇಲಾಖೆಯಿಂದ ಎನ್.ಓ.ಸಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೩ (೧೦೪೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನವ ಮಂಗಳೂರು ಬಂದರಿನ ನಿರ್ವಸಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳೆ ಗ್ರಾಮದಲ್ಲಿರುವ ಯಾವ ಯಾವ ಕೈಗಾರಿಕೆಗಳಿಗೆ ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ನೀಡಲಾಗಿದೆ ; ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಅಥವಾ ಸದರಿ ಮರದ ಮಿಲ್ಲಿನ ಅನುಮತಿಯನ್ನು ಮುಂದುವರೆಸಲು ಅಗ್ನಿಶಾಮಕ ಇಲಾಖೆಯ ನಿರಾಕ್ಷೇಪಣಾ ಪತ್ರದ ಅಗತ್ಯವಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ;

(ಆ) ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದು, ರಸ್ತೆಯ ಇಕ್ಕೆಲಗಳಲ್ಲಿ ಒಣ ಮರದ ದಿಮ್ಮಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸುತ್ತಿದ್ದು ಅಗ್ನಿ ಅವಘಡ ಉಂಟಾದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ; ಅಗ್ನಿಶಾಮಕ

ಇಲಾಖೆಯು ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಅನುಮತಿ ನೀಡಿದೆಯೇ ; ಇಲ್ಲವಾದಲ್ಲಿ, ಈ ಅಕ್ರಮ ಸಂಗ್ರಹದ ಕುರಿತು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಕ್ಕಳ ಮಾರಾಟ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೪ (೧೦೩೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷದಲ್ಲಿ ಮಕ್ಕಳ ಮಾರಾಟ ಮತ್ತು ಕಳ್ಳತನದ ಬಗ್ಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಕ್ಕಳ ಮಾರಾಟ ಮತ್ತು ಕಳ್ಳತನದ ಪ್ರಕರಣಗಳಲ್ಲಿ ಪತ್ತೆಯಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೧ ವರ್ಷದಲ್ಲಿ ಆಸ್ಪತ್ರೆಗಳಿಂದ ಮಕ್ಕಳ ಕಳವು ಆದ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಮಕ್ಕಳು ಪತ್ತೆಯಾಗಿವೆ; ಇದರಲ್ಲಿ ಆಸ್ಪತ್ರೆಯ ಸಿಬ್ಬಂದಿಗಳು ಭಾಗಿಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ?

## ಮರಕಳ್ಳತನದ ಪ್ರಕರಣದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೫ (೧೦೪೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷದಲ್ಲಿ ಮರ ಕಳ್ಳತನದ ಎಷ್ಟು ಪ್ರಕರಣಗಳು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವರದಿಯಾಗಿವೆ ; ಅದರಲ್ಲಿನ ಕಾಡಿನ

ಮರಗಳನ್ನು ಕಳ್ಳತನದಿಂದ ಕಡಿದ ಪ್ರಕರಣಗಳೆಷ್ಟು ; ಕಳ್ಳತನದಿಂದ ಕಡಿದ ಮರಗಳಲ್ಲಿ ಎಷ್ಟು ಮರಗಳನ್ನು ಸಾಮಿಲ್ಲುಗಳಿಂದ ವಶಪಡಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ನವ ಮಂಗಳೂರು ಬಂದರಿನ ನಿರ್ವಸಿತರಿಗೆ ಆಶ್ರಯ ಕಲ್ಪಿಸುವ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮಕ್ಕೆ ಪೊಲೀಸ್ ಗಸ್ತು ಎಷ್ಟು ದಿನಗಳಿಗೊಮ್ಮೆ ನಡೆಸಲಾಗುತ್ತಿದೆ ;

(ಇ) ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದು, ರಸ್ತೆಯ ಇಕ್ಕೆಲಗಳಲ್ಲಿ ಒಣ ಮರದ ದಿಮ್ಮಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸುತ್ತಿದ್ದು, ಯಾವುದೇ ರೀತಿಯ ಅವಘಡವಾದಲ್ಲಿ ಯಾರನ್ನು ಹೊಣೆಗಾರನ್ನಾಗಿ ಮಾಡಲಾಗುತ್ತದೆ ;

(ಈ) ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಪೊಲೀಸ್ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ನೀಡಲಾಗಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

**ಪ್ರವಾಸೋದ್ಯಮ ಇಲಾಖೆಯಲ್ಲಿ ಅಕ್ರಮ ಹಣ ವರ್ಗಾವಣೆ ಆದ ಬಗ್ಗೆ**
**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) :-**

೯೬೬ (೧೧೧೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ೨.೪೭ ಕೋಟಿ ಹಣ ಅಕ್ರಮವಾಗಿ ವರ್ಗಾವಣೆ ಆಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ಪ್ರಕರಣ ಯಾವಾಗ ಬೆಳಕಿಗೆ ಬಂದಿದೆ ; (ಮಾಹಿತಿ ನೀಡುವುದು)

(ಆ) ಈ ಪ್ರಕರಣದ ಕುರಿತು ಪೊಲೀಸ್ ಠಾಣೆಗೆ ಯಾರು ಹಾಗೂ ಯಾವ ದಿನಾಂಕದಂದು ದೂರು ದಾಖಲಿಸಿದ್ದಾರೆ ;

(ಇ) ಈ ಪ್ರಕರಣದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೆಳದಂಡೆ ಮುಲ್ಲಾಮಾರಿ ಯೋಜನೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು ) :-**

೯೬೭ (೧೧೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಐನಾಪೂರ ಏತ ನೀರಾವರಿ ಯೋಜನೆಯ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ಯಾವಾಗ ನೀಡಲಾಗಿದೆ ; ಹಾಗೂ ಸದರಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಾಗ ನಿಗದಿಪಡಿಸಲಾದ ಹಣ ಎಷ್ಟು ;

(ಆ) ಕೃಷ್ಣಾ ನ್ಯಾಯಾಧಿಕರಣದನ್ವಯ ಕೆಳದಂಡೆ ಮುಲ್ಲಾಮಾರಿ ಯೋಜನೆಗೆ ಹಂಚಿಕೆಯಾದ ನೀರಿನ ಪ್ರಮಾಣ ಎಷ್ಟು ; ಇದರಲ್ಲಿ ಸದರಿ ಐನಾಪೂರ ಏತ ನೀರಾವರಿ ಯೋಜನೆಗೆ ನಿಗದಿಪಡಿಸಲಾದ ನೀರಿನ ಪ್ರಮಾಣ ಎಷ್ಟು ; ಈ ಯೋಜನೆಯಿಂದ ಚಿಂಚೋಳಿ ತಾಲ್ಲೂಕಿನ ಎಷ್ಟು ಹಳ್ಳಿಗಳ ಎಷ್ಟು ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಬಹುದಾಗಿದೆ;

(ಇ) ಸದರಿ ಯೋಜನೆಯ ಕಾಮಗಾರಿ ಮುಗಿಸಲು ಬೇಕಾಗುವ ಕಾಲಾವಧಿ ಎಷ್ಟು ; ಈ ಸಂಬಂಧ ಸದರಿ ಯೋಜನೆಯ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಸರ್ಕಾರದಿಂದ

ಅನುಮೋದನೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಮೊತ್ತದ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಸರ್ಕಾರ ಅನುಮೋದನೆ ನೀಡಿದೆ ?

(ಈ) ಈ ಯೋಜನೆ ಪ್ರಾರಂಭವಾಗದಿರುವ ಕುರಿತು ಯೋಜನಾ ವ್ಯಾಪ್ತಿಯ ರೈತರು ಸಹಿ ಸಂಗ್ರಹ ಚಳುವಳಿ ಪ್ರಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು; ಹಾಗೂ ೨೦೨೪-೨೫ನೇ ಮುಂಗಡ ಪತ್ರದಲ್ಲಿ ಈ ಯೋಜನೆಗೆ ಅಗತ್ಯವಾದ ಅನುದಾನ ಒದಗಿಸಲಾಗುವುದೇ ? (ವಿವರ ನೀಡುವುದು)

## ಜಲಸಂವರ್ಧನೆ ಯೋಜನೆಯ ಅನುದಾನ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು ) :–**

೯೬೮ (೧೧೨೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಜಲ ಸಂವರ್ಧನೆ ಯೋಜನೆಯಡಿಯಲ್ಲಿ ಆಯ್ಕೆ ಮಾಡಿರುವ ಜಿಲ್ಲಾ ಪಂಚಾಯತಿ ಕೆರೆಗಳು ಹಾಗೂ ಸಣ್ಣ ನೀರಾವರಿ ಕೆರೆಗಳು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಸರ್ಕಾರವು ಕೆರೆಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡಿದೆಯೇ ; ಹಾಗಿದ್ದಲ್ಲಿ, ಬಿಡುಗಡೆ ಮಾಡಿರುವ ಅನುದಾನ ಎಷ್ಟು ಹಾಗೂ ಖರ್ಚಾದ ಅನುದಾನ ಎಷ್ಟು ; (ತಾಲ್ಲೂಕುವಾರು ಕಳೆದ ಐದು ವರ್ಷಗಳ ಮಾಹಿತಿ ನೀಡುವುದು)

(ಇ) ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳು ಯಾವುವು; ಸದರಿ ಕಾಮಗಾರಿಗಳು ಯಾವ ಯಾವ ಹಂತದಲ್ಲಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಈ ಕೆರೆಗಳಿಗೆ ನೀರು ತುಂಬಿಸಿ, ಬೋರ್‌ವೆಲ್‌ಗಳಿಗೆ ಅಂತರ್ಜಲ ಮರುಪೂರಣ ಆಗುವಂತೆ ಮಾಡಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; ಇದಕ್ಕಾಗಿ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ಕಳೆದ ಐದು ವರ್ಷಗಳ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು)

## ಸಣ್ಣ ನೀರಾವರಿ ಇಲಾಖೆಯ ಕೆರೆಗಳ ಒತ್ತುವರಿಯನ್ನು ತೆರವುಗೊಳಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೯೭೯ (೧೦೪೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ; (ಅವುಗಳ ಹೆಸರು, ವಿಸ್ತೀರ್ಣದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಕೆರೆಗಳು ಒತ್ತುವರಿಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಈ ಕೆರೆ ಒತ್ತುವರಿಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿನ ಇಲಾಖಾ ವ್ಯಾಪ್ತಿಗೆ ಬರುವ ಕೆರೆ, ಕುಂಟೆ ಮತ್ತು ಜಲಮೂಲಗಳ ಒತ್ತುವರಿಗಳನ್ನು ತೆರವುಗೊಳಿಸಲು ಸರ್ಕಾರದ ಮಟ್ಟದಲ್ಲಿ ಕೈಗೊಂಡಿರುವ ಕ್ರಮಗಳೇನು ? (ಈ ಕ್ರಮಗಳಿಂದ ಇಲ್ಲಿಯವರೆಗೆ ಒತ್ತುವರಿದಾರರಿಂದ ಬಿಡಿಸಲಾಗಿರುವ ವಿವರಗಳ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

## ರಾಜ್ಯದಲ್ಲಿ ಹೊಸ ಮಾದರಿಯ ಸಬ್ ಸರ್ಫೇಸ್ ಡ್ಯಾಂಗಳನ್ನು ನಿರ್ಮಾಣ ಮಾಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೯೭೦ (೧೦೪೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಚೆಕ್ ಡ್ಯಾಂಗಳನ್ನು ನಿರ್ಮಿಸಲಾಗುತ್ತಿದ್ದು, ಈ ಸಂಬಂಧ ಯಾವುದಾದರೂ ಹೊಸ ಪ್ರಯೋಗಗಳನ್ನು ಅಥವಾ ಹೊಸ ವಿಧಗಳನ್ನು ಬಳಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ವಿವರಗಳೊಂದಿಗೆ ಮಾಹಿತಿ ಒದಗಿಸುವುದು ;

(ಆ) ಆಂಧ್ರ ಪ್ರದೇಶ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಚೆಕ್ ಡ್ಯಾಂಗಳ ಜೊತೆಗೆ ಹೊಸ ವಿಧದ ಸಬ್ ಸರ್ಫೇಸ್ ಡ್ಯಾಂ ಮಾದರಿಗಳನ್ನು ನಿರ್ಮಾಣ ಮಾಡುತ್ತಿದ್ದು ಇದರಿಂದಾಗಿ ಬರಪೀಡಿತ ಜಾಗದಲ್ಲಿಯು ಅಂತರ್ಜಲವು ಹೆಚ್ಚಿನ ಮಟ್ಟದಲ್ಲಿ ಏರಿಕೆಯಾಗುತ್ತಿದ್ದು,ಈ ಹೊಸ ವಿಧದ ಸಬ್ ಸರ್ಫೇಸ್ ಡ್ಯಾಂಗಳ ನಿರ್ಮಾಣದ ಅಧ್ಯಯನ ನಡೆಸಿ ಅಳವಡಿಸಿಕೊಳ್ಳಲು ಸರ್ಕಾರದ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರದ ನೀತಿ ಆಯೋಗವು ಪ್ರಶಂಸೆ ಮಾಡಿರುವ ಈ ಸಬ್ ಸರ್ಫೇಸ್ ಡ್ಯಾಂಗಳ ಮಾದರಿ ಪ್ರಯೋಗವನ್ನು ಬಳ್ಳಾರಿ ಜಿಲ್ಲೆಯ ವೇದಾವತಿ ನದಿಯಲ್ಲಿ ನಿರ್ಮಾಣ ಮಾಡಲು ಸರ್ಕಾರದ ಕ್ರಮಗಳೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ರಸ್ತೆ ಬದಿಯ ಗಿಡಮರಗಳ ಟ್ರೀ ಗಾರ್ಡ್‌ಗಳನ್ನು ತೆಗೆಯುವ ಬಗ್ಗೆ

ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-

೯೭೧ (೧೦೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ರಸ್ತೆ ಬದಿ, ಖಾಲಿ ಜಾಗಗಳಲ್ಲಿ ಗಿಡಗಳನ್ನ ರಕ್ಷಿಸಲು ಟ್ರೀ ಗಾರ್ಡ್‌ಗಳನ್ನು ಅಳವಡಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಗಿಡಗಳು ಬೆಳೆದ ನಂತರ ಟ್ರೀ ಗಾರ್ಡ್‌ಗಳನ್ನು ತೆಗೆಯಲು ಇರುವ ಕ್ರಮಗಳೇನು ; ಗಿಡ ನೆಟ್ಟ ಎಷ್ಟು ವರ್ಷಗಳ ನಂತರ ಇವುಗಳನ್ನು ತೆಗೆಯಲಾಗುವುದು, ಇದಕ್ಕೆ ಇರುವ ನಿಯಮಗಳೇನು ;

(ಆ) ಗಿಡಗಳನ್ನು ನೆಟ್ಟು ಆ ಗಿಡಗಳು ಬೆಳೆದ ನಂತರವು ಕೂಡ ಕಬ್ಬಿಣದ ಟ್ರೀ ಗಾರ್ಡ್‌ಗಳನ್ನು ತೆರವು ಮಾಡದೇ ಗಿಡಗಳು ಬೆಳೆಯಲು ತೊಂದರೆಯಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇವುಗಳನ್ನು ತೆರವುಗೊಳಿಸಲು ಬಿ.ಬಿ.ಎಂ.ಪಿ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ರಸ್ತೆಗಳಿಗೆ ಡಾಂಬರ್ ಹಾಕುವ ಸಂದರ್ಭಗಳಲ್ಲಿ ರಸ್ತೆ ಬದಿಗಳ ಗಿಡ ಮರಗಳನ್ನು ಸೇರಿಸಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ರೀತಿ ಮಾಡದೆ ಇರಲು ಗುತ್ತಿಗೆದಾರರಿಗೆ ನೀಡಿರುವ ಸೂಚನೆಗಳೇನು ; ಸೂಚನೆ ನೀಡಿದ ಮೇಲು ಈ ರೀತಿ ಗಿಡ-ಮರಗಳ ಬುಡಕ್ಕೆ ಡಾಂಬರ್ ಹಾಕುವ ಗುತ್ತಿಗೆದಾರರಿಗೆ ಕೈಗೊಂಡ ಕಠಿಣ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಬೆಂಗಳೂರು ನಗರದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿನ ಕಳ್ಳತನಗಳ ಬಗ್ಗೆ

ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-

೯೭೨ (೧೦೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ಮನೆ ಕಳ್ಳತನ ವಾಹನ ಕಳ್ಳತನ ಕುರಿತಂತೆ ದಾಖಲಾಗಿರುವ ಪ್ರಕರಣಗಳೆಷ್ಟು ; ಅವುಗಳನ್ನು ಭೇದಿಸಿ ವಾರಸುದಾರರಿಗೆ ನೀಡಲಾಗಿರುವ ಪ್ರಕರಣಗಳೆಷ್ಟು ; (ಠಾಣೆಗಳವಾರು ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದಲ್ಲಿನ ಕಾಟನ್ ಪೇಟೆ, ಕಲಾಸಿಪಾಳ್ಯ, ಕೆ.ಆರ್ ಮಾರ್ಕೆಟ್, ಉಪ್ಪಾರ ಪೇಟೆ, ಚಿಕ್ಕಪೇಟೆ, ಪೊಲೀಸ್ ಠಾಣೆಯಂತಹ ಜನಬೀಡ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಾಹನ ಕಳ್ಳತನಗಳು ಆಗುತ್ತಿದ್ದು, ಇದಕ್ಕೆ ಸ್ಥಳೀಯ ಕೆಳ ಹಂತದ ಪೊಲೀಸ್‌ರು ಶಾಮೀಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಈ ಬಗ್ಗೆ ಸರ್ಕಾರದ ಕ್ರಮಗಳೇನು ; ಈ ಕೃತ್ಯಗಳಲ್ಲಿ ಭಾಗಿಯಾಗುವ ಅಧಿಕಾರಿಗಳಿಗೆ ತೆಗೆದುಕೊಳ್ಳುವ ಕಠಿಣ ಕ್ರಮಗಳೇನು ; (ವಿವರ ನೀಡುವುದು)

(ಇ) ಬೆಂಗಳೂರು ನಗರದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಮತ್ತು ಹೆಚ್ಚಿನ ಕಾನೂನು ತಿಳುವಳಿಕೆಗಳನ್ನು ನೀಡಲು ಕಾರ್ಯಾಗಾರಗಳನ್ನು ನಡೆಸುವ ಬಗ್ಗೆ ಇಲಾಖೆಯ ಅಭಿಪ್ರಾಯಗಳೇನು ? (ಮಾಹಿತಿ ನೀಡುವುದು)

## ನಿಗಮ ಮಂಡಳಿಗಳ ಹಣವನ್ನು ಬ್ಯಾಂಕ್‌ನಲ್ಲಿ ಠೇವಣಿ ನೀಡಿರುವ ಬಗ್ಗೆ

**ಶ್ರೀ ಹೆಚ್.ಡಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೯೭೩ (೧೦೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಇಲಾಖೆಗಳ ಅಡಿ ಕಾರ್ಯ ನಿರ್ವಹಿಸುತ್ತಿರುವ ನಿಗಮ/ಮಂಡಳಿ/ಪ್ರಾಧಿಕಾರ/ಆಯೋಗಗಳ ಕಾರ್ಯ ನಿರ್ವಹಣೆಗೆ ಸರ್ಕಾರದಿಂದ ಮಂಜೂರಾಗುವ ಹಣವನ್ನು ಕೇಂದ್ರ ಸರ್ಕಾರಿ ಅಥವಾ ಬ್ಯಾಂಕ್‌ಗಳಲ್ಲಿ ಮಾತ್ರ ಠೇವಣಿ ಇರಿಸಬೇಕೆಂಬ ನಿರ್ಬಂಧ ವಿಧಿಸಲಾಗಿದೆಯೇ ; ಸದರಿ ಆದೇಶಕ್ಕೆ ಸಂಬಂಧಿಸಿದಂತೆ ದಾಖಲೆ ಒದಗಿಸುವುದು ;

(ಆ) ಒಂದು ವೇಳೆ ಸದರಿ ಸರ್ಕಾರಿ ನಿಬಂಧನೆಯನ್ನು ಯಾವುದಾದರೂ ಸಂಸ್ಥೆಗಳು ಉಲ್ಲಂಘಿಸಿದ್ದು ಕಂಡು ಬಂದಿದ್ದಲ್ಲಿ, ಉಲ್ಲಂಘನೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಕೈಗೊಂಡಿರುವ ಕ್ರಮಗಳಾವುವು ? (ವಿವರ ಒದಗಿಸುವುದು)

## ಪ್ರಜಾವಾಣಿ, ಇಂಡಿಯನ್ ಎಕ್ಸ್‌ಪ್ರೆಸ್ ಇನ್ನಿತರೆ ಪ್ರಮುಖ ಪತ್ರಿಕೆಯಲ್ಲಿ ೭೫೦ ಕೋಟಿಗೂ ಹೆಚ್ಚು ಹಣ ಅವ್ಯವಹಾರ ಪ್ರಕಟವಾಗಿರುವ ಬಗ್ಗೆ

**ಶ್ರೀ ಹೆಚ್.ಡಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೯೭೪ (೧೦೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಜಾವಾಣಿ, ಇಂಡಿಯನ್ ಎಕ್ಸ್‌ಪ್ರೆಸ್, ಡೆಕ್ಕನ್ ಹೆರಾಲ್ಡ್, ಟೈಮ್ಸ್ ಅಫ್ ಇಂಡಿಯ, ಹಿಂದುಸ್ಥಾನ ಟೈಮ್ಸ್ ಹಾಗೂ ಇನ್ನಿತರ ಪ್ರಮುಖ ಪತ್ರಿಕೆಗಳ ದಿನಾಂಕ: ೧೨.೧೦.೨೦೨೧ ರ ವರದಿ ಅನ್ವಯ ಮಾಜಿ ಮುಖ್ಯಮಂತ್ರಿಯವರ ಆಪ್ತರ ಮನೆ, ಕಛೇರಿ ಹಾಗೂ ವ್ಯವಹಾರ ಸಂಸ್ಥೆಗಳ ಮೇಲೆ ದಾಳಿ ನಡೆಸಲಾಗಿದ್ದು, ಅಂದಾಜು ೭೫೦ ಕೋಟಿಗೂ ಹೆಚ್ಚು ಮೊತ್ತದ ಅನಧಿಕೃತ ವ್ಯವಹಾರಕ್ಕೆ ಸಂಬಂಧಿಸಿದ ಹಣ ಹಾಗೂ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದ್ದು ಇವರ ವಿರುದ್ಧ ಅಂಧಿನ ಎ.ಸಿ.ಬಿಯಲ್ಲಿ ಭ್ರಷ್ಟಾಚಾರ ವಿರೋಧ ಕಾಯ್ದೆ ಅಡಿ ದಾಖಲೆಯಾಗಿರುವ ಪ್ರಕರಣದ ವಿವರವೇನು ;

(ಆ) ಅಂದಿನ ಎ.ಸಿ.ಬಿ ಮುಖ್ಯಸ್ಥ ಹೆಸರು ಹಾಗೂ ಸದರಿ ಅಧಿಕಾರಿಯು ಪ್ರಸ್ತುತ ಯಾವ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಸದರಿಯವರು ಬಿ.ಎಂ.ಡಿ.ಸಿ ಸಿಬ್ಬಂದಿಯಾಗಿದ್ದು ಅವರ ವಿರುದ್ಧ ಭ್ರಷ್ಟಾಚಾರ ವಿರೋಧಿ ಕಾಯ್ದೆ ಅಡಿ ಪ್ರಕರಣ ದಾಖಲಾಗದ ಪಕ್ಷದಲ್ಲಿ ಇಂದಿನ ಸರ್ಕಾರದ ಅವಧಿಯಲ್ಲಿ ಸದರಿ ವ್ಯಕ್ತಿಯ ವಿರುದ್ಧ ಭ್ರಷ್ಟಾಚಾರ ವಿರೋಧ ಕಾಯ್ದೆ ಅಡಿ ಪ್ರಕರಣ ದಾಖಲಿಸಲು ಯಾವುದಾದರೂ ಕಾನೂನಿನ ಅಡೆತಡೆ ಇದೆಯೇ ? (ನಿರ್ಧಿಷ್ಟವಾಗಿ ತಿಳಿಸುವುದು)

## ಕಾಡಾನೆಗಳ ದಾಳಿಯನ್ನು ತಡೆಗಟ್ಟುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧ (ನಾಮನಿರ್ದೇಶನ ಹೊಂದಿದವರು) :-**

೯೭೫ (೧೦೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾಡಾನೆಗಳ ದಾಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಾಡಾನೆಗಳ ದಾಳಿಯಿಂದ ಮೃತಪಟ್ಟ/ಶಾಶ್ವತ ಗಾಯಗೊಂಡ ಅಥವಾ ಆಸ್ತಿಪಾಸ್ತಿ ಮತ್ತು ಪ್ರಾಣಗಳಿಗೆ ಹಾನಿಯಾದರೆ ನೀಡುವ ಪರಿಹಾರದ ಮೊತ್ತವೆಷ್ಟು ? (ವಿವರ ನೀಡುವುದು)

(ಇ) ಪರಿಹಾರ ಮೊತ್ತ ಪಡೆಯಲು ಇರುವ ಮಾನದಂಡಗಳು ಯಾವುವು ?

## ಐ.ಎಂ.ಎ. ಹಗರಣದ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧ (ನಾಮನಿರ್ದೇಶನ ಹೊಂದಿದವರು) :-**

೯೭೬ (೧೦೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಐ.ಎಂ.ಎ. ಹಗರಣದಲ್ಲಿ ಐ.ಪಿ.ಎಸ್. ಅಧಿಕಾರಿಗಳು ಸೇರಿದಂತೆ ಹಲವಾರು ಅಧಿಕಾರಿಗಳು ಲಂಚ ಪಡೆದಿರುವುದಾಗಿ ಸಿ.ಬಿ.ಐ. ಚಾರ್ಜ್‌ಶೀಟ್‌ನಲ್ಲಿ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ಅಧಿಕಾರಿಗಳು ಪಡೆದಿರುವ ಲಂಚದ ಹಣವು ಬಡ ಹೂಡಿಕೆದಾರರ ಹಣವಾಗಿರುವ ಕಾರಣ, ಲಂಚ ಪಡೆದ ಅಧಿಕಾರಿಗಳ ಎಲ್ಲಾ ಸ್ಥಿರ ಮತ್ತು ಚರಾಸ್ಥಿಗಳನ್ನು ಸರ್ಕಾರ ವಶಕ್ಕೆ ಪಡೆದು ಬಡ ಹೂಡಿಕೆದಾರರಿಗೆ ಹಿಂತಿರುಗಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ಲಂಚ ಪಡೆದ ಆರೋಪಿ ಅಧಿಕಾರಿಗಳ ಎಲ್ಲಾ ಸ್ತಿರಾಸ್ಥಿಯನ್ನು ಯಾವಾಗ ವಶಪಡಿಸಿಕೊಳ್ಳಲಾಗುವುದು ; ಸದರಿ ಅಧಿಕಾರಿಗಳ ಬ್ಯಾಂಕ್ ಖಾತೆಗಳನ್ನು ಸೀಜ್ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಪ್ರಸ್ತುತ, ಸದರಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಹೂಡಿಕೆದಾರರ ಮೊತ್ತವನ್ನು ಹಿಂತಿರುಗಿಸಲು ಸದರಿ ಅಧಿಕಾರಿಗಳ

ವೇತನದಿಂದ ಕಟಾವಣೆ ಮಾಡಿ ಮಾನ್ಯ ನ್ಯಾಯಾಯಾಲಯಕ್ಕೆ ಜಮಾ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಮಾಧ್ಯಮದಲ್ಲಿ ವರದಿಯಾದಂತೆ ೨೦೧೯ರಲ್ಲಿ ಕಮರ್ಷಿಯಲ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅಂದಿನ ಪಿ.ಎಸ್.ಐ. ಅವರ ಸಂಬಂಧಿಕರ ಹೆಸರಿನಲ್ಲಿ ೫೦ ಲಕ್ಷಕ್ಕೂ ಹೆಚ್ಚು ಹೂಡಿಕೆಯನ್ನು ಐ.ಎಂ.ಎ.ನಲ್ಲಿ ಮಾಡಿರುವ ಕುರಿತು ಆರೋಪಿಯು ಸ್ವ-ಇಚ್ಛಾ ಹೇಳಿಕೆ ನೀಡಿದ್ದು, ಈ ಮೊತ್ತದ ಆದಾಯ ಮೂಲದ ಕುರಿತು ತನಿಖೆ ಮಾಡಲು ಈಡಿ, ಎಸಿಬಿ, ಲೋಕಾಯುಕ್ತ, ಆದಾಯ ತೆರಿಗೆ ಇಲಾಖೆಗಳಿಗೆ ಮಾಹಿತಿ ನೀಡಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ನೀಡಲಾಗುವುದು; ಈ ಹೂಡಿಕೆಯು ಕಮರ್ಷಿಯಲ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅಂದಿನ ಪಿ.ಎಸ್.ಐ.ಯವರ ಬೇನಾಮಿ ಹೂಡಿಕೆಯಾಗಿರಬಹುದಾದ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸದರಿ ಪಿ.ಎಸ್.ಐ.ಯವರನ್ನು ಅಮಾನತ್ತುಗೊಳಿಸಿ ವಿಚಾರಣೆ ನಡೆಸಲಾಗಿದೆಯೇ ?

## ಬುಡಕಟ್ಟು ಆಯ್ದ ಜನಾಂಗಗಳಿಗೆ ಪೌಷ್ಟಿಕ ಆಹಾರ ವಿಳಂಬವಾಗಿರುವ ಕುರಿತು.

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧ (ನಾಮನಿರ್ದೇಶನ ಹೊಂದಿದವರು) :-**

೯೭೭ (೧೦೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೆಲವು ಆಯ್ದ ಬುಡಕಟ್ಟು ಜನಾಂಗಗಳಿಗೆ ಪೌಷ್ಠಿಕ ಆಹಾರವನ್ನು ಪ್ರತಿ ತಿಂಗಳು ನೀಡಲಾಗುವುದೆಂದು ಆಯವ್ಯಯದಲ್ಲಿ ಘೋಷಿಸಿದ್ದು, ಈವರೆಗೆ ಕೇವಲ ೩ ಬಾರಿ ಮಾತ್ರ ವಿತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಲಬುರಗಿ ನಗರದಲ್ಲಿ ಪ್ರಾರಂಭಿಸಿದ ರಾಜ್ಯ ಮಾಹಿತಿ ಹಕ್ಕು ಆಯೋಗ ಪೀಠದ ಕುರಿತು

**ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೯೭೮ (೧೦೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ನಗರದಲ್ಲಿ ಪ್ರಾರಂಭಿಸಿದ ರಾಜ್ಯ ಮಾಹಿತಿ ಹಕ್ಕು ಆಯೋಗದ ಪೀಠಕ್ಕೆ ಒದಗಿಸಿದ ಮೂಲಭೂತ ಸೌಕರ್ಯಗಳು ಮತ್ತು ಸಿಬ್ಬಂದಿ ವಿವರ ನೀಡುವುದು ;

(ಆ) ಕಲಬುರಗಿ ಮಾಹಿತಿ ಹಕ್ಕು ಆಯೋಗದ ಪೀಠಕ್ಕೆ ನೇಮಿಸಲಾದ ಆಯುಕ್ತರು ಬೆಂಗಳೂರಿನಲ್ಲಿ ಕುಳಿತು ಆಡಳಿತ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಲಬುರಗಿಯ ಪೀಠಕ್ಕೆ ಪೂರ್ಣ ಪ್ರಮಾಣದ ಆಯುಕ್ತರನ್ನು ನೇಮಿಸಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲ ಆಗುವಂತೆ ಸರ್ಕಾರ ಕ್ರಮ ವಹಿಸಬಹುದೇ ;

(ಈ) ಕಲಬುರಗಿಯ ಪೀಠದಲ್ಲಿನ ಅಧಿಕಾರಿಗಳ/ಸಿಬ್ಬಂದಿಗಳ ಗೊಂದಲ ಮತ್ತು ಒಳಜಗಳ ಕಾರಣದಿಂದ ಸಂವಿಧಾನದತ್ತ ಮಾಹಿತಿ ಹಕ್ಕನ್ನು ಪಡೆಯಲು ಈ ಭಾಗದ ಜನರಿಗೆ ಅನುಕೂಲವಾಗುವಂತೆ ಕೈಗೊಳ್ಳುವ ಕ್ರಮಗಳೇನು ?

## ಸಚಿವಾಲಯ ಕ್ಲಬ್‌ನ್ನು ಜೂಜ್ ಅಡ್ಡೆಯಾಗಿ ಪರಿವರ್ತನೆಯಾಗದಂತೆ ತಡೆಯುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೭೯ (೧೧೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಸಚಿವಾಲಯ ಕ್ಲಬ್‌ನ ಕಾರ್ಡ್ಸ್ ವಿಭಾಗದಲ್ಲಿ ಅವಧಿ ಮೀರಿ ತಡ ರಾತ್ರಿಯವರೆಗೆ ಜೂಜಾಟ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಲ್ಲಿ C.C.T.V. ಪರಿಶೀಲಿಸಿ ಯಾವ ರೀತಿ ಕ್ರಮ ವಹಿಸಲಾಗುವುದು ;

(ಆ) ಈ ಕ್ಲಬ್‌ನ್ನು ಅನುದಾನ ಒದಗಿಸಿ ಸರ್ಕಾರದ ಹಾಲಿ/ ನಿವೃತ್ತಿ ಅಧಿಕಾರಿ/ನೌಕರರು ಬಳಕೆ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಅತಿಥಿ ಸದಸ್ಯರಾಗಿ ಕಾರ್ಡ್ಸ್ ವಿಭಾಗಕ್ಕೆ ಪ್ರವೇಶ ಪಡೆದು ಜೂಜು ಕೇಂದ್ರವಾಗಿ (ಅಡ್ಡೆಯಾಗಿ) ಬಳಕೆ ಮಾಡುತ್ತಿದ್ದ, ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲು ಕ್ರಮ ವಹಿಸಲಾಗುವುದೆ; (ಈ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು)

(ಇ) ಸಚಿವಾಲಯ ಕ್ಲಬ್‌ಗೆ ಸಾಂಸ್ಕೃತಿಕ ಹಿನ್ನಲೆ ಇದ್ದು, ಇತ್ತೀಚಿಗೆ ಕಾರ್ಡ್ಸ್ ವಿಭಾಗದಲ್ಲಿ ಗರಿಷ್ಠ ಮೊತ್ತದ ಹಣವನ್ನು ತೊಡಗಿಸಿ ಜೂಜಾಟ ನಡೆಯುತ್ತಿದ್ದು ಸರ್ಕಾರಿ ನೌಕರರ ಹಿತದೃಷ್ಠಿಯಿಂದ ಮತ್ತು ಅಲ್ಲಿನ ಸಂಸ್ಕೃತಿ ವಾತಾವರಣ ಹಾಳಾಗದಂತೆ ತಡೆಯುವ ನಿಟ್ಟಿನಲ್ಲಿ ಗರಿಷ್ಠ ಮೊತ್ತವನ್ನು ತೊಡಗಿಸಿ ತಡ ರಾತ್ರಿಯವರೆಗೆ ಜೂಜಾಟವನ್ನು ನಡೆಯಲು ಸರ್ಕಾರ ಯಾವ ಯಾವ ಸೂಕ್ತ ಕ್ರಮಗಳನ್ನು ಯಾವ ಕಾಲಮಿತಿಯೊಳಗೆ ಕೈಗೊಳ್ಳುವುದು?

## ಕೋಟ್ಯಾಂತರ ರೂಪಾಯಿ ತೆರಿಗೆ ವಂಚನೆ ಆಗುತ್ತಿರುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೦ (೧೦೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಕಾಳಸಂತೆಯಲ್ಲಿ ತೆರಿಗೆ ವಂಚಿಸಿ ಗುಟಕಾ ಮಾರಾಟ ಅವ್ಯಾಹತವಾಗಿ ನಡೆಯುತ್ತಿದ್ದು, ಇದರಿಂದ ಸರ್ಕಾರದ ಬೊಕ್ಕಸಕ್ಕೆ ಪ್ರತಿನಿತ್ಯ ಕೋಟ್ಯಾಂತರ ತೆರಿಗೆ ವಂಚನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ದಂಧೆಗೆ ಆಯಾ ಭಾಗದ ತೆರಿಗೆ ಅಧಿಕಾರಿಗಳು, ಆಯಾ ಪೊಲೀಸ್ ಠಾಣೆ ವ್ಯಾಪ್ತಿಯ ಪೊಲೀಸ್ ಸಿಬ್ಬಂದಿಯವರು ನೇರವಾಗಿ ಮತ್ತು ಪರೋಕ್ಷವಾಗಿ ಭಾಗಿಯಾಗಿ ಈ ಬೃಹತ್ ದಂಧೆಗೆ ಸಾತ್ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುವುದೇ ;

(ಇ) ಈ ದಂಧೆಯಲ್ಲಿ ತೊಡಗಿರುವವರು ನೋಟ್ ಕೌಂಟಿಂಗ್ ಮೆಷಿನ್ ಇಟ್ಟುಕೊಂಡಿರುವುದು, ಮನೆಗಳನ್ನೆ ಅಕ್ರಮ ದಾಸ್ತಾನು ಮತ್ತು ವ್ಯಾಪಾರ ಮಳಿಗೆಯನ್ನಾಗಿ ಮಾರ್ಪಡಿಸಿಕೊಂಡು ಭಾರಿ ಆಸ್ತಿ ಪಾಸ್ತಿ ಹಣ ಗಳಿಸಿರುವವರನ್ನು ಕೂಡಲೇ ಪತ್ತೆ ಹಚ್ಚಿ ಸರ್ಕಾರದ ಆದಾಯ ದ್ವಿಗುಣಗೊಳಿಸಲು ಸರ್ಕಾರ ಕ್ರಮ ಜರುಗಿಸುವುದೆ ?

## ಕಲ್ಯಾಣ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮೧ (೧೦೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲ್ಯಾಣ ಕರ್ನಾಟಕದ ವಿಭಾಗವನ್ನು ಭಾರತ ಸಂವಿಧಾನ ಅನುಚ್ಛೇದ ೩೭೧ (ಜೆ) ಅಡಿಯಲ್ಲಿ ಯಾವ ವರ್ಷದಲ್ಲಿ ಸೇರ್ಪಡಿಸಲಾಗಿದೆ ; ಈ ರೀತಿ ಸೇರ್ಪಡೆಗೆ ಕಳುಹಿಸಿರುವ ಪ್ರಸ್ತಾವನೆಯ ವಿವರಗಳು ಯಾವುವು ; ರಾಜ್ಯ ಸರ್ಕಾರ ಕಳುಹಿಸಿರುವ ಪ್ರಸ್ತಾವನೆ

ಒಳಗೊಂಡಂತೆ, ರಾಜ್ಯ ಸರ್ಕಾರ ಕೇಂದ್ರ ಸರ್ಕಾರದೊಂದಿಗೆ ವ್ಯವಹರಿಸಿರುವ ದಾಖಲಾತಿಗಳಾವುವು ; (ಪೂರ್ಣ ವಿವರ ನೀಡುವುದು)

(ಆ) ಕಲ್ಯಾಣ ಕರ್ನಾಟಕ ವಿಭಾಗವನ್ನು ಭಾರತ ಸಂವಿಧಾನದ ಸೇರ್ಪಡೆಯಿಂದ, ಈ ಪ್ರದೇಶದ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಇದುವರೆಗೂ ದೊರೆತಿರುವ ಅನುದಾನ ಮತ್ತು ರಿಯಾಯಿತಿಗಳಾವುವು ; (ವರ್ಷವಾರು ಪೂರ್ಣ ವಿವರ ನೀಡುವುದು)

(ಇ) ೨೦೨೦-೨೧ನೇ ತಹಲ್‌ವರೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕಲ್ಯಾಣ ಕರ್ನಾಟಕ ಭಾಗದ ಸರ್ವತೋಮುಖ ಅಭಿವೃದ್ಧಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿವೆ ; ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ ಭಾಗದ ಸರ್ವತೋಮುಖ ಅಭಿವೃದ್ಧಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಮತ್ತು ಇದುವರೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಬಿಡುಗಡೆ ಮಾಡಿದ ಅನುದಾನವನ್ನು ಯಾವ ರೀತಿ ಸದುಪಯೋಗ ಮಾಡಿಕೊಳ್ಳಲಾಗಿದೆ ; (ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಈ) ಭಾರತದ ಸಂವಿಧಾನದ ಅನುಚ್ಛೇದ ३೭೧(ಜೆ) ಅಡಿ ಅಡಕವಾಗಿರುವ ದೇಶದ ಇತರೆ ಪ್ರದೇಶಗಳಾದ ಈಶಾನ್ಯ ರಾಜ್ಯಗಳು, ಮಹಾರಾಷ್ಟ್ರ ರಾಜ್ಯದ ವಿದರ್ಭ ಪ್ರದೇಶ, ರಾಜಸ್ಥಾನ ರಾಜ್ಯ ಮುಂತಾದ ರಾಜ್ಯಗಳಾಗಿ ರೂಪಿಸಿರುವ ಅಭಿವೃದ್ಧಿ ಮಾದರಿ (Development Model)ಯಂತೆ, ರಾಜ್ಯ ಸರ್ಕಾರ

ವಿಶೇಷ ಅಭಿವೃದ್ಧಿ ಮಾದರಿಯನ್ನು ಕಲ್ಯಾಣ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ರೂಪಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದೆಯೇ ; ಇಲ್ಲದಿದ್ದಲ್ಲಿ, ಈ ವಿಶೇಷ ಅಭಿವೃದ್ಧಿ ಮಾದರಿಯನ್ನು ರೂಪಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದೇ ? (ಪೂರ್ಣ ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರ ಜಾರಿಗೊಳಿಸಿದ ೩ ಹೊಸ ಕ್ರಿಮಿನಲ್ ಅಪರಾಧ ಕಾನೂನುಗಳ ಜಾರಿ ಕುರಿತು

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮೨ (೧೦೯೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ ಕೇಂದ್ರ ಜಾರಿಗೊಳಿಸಿರುವ ಹೊಸ ಮೂರು ಕ್ರಿಮಿನಲ್ ಅಪರಾಧ ಕಾನೂನುಗಳನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಈ ಮೂರು ಕಾನೂನುಗಳನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ವಿರೋಧ ವ್ಯಕ್ತಪಡಿಸಿ ಈ ಕಾನೂನುಗಳಿಗೆ ಅಗತ್ಯ ತಿದ್ದುಪಡಿ ತರುವುದಾಗಿ ಯೋಚಿಸುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಈ ಹೊಸ ಕಾನೂನುಗಳನ್ನು ಯಾವ ಸೆಕ್ಷನ್‌ಗಳಿಗೆ ತಿದ್ದುಪಡಿ ಮಾಡಲು ರಾಜ್ಯ ಸರ್ಕಾರಗಳಿಗೆ ಅವಕಾಶ ನೀಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ಈ ರೀತಿ ತಿದ್ದುಪಡಿ ತರುವುದಕ್ಕಿಂತ, ಕೇಂದ್ರ ಸರ್ಕಾರದೊಂದಿಗೆ ವ್ಯವಹರಿಸಿ ವಾಸ್ತವವಾದ ಎಡರು-ತೊಡರುಗಳನ್ನು ವಿವರಿಸಿ, ಕೇಂದ್ರ ಸರ್ಕಾರ ತಿದ್ದುಪಡಿ ತರುವಂತೆ ಒತ್ತಾಯಿಸುವುದು ಸೂಕ್ತವಲ್ಲವೇ ?

## ಬೆಂಗಳೂರು ನಗರದಲ್ಲಿರುವ ಕಣಿವೆಗಳಲ್ಲಿ ಹರಿಯುವ ನೀರಿನ ಶುದ್ಧೀಕರಣದ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮೩ (೧೧೯೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಮಳೆ ನೀರು ಹರಿದು ಹೋಗಲು ರೂಪಿತವಾಗಿರುವ ನೈಸರ್ಗಿಕ ಕಣಿವೆಗಳು ಯಾವುವು ಮತ್ತು ಈ ಕಣಿವೆಗಳಲ್ಲಿ ಪ್ರತಿವರ್ಷ ಹರಿಯುವ ನೀರಿನ ಪ್ರಮಾಣವೆಷ್ಟು; (ಕಣಿವೆವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಈ ಕಣಿವೆಗಳಲ್ಲಿ ಹರಿಯುವ ಮಾಲಿನ್ಯ ನೀರನ್ನು ಶುದ್ಧೀಕರಿಸಿ ಕೆರೆ ತುಂಬಿಸಲು ಮತ್ತು ಕುಡಿಯುವ ನೀರು ಪೂರೈಸಲು ತಯಾರಿಸಿರುವ ಯೋಜನೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪಡೆದಿರುವ ಬಾಹ್ಯ ನೆರವುಗಳು ಯಾವುವು ಮತ್ತು ಈ ಬಾಹ್ಯ ನೆರವಿನ ಸಂಸ್ಥೆಗಳು ವಿಧಿಸಿರುವ ನಿಬಂಧನೆಗಳನ್ನು ರಾಜ್ಯ ಸರ್ಕಾರ ಪೂರೈಸಿದೆಯೇ ; (ಪೂರ್ಣ ವಿವರ ನೀಡುವುದು)

(ಈ) ರಾಜ್ಯ ಸರ್ಕಾರ ಈ ಕಣಿವೆಗಳಲ್ಲಿ ಹರಿಯುವ ಮಾಲಿನ್ಯ ನೀರಿನ ಶುದ್ಧೀಕರಣಕ್ಕೆ ಅಳವಡಿಸಿಕೊಂಡಿರುವ ತಂತ್ರಜ್ಞಾನಗಳು ಯಾವುವು ; ಈ ತಂತ್ರಜ್ಞಾನಗಳು ಎಷ್ಟರಮಟ್ಟಿಗೆ ಮಾಲಿನ್ಯ ನೀರನ್ನು ಶುದ್ಧೀಕರಿಸುತ್ತವೆ ; ಈ ಬಗ್ಗೆ ಅಧ್ಯಯನ ನಡೆಸಲಾಗಿದೆಯೇ ; (ಈ ಬಗ್ಗೆ ಪೂರ್ಣ ಮಾಹಿತಿ ನೀಡುವುದು)

(ಉ) ಮಾಲಿನ್ಯ ನೀರನ್ನು ಶುದ್ಧೀಕರಿಸಲು STP, ETP & Tertiary Treatment Plant ಮುಂತಾದವುಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಈ Plant ಗಳು ಸುಲಲಿತವಾಗಿ ಕೆಲಸ ಮಾಡುವ ಬಗ್ಗೆ ಸಣ್ಣ ನೀರಾವರಿ ಇಲಾಖೆ, ಮಾಲಿನ್ಯ ಮಂಡಳಿ ಮತ್ತು ಪರಿಸರ ಇಲಾಖೆ ಅಧ್ಯಯನ ಕೈಗೊಂಡಿದೆಯೇ ? (ಹಾಗಿದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು)

## ಮುಖ್ಯಮಂತ್ರಿ ನಗರೋತ್ಥಾನ ಕ್ರಿಯಾ ಯೋಜನೆ ಅನುದಾನ ಬಿಡುಗಡೆ ಆಗದಿರುವ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮೪ (೧೧೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರಾಭಿವೃದ್ಧಿ ಹಿಂದಿನ ಸರ್ಕಾರದ ಅವಧಿಯಲ್ಲಿ ಆಯ-ವ್ಯಯದಲ್ಲಿ ಅಮೃತ ನಗರೋತ್ಥಾನ ಯೋಜನೆ ಅಡಿ ನೀಡಿದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಬಾಬ್ತುಗಳಿಗೆ ನೀಡಲಾಗಿತ್ತು ; (ಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಅಭಿವೃದ್ಧಿಗೆ ಈ ಅನುದಾನವನ್ನು ಪೂರ್ಣವಾಗಿ ಬಳಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಮುಖ್ಯಮಂತ್ರಿ ನವನಗರೋತ್ಥಾನ ಕ್ರಿಯಾ ಯೋಜನೆಗೆ ೧೫ ತಿಂಗಳ ಹಿಂದೆಯೇ ಅನುಮೋದನೆ ದೊರೆತಿದ್ದರೂ, ನಗರಾಭಿವೃದ್ಧಿ ಇಲಾಖೆ ಇದುವರೆಗೂ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಜಲಶಕ್ತಿ ಅಭಿಯಾನದಡಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮೫ (೧೧೯೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಕೆರೆಗಳ ಜೀರ್ಣೋದ್ಧಾರ (RRR) ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಈ ಯೋಜನೆ ಧ್ಯೇಯೋದ್ದೇಶ ಮತ್ತು ರೂಪ ರೇಷೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಈ ಯೋಜನೆಯಡಿ ಕೇಂದ್ರ ಸರ್ಕಾರಕ್ಕೆ ಮಂಜೂರಾತಿಗೆ ಕಳುಹಿಸಿರುವ ಪ್ರಸ್ತಾವನೆಗಳು ಎಷ್ಟು ; ಎಷ್ಟು ಪ್ರಸ್ತಾವನೆಗಳಿಗೆ ಮಂಜೂರಾತಿ ದೊರೆತಿದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯ ಸರ್ಕಾರ ಈ ಯೋಜನೆಯಡಿ ಬರಪೀಡಿತ ಪ್ರದೇಶಗಳಲ್ಲಿ ಮತ್ತು ಮಳೆ-ನೆರಳುನಿಂದ ಭಾಧಿತ ಪ್ರದೇಶಗಳಲ್ಲಿ ಸಣ್ಣ ನೀರಾವರಿ ಯೋಜನೆಗಳ ಅಡಿಯಲ್ಲಿ ಚೆಕ್‌ಡ್ಯಾಂ, ಪಿಕಪ್‌ಗಳು ಮತ್ತು ಬ್ಯಾರೇಜ್‌ಗಳ ನಿರ್ಮಾಣಗಳಿಗೆ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಾವಧಿಯಲ್ಲಿ ಈ ಪ್ರಸ್ತಾವನೆಗಳನ್ನು ಸಲ್ಲಿಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ನದಿ ಜೋಡಣೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೯೮೬ (೯೯೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಮಹಾನದಿ-ಗೋದಾವರಿ-ಕೃಷ್ಣಾ-ಕಾವೇರಿ-ಪೆನ್ನಾರ್ ನದಿ ಜೋಡಣೆ ಯೋಜನೆಯು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಯೋಜನೆ ಜಾರಿಯಿಂದ ರಾಜ್ಯಕ್ಕೆ ಆಗಬಹುದಾದ ಪ್ರಯೋಜನಗಳೇನು ;

(ಇ) ಈ ಯೋಜನೆ ಜಾರಿಗೊಂಡಲ್ಲಿ, ರಾಜ್ಯಕ್ಕೆ ದೊರೆಯುವ ನೀರಿನ ಪ್ರಮಾಣ ಎಷ್ಟು ; ಯೋಜನೆಯ ಸಾಧಕ ಬಾಧಕಗಳ ಬಗ್ಗೆ ವಿಸ್ತೃತವಾಗಿ ವರದಿಯನ್ನು ಪಡೆಯಲಾಗಿದೆಯೇ ;

(ಈ) ಪಡೆದಿದ್ದಲ್ಲಿ, ರಾಜ್ಯಕ್ಕೆ ಯೋಜನೆಯಿಂದ ಪ್ರಯೋಜನವಾಗಿದೆಯೇ ಅಥವಾ ಇಲ್ಲವೆ ; ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನಗರ ಹೋಟೆಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ದತ್ತಾಂಶ ಸಂಗ್ರಹಿಸುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೯೮೭ (೧೦೫೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ಅಧಿಕೃತ ಹೋಟೆಲ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರ ದತ್ತಾಂಶಗಳ ಬಗ್ಗೆ ಪೊಲೀಸ್ ಇಲಾಖೆಯು 'ಖಾಸಗಿ ಮೊಬೈಲ್ ಆಫ್'ನಲ್ಲಿ ಮಾಹಿತಿ ದಾಖಲಿಸುವಂತೆ ಒತ್ತಾಯಿಸಿ ಸೂಚನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಉದ್ದೇಶಗಳಿಗಾಗಿ ದತ್ತಾಂಶ ಸಂಗ್ರಹಿಸಲಾಗುತ್ತಿದೆ ;

(ಇ) ಈ ದತ್ತಾಂಶ ದಾಖಲು ಕಾರ್ಯವು ಪರವಾನಗೆ ಮತ್ತು ಪರವಾನಗಿ ಹೊಂದಿಲ್ಲದ ಹೋಟೆಲ್ ಕಾರ್ಮಿಕರಿಗೆ ಅನ್ವಯಿಸುತ್ತದೆಯೇ ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## K.S.I.S.F. ಪಡೆ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೮೮ (೧೧೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ/ಪ್ರದೇಶದಲ್ಲಿರುವ ಎಷ್ಟು ಸೂಕ್ಷ್ಮ ಸ್ಥಾವರಗಳಿಗೆ ಕೆ.ಎಸ್.ಐ.ಎಸ್.ಎಫ್ ಭದ್ರತೆ ಒದಗಿಸುತ್ತಿದೆ ಮತ್ತು ಅಲ್ಲಿ ಮಂಜೂರಾದ/ನಿಯೋಜನೆಗೊಂಡ ಹುದ್ದೆಗಳೆಷ್ಟು ;

(ಆ) ಕೆ.ಎಸ್.ಐ.ಎಸ್.ಎಫ್ ನಲ್ಲಿರುವ 72 ಪೊಲೀಸ್ ನಿರೀಕ್ಷಕರ ಹುದ್ದೆಗಳನ್ನು ಯಾವ ಯಾವ ಸೂಕ್ಷ್ಮ ಸ್ಥಾವರಗಳಿಗೆ ನಿಯೋಜಿಸಲಾಗಿದೆ ಮತ್ತು ಅದರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿಯಿರುವ ಹುದ್ದೆಗಳೆಷ್ಟು;

(ಇ) ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ಕೆ.ಎಸ್.ಐ.ಎಸ್.ಎಫ್ ಪಡೆಯನ್ನು ಸ್ಥಾಪನೆ ಮಾಡಲು ಸರ್ಕಾರದ ನಿಲುವೇನು ;

(ಈ) ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ವಿವಿಧ ಸೂಕ್ಷ್ಮ ಸ್ಥಾವರಗಳಿಗೆ ಭದ್ರತೆ ಒದಗಿಸುತ್ತಿರುವ ಕೆ.ಎಸ್.ಐ.ಎಸ್.ಎಫ್ ಘಟಕಗಳಲ್ಲಿ ಮಂಜೂರು/ನಿಯೋಜಿಸಿದ ವಿವಿಧ ದರ್ಜೆಯ ಹುದ್ದೆಗಳ ಅಂದರೆ ಸಹಾಯಕ ಕಮಾಂಡೆಂಟ್ ಹುದ್ದೆಯಿಂದ ಪಿ.ಸಿ .ಹುದ್ದೆಯವರೆಗಿನ ಮಾಹಿತಿ ನೀಡುವುದು;

(ಉ) ಪಿ.ಎಸ್.ಐ, ಕೆ.ಎಸ್.ಐ.ಎಸ್.ಎಫ್ ಹುದ್ದೆಯಿಂದ ಪಿ.ಐ ಕೆ.ಎಸ್.ಐ.ಎಸ್.ಎಫ್ ಹುದ್ದೆಗೆ ಇತ್ತೀಚೆಗೆ ಮುಂಬಡ್ತಿ ನೀಡುವಲ್ಲಿ ಮತ್ತು ಬಳ್ಳಾರಿ ಕೇಂದ್ರ ಕಾರಾಗೃಹ ಘಟಕಗಳಲ್ಲಿ 04 ಪಿ.ಎಸ್.ಐ. ಹುದ್ದೆಗಳನ್ನು ನಿಯೋಜಿಸಲು ಸರ್ಕಾರದ ಆದೇಶವಿದ್ದರೂ ಅವುಗಳನ್ನು ಮುಂಬಡ್ತಿ ನೀಡುವಾಗ ಗಣನೆಗೆ ತೆಗೆದುಕೊಳ್ಳದಿರುವುದಕ್ಕೆ ಕಾರಣವೇನು? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು)

## ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೮೯ (೧೧೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ಸರ್ಕಾರವು ಎಷ್ಟು ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಂಡಿದೆ;

(ಆ) ನಿಗದಿಯಂತೆ ಪ್ರತಿ ವರ್ಷ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯಾಗದಿರುವ ಕಾರಣ ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಈ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸಬೇಕೆಂದು ಅಭ್ಯರ್ಥಿಗಳು ಮನವಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಭ್ಯರ್ಥಿಗಳ ಮನವಿಯಂತೆ ಇನ್ನೂ ಎಷ್ಟು ಹುದ್ದೆಗಳನ್ನು ಹೆಚ್ಚಿಸಲು ಸರ್ಕಾರವು ಕ್ರಮ ಕೈಗೊಳ್ಳಲಾಗುವುದು; (ವಿವರ ನೀಡುವುದು)

(ಇ) ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಪ್ರಸ್ತುತ ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

(ಈ) ಕೆ.ಎಸ್.ಸಿ. ಯು ಇದೇ ಆಗಸ್ಟ್ 25 ರಂದು ಕೆ.ಎ.ಎಸ್. ಪೂರ್ವಭಾವಿ ಪರೀಕ್ಷೆಯನ್ನು ನಿಗದಿಪಡಿಸಿದ್ದು, ಇದಕ್ಕಿಂತ ಮೊದಲೇ ಬ್ಯಾಂಕಿಂಗ್ ಸಿಬ್ಬಂದಿ ನೇಮಕಾತಿ ಸಂಸ್ಥೆಯ (IBPS) ಬ್ಯಾಂಕ್ ಕ್ಲರಿಕಲ್ ಹುದ್ದೆಗಳಿಗೆ ಪರೀಕ್ಷೆಯು ನಿಗದಿಯಾಗಿದ್ದು, ಒಂದೇ ದಿನ ಪರೀಕ್ಷೆ ನಿಗದಿಯಾಗಿರುವುದರಿಂದ ಸಾವಿರಾರು ಅಭ್ಯರ್ಥಿಗಳು ಯಾವುದಾದರು ಒಂದು ಪರೀಕ್ಷೆಯಿಂದ ವಂಚಿತರಾಗುವುದಿಲ್ಲವೇ;

(ಉ) ಒಂದು ಕಡೆ ರಾಜ್ಯದಲ್ಲಿರುವ ಬ್ಯಾಂಕ್‌ಗಳಲ್ಲಿ ಹೊರ ರಾಜ್ಯದವರು ಬಂದು ಹುದ್ದೆಗಳನ್ನು ಗಳಿಸಿಕೊಳ್ಳುತ್ತಿರುವುದರಿಂದ ಇಲ್ಲಿನ ಸ್ಥಳೀಯ ನಿರುದ್ಯೋಗಿಗಳಿಗೆ ತೊಡಕುಂಟಾಗುತ್ತಿಲ್ಲವೇ; ಪೂರ್ವ ಭಾವಿ ಪರೀಕ್ಷೆ ದಿನಾಂಕ ನಿಗದಿಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಳ್ಳಬಹುದಾದ ನಿಲುವೇನು?

## ಪೊಲೀಸ್ ಇಲಾಖೆಯಲ್ಲಿ ವಿವಿಧ ಹುದ್ದೆಗಳ ನೇಮಕಾತಿ ವಿಳಂಬವಾಗುತ್ತಿರುವ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೮೦ (೧೧೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹ ಇಲಾಖೆಯಲ್ಲಿನ ಯಾವ ಯಾವ ಹುದ್ದೆಗಳ ಮತ್ತು ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯು ಅನುಮೋದನೆ ನೀಡಿದೆ;

(ಆ) 545 ಪಿಎಸ್‌ಐ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ವಿಳಂಬವಾಗಲು ಕಾರಣವೇನು; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗುವುದು; (ಮಾಹಿತಿ ನೀಡುವುದು)

(ಈ) ನೇಮಕಾತಿ ವಿಳಂಬದಿಂದಾಗಿ ರಾಜ್ಯದಲ್ಲಿ ಕಾನೂನು ಮೇಲೆ ಪರಿಣಾಮ ಬೀರಿ ಅಪರಾಧ ಪ್ರಕರಣಗಳು ಹೆಚ್ಚಾಗುವುದಿಲ್ಲವೆ; ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು?

# ವಿವಿಧ ಹುದ್ದೆಗಳ ನೇಮಕಾತಿ ಹಾಗೂ ಬಡ್ತಿ ನೀಡುವಾಗ ೩೭೧ಜೆ ಮೀಸಲಾತಿ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೯೧ (೧೧೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಹಾಗೂ ಬಡ್ತಿ ನೀಡುವ ಸಂದರ್ಭದಲ್ಲಿ 371(ಎ) ಮೀಸಲಾತಿಯನ್ನು ಕಡೆಗಣಿಸಲಾಗುತ್ತಿದೆಯೇ; ಪ್ರಸ್ತುತ ಸರ್ಕಾರವು 371(ಎ) ಮೀಸಲಾತಿಯಡಿ ನೇಮಕಾತಿ ಮಾಡಿಕೊಳ್ಳುವಾಗ ಮತ್ತು ಬಡ್ತಿ ನೀಡುವಾಗ ಯಾವ ಯಾವ ನಿಯಮಗಳನ್ನು ಅನುಸರಿಸುತ್ತಿದೆ;

(ಆ) ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ವೃಂದ ವಿಭಾಗದಲ್ಲಿ ನೇರ ನೇಮಕಾತಿ ಮಾಡಿಕೊಳ್ಳುವಾಗ ಪ್ರತಿಶತ ಎಷ್ಟು ಪ್ರಮಾಣದ ಹುದ್ದೆಗಳನ್ನು ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಮೀಸಲಿಡಲಾಗುತ್ತಿದೆ; (ವಿವರ ನೀಡುವುದು)

(ಇ) ಸರ್ಕಾರವು ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ವೃಂದದಲ್ಲಿ ಪ್ರತ್ಯೇಕ ನೇಮಕಾತಿ ಹೊರಡಿಸಿ, ಪ್ರತ್ಯೇಕ ಲಿಖಿತ ಪರೀಕ್ಷೆ ನಡೆಸಿ ಮತ್ತು ಪ್ರತ್ಯೇಕ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡಬೇಕೆಂಬ ಆದೇಶವನ್ನು ಮಾಡಿದ್ದರೂ ಕೂಡ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈ ನಿಯಮಗಳನ್ನು ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು;

(ಈ) 371(ಎ) ಮೀಸಲಾತಿಯನ್ನು ಯಾವ ಯಾವ ನೇಮಕಾತಿ ಪ್ರಾಧಿಕಾರಗಳು ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವಾಗ ಅನುಸರಿಸಬೇಕೆಂದು ಸರ್ಕಾರ ಆದೇಶಿಸಿದೆ;

(ಉ) 371(ಎ) ಮೀಸಲಾತಿಯನ್ನು ಕರ್ನಾಟಕ ಹಾಲು ಒಕ್ಕೂಟ, ಅಪೆಕ್ಸ್ ಬ್ಯಾಂಕ್ ಮತ್ತು ಡಿಸಿಸಿ ಬ್ಯಾಂಕ್‌ಗಳಲ್ಲಿ ನೇಮಕಾತಿ ಮಾಡಿಕೊಳ್ಳುವಾಗ ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ವಿವರ ನೀಡುವುದು?

## ೩೭೧(ಜೆ) ಅಡಿಯಲ್ಲಿ ಮಂಜೂರಾದ ವಿವಿಧ ಹುದ್ದೆಗಳ ಕುರಿತು

**ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೯೨ (೧೦೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾರತ ಸಂವಿಧಾನದ ಅನುಚ್ಛೇದ ೩೭೧(ಜೆ) ಅಡಿಯಲ್ಲಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮಂಜೂರಾದ ಭರ್ತಿಯಾದ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ೩೭೧(ಜೆ)ಯ ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳ ಭರ್ತಿ ಮುಂಬಡ್ತಿ ಸೇರಿದಂತೆ ಸಾಕಷ್ಟು ಪ್ರಕ್ರಿಯೆಗಳು ತೀವ್ರ ವಿಳಂಬವಾಗುತ್ತಿರಲು ಕಾರಣಗಳೇನು ;

(ಇ) ೩೭೧(ಜೆ) ಅನುಷ್ಠಾನ ವಿಳಂಬದಿಂದಾಗಿ ಸರ್ಕಾರದ ಆಡಳಿತದಲ್ಲಿ ತೊಡಕುಂಟಾಗುತ್ತಿಲ್ಲವೇ ಈ ತೊಡಕನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೂ ೩೭೧ (ಜೆ) ಜಾರಿಗೆ ಸಂಬಂಧಿಸಿದಂತೆ ಎಷ್ಟು ಸಭೆಗಳನ್ನು ನಡೆಸಲಾಗಿದೆ ; ಈ ಸಭೆಗಳಲ್ಲಿ ಕೈಗೊಂಡಿರುವ ಪ್ರಮುಖ ನಿರ್ಧಾರಗಳು ಯಾವುವು ? (ಈ ಕುರಿತು ಸಂಪೂರ್ಣ ವಿವರವಾದ ಮಾಹಿತಿಯನ್ನು ಒದಗಿಸುವುದು)

## ಸತ್ಯಕ್ಕೆ ದೂರವಾದ ಸುದ್ದಿ ತಡೆಯುವಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು

**ಡಾ॥ ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೩ (೧೦೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದು ಕೆಲವು ವರ್ಷಗಳಿಂದ ಬರುವ ಸತ್ಯಕ್ಕೆ ದೂರವಾದ ಸುದ್ದಿ ಒಂದು ಸಾಮಾಜಿಕ ಪಿಡುಗಾಗಿ ಪರಿಣಮಿಸಿದ್ದು, ಈ ಪಿಡುಗನ್ನು ನಿಯಂತ್ರಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಸಾರ್ವಜನಿಕರು ಸುದ್ದಿಗಳ ನೈಜತೆಯನ್ನು ಪರಿಶೀಲಿಸಲು ಯಾವುದಾದರೂ ನಿರ್ದಿಷ್ಟವಾದ ಆನ್‌ಲೈನ್ ಪೋರ್ಟಲ್ ಇದೆಯೇ ; ಇದ್ದಲ್ಲಿ, ವಿವರ ಒದಗಿಸುವುದು ;

(ಇ) ಸಾರ್ವಜನಿಕರಿಗೆ ಸುಳ್ಳು ಸುದ್ದಿ ಬಗ್ಗೆ ಅರಿವು ಮೂಡಿಸಲಾಗುತ್ತಿದೆಯೇ ? (ವಿವರ ಒದಗಿಸುವುದು)

## ಕೇಂದ್ರದ ವಿಶೇಷ ಅನುದಾನ ಮತ್ತು ವಿವೇಚನಾ ಅನುದಾನದ ಕುರಿತು

**ಡಾ: ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೪ (೧೦೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಒದಗಿಸಿರುವ ವಿಶೇಷ ಅನುದಾನ ಮತ್ತು ವಿವೇಚನಾ ಅನುದಾನವೆಷ್ಟು ; ಬೇರೆ ರಾಜ್ಯಗಳಿಗೆ ಹೋಲಿಸಿದರೆ ಈ ರೀತಿಯ ಅನುದಾನ ಪಡೆಯುವಲ್ಲಿ ಕರ್ನಾಟಕ ರಾಜ್ಯ ಎಷ್ಟನೇ ಸ್ಥಾನದಲ್ಲಿದೆ ; (ವಿವರ ಒದಗಿಸುವುದು)

(ಆ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಹೆಚ್ಚು ವಿಶೇಷ ಅನುದಾನ ಮತ್ತು ವಿವೇಚನಾ ಅನುದಾನವನ್ನು ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರದಿಂದ ವಿಶೇಷ ಅನುದಾನ ಮತ್ತು ವಿವೇಚನಾ ಅನುದಾನಗಳು ಕಡಿಮೆಯಾಗಿದ್ದಲ್ಲಿ, ಈ ಕೊರತೆಯನ್ನು ತುಂಬಲು ಯಾವ ಆರ್ಥಿಕ ಮೂಲಗಳನ್ನು ಅವಲಂಬಿಸಿದೆ ? (ವಿವರ ಒದಗಿಸುವುದು)

## BMRCL ಡಬಲ್ ಡೆಕ್ಕರ್ ಫ್ಲೈಓವರ್ ಕುರಿತು

**ಡಾ: ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯೫ (೧೦೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ರಾಗಿಗುಡ್ಡದಿಂದ ಕೇಂದ್ರ ರೇಷ್ಮೆ ಮಂಡಳಿವರೆಗೆ ನಿರ್ಮಾಣಗೊಂಡಿರುವ BMRCL ಮೆಟ್ರೋ ಡಬಲ್ ಡೆಕ್ಕರ್ ಫ್ಲೈಓವರ್ ಸಂಚಾರ ಸಮಸ್ಯೆಗಳನ್ನು ಪರಿಹರಿಸಲು ಉತ್ತಮ ಯೋಜನೆಯಾಗಿದ್ದು, ಈ ರೀತಿಯ ಮೆಟ್ರೋ ಡಬಲ್ ಡೆಕ್ಕರ್ ಫ್ಲೈಓವರ್‌ಗಳನ್ನು ಬೆಂಗಳೂರಿನಲ್ಲಿ ಎಷ್ಟು ಕಡೆ ನಿರ್ಮಿಸಲು ಯೋಜಿಸಲಾಗಿದೆ ; (ವಿವರ ಒದಗಿಸುವುದು)

(ಆ) ಈ ರೀತಿಯ ಮೆಟ್ರೋ ಡಬಲ್ ಡೆಕ್ಕರ್ ಫ್ಲೈಓವರ್‌ಗಳನ್ನು ನಿರ್ಮಿಸಲು ಪ್ರತಿ ಕಿ.ಮೀ.ಗೆ ಎಷ್ಟು ಹಣ ಖರ್ಚಾಗುತ್ತದೆ ; ಸಾಮಾನ್ಯ ಮೆಟ್ರೊ ಫ್ಲೈಓವರ್‌ಗಳನ್ನು ನಿರ್ಮಿಸಲು ಪ್ರತಿ ಕಿ.ಮೀ.ಗೆ ಎಷ್ಟು ಹಣ ಖರ್ಚಾಗುತ್ತದೆ ; ಸಾಮಾನ್ಯ ರಸ್ತೆ ಫ್ಲೈಓವರ್‌ಗಳನ್ನು ನಿರ್ಮಿಸಲು ಪ್ರತಿ ಕಿ.ಮೀ.ಗೆ ಎಷ್ಟು ಹಣ ಖರ್ಚಾಗುತ್ತದೆ ? (ವಿವರ ಒದಗಿಸುವುದು)

## ಪೊಲೀಸ್ ಸಿಬ್ಬಂದಿಗಳಿಗೆ ರಜೆ ನೀಡುವ ಕುರಿತು

**ಡಾ: ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೯೬ (೧೦೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹ ಇಲಾಖೆಯಡಿ ಕಾರ್ಯನಿರ್ವಹಿಸುವ ಪೊಲೀಸ್ ಸಿಬ್ಬಂದಿಗಳಿಗೆ ವಾರಕ್ಕೆ ಅಥವಾ ತಿಂಗಳೀಗೆ ಎಷ್ಟು ದಿನ ರಜೆ ದೊರೆಯುತ್ತದೆ ; (ಪದನಾಮವಾರು ವಿವರ ಒದಗಿಸುವುದು)

(ಆ) ಗೃಹ ಇಲಾಖೆಯಡಿ ಕಾರ್ಯನಿರ್ವಹಿಸುವ ಪೊಲೀಸ್ ಸಿಬ್ಬಂದಿಗಳಿಗೆ ಅಗತ್ಯಕ್ಕೆ ತಕ್ಕಂತೆ ರಜೆ ಸಿಗುತ್ತಿಲ್ಲವಾದಲ್ಲಿ, ಅದನ್ನು ಸರಿದೂಗಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಗೃಹ ಇಲಾಖೆಯ ದಕ್ಷತೆ ಮತ್ತು ಪಾರದರ್ಶಕತೆ ಹೆಚ್ಚಿಸಲು "ಪೊಲೀಸ್ ಸಿಬ್ಬಂದಿ ಸಾಮಾನ್ಯ ರಜಾ ನೀತಿ"ಯ ಅವಶ್ಯಕತೆ ಇದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

## ಕರ್ನಾಟಕದಲ್ಲಿ ಫಿಲಂ ಸಿಟಿ ನಿರ್ಮಾಣದ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೯೯೭ (೧೦೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಫಿಲಂ ಸಿಟಿ ಯೋಜನೆ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದು, ಈ ಕುರಿತು ಇದುವರೆಗೂ ಆಗಿರುವ ಪ್ರಗತಿ ಏನು ;

(ಆ) ಈ ಫಿಲಂ ಸಿಟಿ ಯಾವ ಸ್ಥಳದಲ್ಲಿ ರೂಪುಗೊಳ್ಳಿದೆ; ಹಾಗೂ ಇಲಾಖೆಯಿಂದ ಇದಕ್ಕಾಗಿ ಎಷ್ಟು ಹಣವನ್ನು ಮೀಸಲಿರಿಸಿದೆ ?

## ಕನ್ನಡ ಚಲನಚಿತ್ರಗಳಿಗೆ ಸಬ್ಸಿಡಿ ನೀಡುವ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೯೯೮ (೧೦೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಚಿತ್ರಗಳಿಗೆ ಸಬ್ಸಿಡಿ ನೀಡುವ ಯೋಜನೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿದ್ದು ಇತ್ತೀಚಿನ ವರ್ಷಗಳಲ್ಲಿ ಆಯಾ ವರ್ಷಗಳ ಚಲನಚಿತ್ರಗಳಿಗೆ ಆಯಾ ವರ್ಷವೇ ಸಬ್ಸಿಡಿ ಮಾಡುವ ನಿಯಮವನ್ನು ಪಾಲಿಸಲಾಗುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಆ) ಇದುವರೆಗೂ ಎಷ್ಟು ಚಲನಚಿತ್ರಗಳಿಗೆ ಸಬ್ಸಿಡಿ ನೀಡುವುದು ಬಾಕಿ ಇದೆ; ಅದರ ಒಟ್ಟು ಮೊತ್ತ ಎಷ್ಟು; ಅದನ್ನು ಯಾವಾಗ ಬಿಡುಗಡೆ ಮಾಡಲಾಗುತ್ತದೆ ?

## ಕ್ರೀಡಾ ಪಟುಗಳ ಸೌಲಭ್ಯ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೯೯ (೧೦೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಕ್ರೀಡಾಪಟುಗಳಿಗೆ ಸರ್ಕಾರದಿಂದ ಕೈಗೊಂಡ ಯೋಜನೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಜಿಲ್ಲೆಯ ಕ್ರೀಡಾಪಟುಗಳಿಗೆ ಇಲಾಖೆಯಿಂದ ನೀಡಿರುವ ಸೌಲಭ್ಯಗಳು ಯಾವುವು ;

(ಇ) ಕಳೆದ ೨ ವರ್ಷಗಳಲ್ಲಿ ಜಿಲ್ಲೆಯಿಂದ ಎಷ್ಟು ಕ್ರೀಡಾಪಟುಗಳು ರಾಜ್ಯ ಮತ್ತು ಅಂತರಾಜ್ಯ ಕ್ರೀಡೆಗಳಿಗೆ ಆಯ್ಕೆಯಾಗಿದ್ದಾರೆ ? (ವಿವರ ಒದಗಿಸುವುದು)

## ಪ್ರವಾಸೋದ್ಯಮ ಉತ್ತೇಜನ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೦ (೧೦೬೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಉತ್ತೇಜನ ನೀಡುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಪ್ರವಾಸೋದ್ಯಮ ಉತ್ತೇಜನಕ್ಕೆ ಸದರಿ ಜಿಲ್ಲೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಮಾಹಿತಿ ನೀಡುವುದು ?

## ಹೆಣ್ಣು ಮಕ್ಕಳ ಸಂಖ್ಯೆ ಇಳಿಕೆಯಾಗಿರುವ ಬಗ್ಗೆ

**ಶ್ರೀ ಸಿ.ಎಸ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೧ (೧೧೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪುರುಷರ ಜನಸಂಖ್ಯೆಗಿಂತ ಮಹಿಳೆಯರ ಜನಸಂಖ್ಯೆಯು ಇತ್ತೀಚಿನ ವರ್ಷಗಳಲ್ಲಿ ತುಂಬಾ ಇಳಿಮುಖವಾಗಿರುವುದು ನಿಜವಲ್ಲವೇ ; ಹಾಗಿದ್ದಲ್ಲಿ ಈ ರೀತಿಯ ಇಳಿಮುಖಕ್ಕೆ ಹೆಣ್ಣು ಭ್ರೂಣ ಹತ್ಯೆಗಳೇ ಕಾರಣವಲ್ಲವೇ ;

(ಆ) ರಾಜ್ಯದಲ್ಲಿ ಹಾಲಿ ಲಕ್ಷಾಂತರ ಯುವಕರು, ಹೆಣ್ಣುಗಳ ಅಭಾವದಿಂದಾಗಿ ವಿವಾಹ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಸಾಮಾಜಿಕ ಸಮಸ್ಯೆಯ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಮದುವೆಯಿಂದ ವಂಚಿತರಾಗಿರುವ ಹಳ್ಳಿಗಾಡಿನ ಯುವಕರು ಉದ್ಯೋಗವು ಸಹ ಇಲ್ಲದೆ ನಿರುದ್ಯೋಗಿಗಳಾಗಿ ಆರ್ಥಿಕ ಸಮಸ್ಯೆ ಎದುರಿಸುತ್ತಿದ್ದು ಇವರುಗಳಿಗೆ ವಯೋಮಾನ ತಾರತಮ್ಯ ವಿಲ್ಲದೆ ಕೂಡಲೇ ಮಾಶಾಸನ ನೀಡಲು ಕೈಗೊಳ್ಳುವ ಕ್ರಮವೇನು ?

## ಉಚಿತ ಭಾಗ್ಯಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೨ (೧೧೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ತ್ರೀ ಶಕ್ತಿ ಉಚಿತ ಬಸ್ಸು ಸೇವೆ ಉಚಿತ ವಿದ್ಯುತ್ ಇತರ ಯಾವ ಯಾವ ಉಚಿತ ಯೋಜನೆಗಳಿಗೆ ಕಳೆದ ಒಂದು ವರ್ಷದಿಂದ ಸರ್ಕಾರ ಯಾವ ಯಾವ ಬಾಬ್ತುಗಳಿಂದ ಎಷ್ಟೆಷ್ಟು ಕೋಟಿ ಹಣವನ್ನು ಯಾವ ಯಾವ ಇಲಾಖಾ ಅನುದಾನದಿಂದ ಪಡೆದು ಬಿಡುಗಡೆ ಮಾಡಿದೆ ; (ಪೂರ್ಣ ವಿವರ ಒದಗಿಸುವುದು)

(ಆ) ಬೇರೆ ಇಲಾಖೆ ಅನುದಾನವನ್ನು ಉಚಿತ ಭಾಗ್ಯಕ್ಕೆ ನೀಡಿ ಸಮಾಜದ ಶೋಷಿತ ವರ್ಗಕ್ಕೆ ಅನ್ಯಾಯ ಹಾಗೂ ವಂಚನೆ ಮಾಡಿರುವುದು ಸರಿಯೇ ;

(ಇ) ೬೦ ವರ್ಷ ಮೇಲ್ಪಟ್ಟ ಎಲ್ಲಾ ಹಿರಿಯ ನಾಗರೀಕರಿಗೆ ಕೆ.ಎಸ್. ಆರ್. ಟಿ. ಸಿ ಹಾಗೂ ಬಿ.ಎಂ.ಟಿ.ಸಿ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಕಾನೂನು ಸುವ್ಯವಸ್ಥೆ ವಿಫಲತೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೩ (೧೧೩೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದೀಚೆಗೆ ಕೊಲೆ, ಸುಲಿಗೆ, ದರೋಡೆ, ಕಳ್ಳತನ, ಗಲಭೆ, ಅಪರಹಣ, ಗುಂಪು ಘರ್ಷಣೆಗಳು ಎಲ್ಲೆಲ್ಲಿ ಎಷ್ಟೆಷ್ಟು ಪ್ರಕರಣಗಳು ನಡೆದಿರುತ್ತವೆ ; (ಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಸಮಾಜ ಘಾತಕ ಕೃತ್ಯಗಳಿಂದ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಗಿದ್ದು ಇದರ ನಿವಾರಣೆಗೆ ಗೃಹ ಇಲಾಖಾ ಅಧಿಕಾರಿಗಳು ಸಂಪೂರ್ಣ ವಿಫಲವಾಗಿರುವುದು ನಿಜವೇ ;

(ಇ) ಕಾನೂನು ಸುವ್ಯವಸ್ಥೆ ಕುಸಿಯಲು ಗುಪ್ತಚರ ಇಲಾಖೆ ಹಾಗೂ ಇತರ ವಿಭಾಗಗಳ ವಿಫಲತೆಯೂ ಮುಖ್ಯ ಕಾರಣವಲ್ಲವೆ ;

(ಈ) ಇವುಗಳ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## ಗ್ರೇಟರ್ ಬೆಂಗಳೂರು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೪ (೧೧೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರನ್ನು ಗ್ರೇಟರ್ ಬೆಂಗಳೂರನ್ನಾಗಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಂಗಳೂರಿನ ಕುಡಿಯುವ ನೀರಿನ ಸಮಸ್ಯೆ, ನೈರ್ಮಲ್ಯ ಸಮಸ್ಯೆ, ಕಸದ ಸಮಸ್ಯೆ ಉತ್ತಮ ರಸ್ತೆಗಳಿಲ್ಲದೆ ಗುಂಡಿ ಗೋಚರಿಸಿ ಸಮಸ್ಯೆ ಮಳೆ ನೀರು ಚರಂಡಿ ಹೊಳೆತ್ತಲು ವಿಫಲವಾಗಿರುವ ಹಾಗೂ ಇಂತಹ ನೂರಾರು ಸಮಸ್ಯೆಗಳನ್ನು ಬಗೆಹರಿಸಲಾದ ಬಿ.ಬಿ.ಎಂ.ಪಿ ಅಧಿಕಾರಿಗಳಿಗೆ ಗ್ರೇಟರ್ ಬೆಂಗಳೂರು ಅಧಿಕಾರ ನೀಡಿದ್ದಲ್ಲಿ, ನಗರದಲ್ಲಿ ಇನ್ನಸ್ಟು ಸಮಸ್ಯೆಗಳು ಹೆಚ್ಚಾಗಲಿದ್ದು ಇದರ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಇ) ಗ್ರೇಟರ್ ಬೆಂಗಳೂರು ಯೋಜನೆಯ ರೂಪರೇಷೆ ಹಾಗೂ ಅಧಿಕಾರ ವ್ಯಾಪ್ತಿಯು ಏನು ? (ಪೂರ್ಣ ವಿವರ ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಕೆರೆಯ ಒತ್ತುವರಿ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೫ (೧೦೪೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಒತ್ತುವರಿಯಾದ ಕೆರೆಗಳ ಸಂಖ್ಯೆ ಎಷ್ಟು; ಯಾವ ಯಾವ ಕೆರೆಗಳು ಒತ್ತುವರಿಯಾಗಿವೆ ; ಎಷ್ಟು ವಿಸ್ತೀರ್ಣ ಒತ್ತುವರಿಯಾಗಿದೆ ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಯವರ ನೇತೃತ್ವದಲ್ಲಿ ಕೆರೆ ಸಂರಕ್ಷಣಾ ಪ್ರಾಧಿಕಾರ ರಚಿಸಲಾಗಿದೆಯೇ ಸಮಿತಿ ರಚನೆ ಆಗಿದ್ದಲ್ಲಿ ಇದುವರೆಗೂ ಎಷ್ಟು ಸಭೆಗಳನ್ನು ಮಾಡಲಾಗಿದೆ ; ಹಾಗೂ ಯಾವ ಯಾವ ಕೆರೆ ಒತ್ತುವರಿಗಳ ಬಗ್ಗೆ ಚರ್ಚೆಯಾಗಿದೆಯೇ ; (ವಿವರ ನೀಡುವುದು)

(ಇ) ಒತ್ತುವರಿಯಾದ ಕೆರೆಗಳ ಸಂರಕ್ಷಣೆಗೆ ತೆರವುಗೊಳಿಸುವಂತೆ ಪ್ರಾಧಿಕಾರಿಕ್ಕೆ ನೋಟೀಸ್ ನೀಡಿದೆಯೇ ? (ನೋಟೀಸ್ ಪ್ರತಿ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿರುವ ಸನ್ನತಿ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೬ (೧೦೪೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಸನ್ನತಿ ನೀರಾವರಿ ಯೋಜನೆಯ ಪ್ರಸ್ತುತ ಇರುವ ವಸ್ತು ಸ್ಥಿತಿಯೇನು ; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಆ) ಮುಖ್ಯ ಕಾಲುವೆ, ಉಪಕಾಲುವೆ, ಜಮೀನಿನ ಕಾಲುವೆಗಳ ಉದ್ದವೆಷ್ಟು ;

(ಇ) ಸರ್ಕಾರವು ಈ ನೀರಾವರಿ ಯೋಜನೆಯಿಂದ ಜಿಲ್ಲೆಯಲ್ಲಿರುವ ಎಷ್ಟು ಕೆರೆಗಳನ್ನು ಭರ್ತಿ ಮಾಡುವ ಉದ್ದೇಶ ಹೊಂದಿದೆ ; ಆ ಕೆರೆಗಳು ಯಾವುವು ; (ವಿವರ ನೀಡುವುದು)

(ಈ) ಸನ್ನತಿ ನೀರಾವರಿ ಯೋಜನೆ ಪೂರ್ಣಗೊಂಡ ನಂತರ ಎಷ್ಟು ಹೇಕ್ಟರ್ ಪ್ರದೇಶದ ಜಮೀನಿಗೆ ನೀರು ಒದಗಿಸಲಾಗುತ್ತದೆ ; ಪ್ರಸ್ತುತ ಎಷ್ಟು ಜಮೀನಿಗೆ ನೀರು ಲಭ್ಯವಾಗುತ್ತಿದೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಳೆದ ೨೦ ವರ್ಷಗಳಲ್ಲಿ ನೀರಾವರಿ ಯೋಜನೆಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦೭ (೧೦೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಳೆದ ೨೦ ವರ್ಷಗಳಿಂದ ಇಲ್ಲಿಯವರೆಗೂ ನೀರಾವರಿ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ಹಾಗೂ ಖರ್ಚಾದ ಅನುದಾನ ಎಷ್ಟು ; (ವಾರ್ಷಿಕವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಿಗೆ ನೀರಾವರಿ ಯೋಜನೆಗೆಂದು ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಈ ನೀರಾವರಿ ಯೋಜನೆಯಿಂದ ಎಷ್ಟು ಹೆಕ್ಟರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ; ನೀರಾವರಿ ಸೌಲಭ್ಯ ಕಲ್ಪಿಸಲು ವಿಫಲವಾದಲ್ಲಿ ಇದಕ್ಕೆ ಇರುವ ಅಡೆ-ತಡೆಗಳೇನು ? (ವಿವರ ನೀಡುವುದು)

## ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೧೦೦೮ (೫೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೪ ಪೂರ್ವದಲ್ಲಿ "Promotion on purely temporary basis ಎಂದು ಮುಂಬಡ್ತಿಯನ್ನು ಯಾವ ನಿಯಮಗಳಡಿ ನೀಡಲು ಅವಕಾಶಗಳನ್ನು ಕಲ್ಪಿಸಲಾಗಿದೆ;

(ಆ) ೧೯೯೪ ಪೂರ್ವದಲ್ಲಿ "Promotion on purely temporary basis ಎಂದು ಮುಂಬಡ್ತಿ ಹೊಂದಿರುವ ನೌಕರರನ್ನು ಜ್ಯೇಷ್ಠತೆಗೆ ಪರಿಗಣಿಸಲು ಕರ್ನಾಟಕ ಸಿವಿಲ್ ಸೇವಾ (ಜ್ಯೇಷ್ಠತೆ) ನಿಯಮಾವಳಿ ೧೯೫೭ರ ಯಾವ ನಿಯಮಗಳಡಿ ಅವಕಾಶ ಕಲ್ಪಿಸಲಾಗಿದೆ ?

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 0-57/400 ಪ್ರತಿಗಳು/19-07-2024